ಸಂಪುಟ: 13 Volume | ಸಂಚಿಕೆ: 344 Issue | ಪುಟಗಳು 08 Pages | ಭಾನುವಾರ 08 ಮಾರ್ಚ್ 2026 | ₹6 | PRGINO.120927 (RNINO: KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

ಸಂಪಾದಕರು: ರಮೇಶ ರೆಡ್ಡಿ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

**ಬೆಳಗು**
ಅನುಭವ ಎಂಬ ಗುರುವಿಗೆ ನಾವು ಸಲ್ಲಿಸಬೇಕಾಗಿರುವ ದಕ್ಷಿಣೆ ಅಪಾರವಿದೆ.
–ಫ್ರಾಂಕ್ಲಿನ್

ಶಾಲೆಯ ಮಕ್ಕಳಿಗೆ ಬೀಳ್ಕೊಡುಗೆ ಸಮಾರಂಭ 4 | ಸಮಸ್ಯೆಗಳಿಗೆ ಸ್ಪಂದಿಸುವುದೇ ನಮ್ಮ ಗುರಿ 6 | ಕಲಿತ ವಿದ್ಯೆ ಬಾಳಿಗೆ ಬೆಳಕಾಗಬೇಕು 7

## ಮಲ್ಲಮ್ಮ ನುಡಿ – ಯುಗಾದಿ ವಿಶೇಷಾಂಕ- 2026

ಸದಾ ಹೊಸತನಕ್ಕೆ ಹೆಸರಾದ ಪ್ರತಿಷ್ಠಿತ ಪ್ರಾದೇಶಿಕ ಮಲ್ಲಮ್ಮನುಡಿ ದಿನಪತ್ರಿಕೆಯು ಈ ಬಾರಿ ಯುಗಾದಿ ವಿನೂತನ ವಿಶೇಷಾಂಕ–2026 ಹೊರತರಲಿದೆ. ಇದರ ಸಿದ್ಧತೆಯು ಈಗಾಗಲೇ ಆರಂಭವಾಗಿದೆ. ಇದರ ಪ್ರಯುಕ್ತ ವಿಶೇಷ ಸಂಚಿಕೆಗಾಗಿ ಲೇಖಕರಿಂದ ಬರಹಗಳನ್ನು ಆಹ್ವಾನಿಸುತ್ತಿದೆ.


**ಲೇಖಕರು ಪಾಲಿಸಬೇಕಾದ ಸೂಚನೆಗಳು**

- ನನ್ನೂರು ಹಲವು ವೈಶಿಷ್ಟ್ಯಗಳ ತವರು: 200 ಪದ ಮಿತಿ
- ನನ್ನ ಜೀವನದ ಟರ್ನಿಂಗ್ ಪಾಯಿಂಟ್: 200 ಪದಮಿತಿ
- ನಾನು ಪ್ರೀತಿಸಿದೆ. ಆದರೆ ಆಕೆಗೆ ಹೇಳಲೇ ಇಲ್ಲ, ಸ್ವ ಅನುಭವ: 200 ಪದ ಮಿತಿ
- ಕಥೆಗಳು: 600 ಪದಮಿತಿ
- ಯಾವುದೇ ವಿಷಯ ಕುರಿತ ಲಲಿತ ಪ್ರಬಂಧ: 300 ಪದ
- ಕವನ 24 ಸಾಲು ಮೀರದಿರಲಿ.


► ಲೇಖನಗಳನ್ನು ಕಳುಹಿಸಲು ಅಂತಿಮ ದಿನಾಂಕ: 5–03–2026

► ಬರಹಗಳ ಆಯ್ಕೆಯಲ್ಲಿ ಸಂಚಿಕೆ ಸಂಪಾದಕರ ತೀರ್ಮಾನವೇ ಅಂತಿಮ.

ಈ ಮೇಲ್: mallammanudi@gmail.com




ವಿಜಯಪುರದಲ್ಲಿ ಮಲ್ಲಮ ನುಡಿ ಪತ್ರಿಕೆಯ ಸುದ್ದಿಗಳನ್ನು ಓದುತ್ತಿರುವ ವಿದ್ಯಾರ್ಥಿ..!




ಪರಿಶಿಷ್ಟ ಸಮುದಾಯದ ಒಳಮೀಸಲಾತಿ ಆಯೋಗದ ಅಧ್ಯಕ್ಷರೂ ಆದ ನಾಗಮೋಹನದಾಸ್ ಅವರು ಡಿಸಿಎಂ ಡಿ ಕೆ ಶಿವಕುಮಾರ್ ಅವರನ್ನು ಕುಮಾರಪಾರ್ಕ್‌ನ ಸರಕಾರಿ ಗೃಹ ಕಚೇರಿಯಲ್ಲಿ ಭೇಟಿ ಮಾಡಿ ಸಮಾಲೋಚನೆ ನಡೆಸಿದರು. ಇದೇ ಸಂದರ್ಭದಲ್ಲಿ ನಾಗಮೋಹನದಾಸ್ ಅವರು ತಾವು ರಚಿಸಿರುವ 'ಸಂವಿಧಾನ ಮತ್ತು ವಚನಗಳು' ಕೃತಿಯನ್ನು ಡಿಸಿಎಂ ಅವರಿಗೂ, ಡಿಸಿಎಂ ಅವರು ತಾವು ಬರೆದಿರುವ 'ನೀರಿನ ಹೆಜ್ಜೆ' ಕೃತಿಯನ್ನು ನಾಗಮೋಹನದಾಸ್ ಅವರಿಗೂ ನೀಡಿದರು.

## ಸಾಲದ ಪ್ರಮಾಣ ಹೆಚ್ಚಳ: ಸತ್ಯಕ್ಕೆ ದೂರ

• ಮಲ್ಲಮ್ಮ ನುಡಿ ವಾರ್ತೆ ಮೈಸೂರು

ಇಡೀ ರಾಜ್ಯದ ಬೆಳವಣಿಗೆಯನ್ನು ಬಜೆಟ್ ನಲ್ಲಿ ನಿರೀಕ್ಷಿಸಬಹುದಾಗಿದ್ದು, ಸಮಾಜದ ಎಲ್ಲ ವರ್ಗದ ಜನರಿಗೂ ಸಮಾನ ಅವಕಾಶ ನೀಡುವುದೇ ಈ ಬಾರಿಯ ಬಜೆಟ್‌ನ ಉದ್ದೇಶವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಪಿಲ್ಲಹಳ್ಳಿ ಗ್ರಾಮದ ಹೆಲಿಪ್ಯಾಡ್ ನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

**ಪ್ರಧಾನಿ ಮೋದಿಯವರ ಅವಧಿಯಲ್ಲಿ ದೇಶದ ಸಾಲ 218 ಲಕ್ಷ ಕೋಟಿ:** ಬಿಜೆಪಿಯವರು ಬಜೆಟ್ ಬಗ್ಗೆ ಟೀಕೆ ಮಾಡುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಬಿಜೆಪಿಯ ಪ್ರಧಾನಿ ಮೋದಿಯವರು ಸಾಲ ಮಾಡಿದ್ದಾರೆ. ಸಾಲ ಮಾಡದೇ ಅಭಿವೃದ್ಧಿ ಸಾಧ್ಯವಿಲ್ಲ. ಆರ್ಥಿಕ ಹೊಣೆಗಾರಿಕೆ



ಕಾಯ್ದೆ ತಿಳಿಸಿರುವ ಮಾನದಂಡಗಳ ಮಿತಿಯಲ್ಲಿ ಸಾಲದ ಪ್ರಮಾಣ ಇದೆ. ಈ ಕಾಯ್ದೆಯಂತೆ ಸಾಲವು ಶೇ. 25 ರಷ್ಟಿರಬೇಕಿದ್ದು, ನಮ್ಮ ಸಾಲದ ಪ್ರಮಾಣ 24.94 ಇದ್ದು, ಮಿತಿಯೊಳಗೇ ಇದೆ. ಕೇಂದ್ರದ ಸಾಲದ ಪ್ರಮಾಣ 218 ಲಕ್ಷ ಕೋಟಿ ಇದೆ. ಮೋದಿಯವರು ಅಧಿಕಾರಕ್ಕೆ ಬಂದ ನಂತರ 165 ಲಕ್ಷ ಕೋಟಿ ಸಾಲವನ್ನು ಮಾಡಿದ್ದಾರೆ ಎಂದು ಮುಖ್ಯಮಂತ್ರಿಗಳು ವಿವರಿಸಿದರು.

## ವಿರೋಧ ಪಕ್ಷಕ್ಕೂ ಆಡಳಿತ ಪಕ್ಷದಷ್ಟೇ ಜವಾಬ್ದಾರಿ

• ಮಲ್ಲಮ್ಮ ನುಡಿ ವಾರ್ತೆ ಬ್ಯಾಟರಾಯನಪುರ

ಆಡಳಿತವನ್ನು ಸರಿದಾರಿಯಲ್ಲಿ ಕೊಂಡೊಯ್ಯುವ ದಿಸೆಯಲ್ಲಿ ವಿರೋಧ ಪಕ್ಷಕ್ಕೂ ಸಹ ಆಡಳಿತ ಪಕ್ಷದಷ್ಟೇ ಜವಾಬ್ದಾರಿ ಇರುತ್ತದೆ ಎಂದು ಬಿಜೆಪಿ ರಾಜ್ಯ ಕಾರ್ಯದರ್ಶಿ ಎಚ್ ಸಿ ತಮ್ಮೇಶ್ ಗೌಡ ಅಭಿಪ್ರಾಯ ಪಟ್ಟರು.

ಬ್ಯಾಟರಾಯನಪುರ ಬಿಜೆಪಿ ನಗರ ಮಂಡಲ ವತಿಯಿಂದ ಕ್ಷೇತ್ರದ ಖಾಸಗಿ ಹೋಟೆಲ್ ನಲ್ಲಿ ಆಯೋಜಿಸಿದ್ದ ಪಕ್ಷದ ಕಾರ್ಯಕಾರಿಣಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು 'ಆಡಳಿತದಲ್ಲಿ ಆಗುವ ಅನಾಹುತಗಳನ್ನು ನೋಡಿಕೊಂಡು ಸುಮ್ಮನೆ ಕೂರುವುದು ವಿರೋಧ ಪಕ್ಷದ ವರ್ತನೆಯಾಗಬಾರದು, ಆಡಳಿತ ದಿಕ್ಕು ತಪ್ಪಿದಾಗ ಅದರ ವಿರುದ್ಧ ಗಟ್ಟಿ ಧ್ವನಿ ಎತ್ತುವುದು, ಹೋರಾಟಗಳ ಮೂಲಕ ಆಡಳಿತವನ್ನು ಸರಿದಾರಿಗೆ



ತರುವುದು ವಿರೋಧ ಪಕ್ಷಗಳ ಜವಾಬ್ದಾರಿಯಾಗಿರುತ್ತದೆ. ಬ್ಯಾಟರಾಯನಪುರ ಕ್ಷೇತ್ರದಲ್ಲಿ ವಿರೋಧ ಪಕ್ಷದ ನಾಯಕನಾಗಿ ಆಡಳಿತ ಪಕ್ಷದ ವೈಫಲ್ಯಗಳ ವಿರುದ್ಧ ಗಟ್ಟಿಯಾದ ಧ್ವನಿ ಎತ್ತುವುದು ಹಾಗೂ ಹೋರಾಟಗಳನ್ನು ರೂಪಿಸುವ ಮೂಲಕ ಆಡಳಿತ ಪಕ್ಷದ ಕಿವಿ ಹಿಂಡುವ ಕೆಲಸವನ್ನು ಪ್ರಾಮಾಣಿಕವಾಗಿ ಕೈಗೊಂಡಿದ್ದೇನೆ, ಈ ಬಗ್ಗೆ ಆತ್ಮ ತೃಪ್ತಿ ಇದೆ ಎಂದು ಹೇಳಿದರು.

# ಆನ್ ಲೈನ್ ಆಸ್ತಿ ನೋಂದಣಿ..!

### ಮನೆ ಖರೀದಿ ಪ್ರಕ್ರಿಯೆ ಸುಲಭ | ಯೋಜನೆ ಹಸ್ತಾಂತರವನ್ನು ವೇಗವಾಗಿ ಪೂರ್ಣಗೊಳಿಸಲು ಸಹಾಯ ಮಾಡುವ ನಿರೀಕ್ಷೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು


ಕರ್ನಾಟಕ ಸರ್ಕಾರವು Kaveri 3.0 ವ್ಯವಸ್ಥೆಯ ನವೀಕರಿಸಿದ ಆವೃತ್ತಿಯ ಮೂಲಕ ಆನ್ ಲೈನ್ ಆಸ್ತಿ ನೋಂದಣಿ ವ್ಯವಸ್ಥೆಯನ್ನು ಪರಿಚಯಿಸಲು ಯೋಜಿಸಿದ್ದು, ಇದು ಮನೆ ಖರೀದಿ ಪ್ರಕ್ರಿಯೆಯನ್ನು ಸುಲಭಗೊಳಿಸಿ, ದಾಖಲೆಗಳ ಕೆಲಸವನ್ನು ಕಡಿಮೆ ಮಾಡಿ, ಡೆವಲಪರ್ಗಳಿಗೆ ಯೋಜನೆ ಹಸ್ತಾಂತರವನ್ನು ವೇಗವಾಗಿ ಪೂರ್ಣಗೊಳಿಸಲು ಸಹಾಯ ಮಾಡುವ ನಿರೀಕ್ಷೆಯಿದೆ.

**ಸಂಪೂರ್ಣ ಡಿಜಿಟಲ್:** ರಾಜ್ಯ ಬಜೆಟ್ ಮಂಡಿಸಿದ ಸಿಎಂ ಸಿದ್ದರಾಮಯ್ಯ ಅವರು, ಸುಮಾರು 65 ಕೋಟಿ ರೂಪಾಯಿ ವೆಚ್ಚದ AI ಆಧಾರಿತ ಕಾವೇರಿ 3.0 ಪ್ಲಾಟ್‌ಫಾರ್ಮ್‌ನ್ನು ಆರಂಭಿಸಲಾಗುವುದು ಎಂದು ಹೇಳಿದರು. ಇದು ಕಾಗದರಹಿತ ಮತ್ತು ಸಂಪೂರ್ಣ ಡಿಜಿಟಲ್ ಆಸ್ತಿ ನೋಂದಣಿ ವ್ಯವಸ್ಥೆ ಒದಗಿಸುವ ಉದ್ದೇಶ ಹೊಂದಿದೆ.

ಈ ಸುಧಾರಣೆಯ ಭಾಗವಾಗಿ 207 ಉಪ–ನೋಂದಣಾಧಿಕಾರಿ ಕಚೇರಿಗಳನ್ನು ಡಿಜಿಟಲೀಕರಣಗೊಳಿಸಲಾಗುತ್ತದೆ ಹಾಗೂ "ಮೆಗಾ ನೋಂದಣಿ ಕೇಂದ್ರಗಳು" ಸ್ಥಾಪಿಸಲು ಯೋಜಿಸಲಾಗಿದೆ. 2025–26 ಹಣಕಾಸು ವರ್ಷದಲ್ಲಿ ಸ್ಟಾಂಪ್ ಮತ್ತು ನೋಂದಣಿ ಆದಾಯವು 22,629 ಕೋಟಿ ರೂಪಾಯಿ ತಲುಪಿದ್ದು, ಇದು 12.3% ಏರಿಕೆ ಕಂಡಿದೆ.

### ಒಂದೇ ಆನ್ಲೈನ್ ಪ್ರಕ್ರಿಯೆ

ಹೊಸ ವ್ಯವಸ್ಥೆಯು ಈಗಿನ ಕಾವೇರಿ ವ್ಯವಸ್ಥೆಯ ಕಾರ್ಯಾಚರಣಾ ಮಿತಿಗಳನ್ನು ನಿವಾರಿಸಿ, ಆಸ್ತಿ ನೋಂದಣಿ ಪ್ರಕ್ರಿಯೆಯನ್ನು ವೇಗವಾದ, ಪಾರದರ್ಶಕ ಮತ್ತು ಸುಲಭವಾಗಿ ಲಭ್ಯವಾಗುವಂತೆ ಮಾಡುವ ಉದ್ದೇಶ ಹೊಂದಿದೆ. ಸ್ಟಾಂಪ್ ರಚನೆ, ದಾಖಲೆ ಕರಡು, ನೋಂದಣಿ, ಡಿಜಿಟಲ್ ಸಂಗ್ರಹಣೆ, ಡಾಕ್ಯುಮೆಂಟ್ ಹಂಚಿಕೆ ಮತ್ತು ಪಡೆಯುವಿಕೆ ಸೇರಿದಂತೆ ಹಲವು ಕಾರ್ಯಗಳನ್ನು ಒಂದೇ ಆನ್ಲೈನ್ ಪ್ರಕ್ರಿಯೆಯಲ್ಲಿ ಒಗ್ಗೂಡಿಸಲಾಗುತ್ತದೆ.




### ತಾತ್ಕಾಲಿಕ ಹೊಂದಾಣಿಕೆ..!

ಇದರ ಜೊತೆಗೆ, ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಮಾದರಿಯಲ್ಲಿ ಐದು ಮೆಗಾ ನೋಂದಣಿ ಕೇಂದ್ರಗಳನ್ನು ಸ್ಥಾಪಿಸಲು ಯೋಜಿಸಲಾಗಿದೆ. ಆರಂಭದಲ್ಲಿ ಕೆಲವು ತಾತ್ಕಾಲಿಕ ಹೊಂದಾಣಿಕೆಗಳಿದ್ದರೂ, ಸಂಪೂರ್ಣ ಡಿಜಿಟಲ್ ಪ್ರಕ್ರಿಯೆ ಆಸ್ತಿ ವ್ಯವಹಾರಗಳನ್ನು ಹೆಚ್ಚು ವೇಗವಾಗಿ ಮತ್ತು ಸುಲಭವಾಗಿ ಮಾಡಲಿದೆ ಎಂದು ಪೂರ್ವಾಂಕರ ಲಿಮಿಟೆಡ್ ನ ಮಲ್ಲಣ್ಣ ಸಸಲು ಹೇಳಿದ್ದಾರೆ. ಈ ಸುಧಾರಣೆಗಳು ಕರ್ನಾಟಕದ ಗೃಹ ಮಾರುಕಟ್ಟೆ ವಿಶೇಷವಾಗಿ ಬೆಂಗಳೂರಿನಲ್ಲಿ ರಿಯಲ್ ಎಸ್ಟೇಟ್ ಬೇಡಿಕೆ ಹೆಚ್ಚುತ್ತಿರುವ ಸಂದರ್ಭದಲ್ಲಿ ಕಂಡುಬಂದಿದೆ. 2025ರಲ್ಲಿ ಸುಮಾರು 55,373 ವಸತಿ ಘಟಕಗಳು ಮಾರಾಟವಾಗಿದ್ದು, ಇದು ಭಾರತದಲ್ಲಿನ ದೊಡ್ಡ ಗೃಹ ಮಾರುಕಟ್ಟೆಗಳಲ್ಲಿ ಒಂದಾಗಿದೆ.

### ಮಧ್ಯವರ್ತಿಗಳ ಹಾವಳಿ ತಡೆ

ಈ ಬಜೆಟ್ ರಾಜ್ಯದ 'Ease of Doing Business' ಗುರಿಗೆ ಬಲ ನೀಡುತ್ತದೆ. ಕಾವೇರಿ 3.0 ಪಾರದರ್ಶಕತೆಯನ್ನು ಹೆಚ್ಚಿಸಿ, ಮಧ್ಯವರ್ತಿಗಳ ಅವಲಂಬನೆಯನ್ನು ಕಡಿಮೆ ಮಾಡಿ, ವಿವಿಧ ಇಲಾಖೆಗಳ ನಡುವೆ ಸಂಯೋಜಿತ ಆಸ್ತಿ ನಿರ್ವಹಣೆಯೊಂದಿಗೆ ಆನ್ ಲೈನ್ ನೋಂದಣಿಯನ್ನು ಸಾಧ್ಯವಾಗಿಸುತ್ತದೆ ಎಂದು ಹೇಳಿದ್ದಾರೆ. ಸರ್ಕಾರವು ಮತ್ತೊಂದು ತಿದ್ದುಪಡಿಯನ್ನೂ ಪ್ರಸ್ತಾಪಿಸಿದ್ದು, ನೋಟಿಫೈ ಮಾಡಿದ ಖಾಸಗಿ ಸಂಸ್ಥೆಗಳು ರಿಮೋಟ್ ನೋಂದಣಿ ಪ್ರಕ್ರಿಯೆಯನ್ನು ನೆರವೇರಿಸಲು ಅವಕಾಶ ನೀಡಬಹುದು.

### ಆಸ್ತಿ ವ್ಯವಹಾರ ಸುಲಭ

ನೋಂದಣಿ ಪ್ರಕ್ರಿಯೆ ಸರಳಗೊಳ್ಳುವುದರಿಂದ ಆಸ್ತಿ ವ್ಯವಹಾರಗಳ ಸಂಖ್ಯೆಯೂ ಹೆಚ್ಚುವ ನಿರೀಕ್ಷೆಯಿದೆ. ಇದರ ನಡುವೆ, ರಾಜ್ಯದ ಸ್ಟಾಂಪ್ ಮತ್ತು ನೋಂದಣಿ ಇಲಾಖೆಯ ಆದಾಯವೂ ಏರಿಕೆಯಾಗುತ್ತಿದೆ. 2025–26 ಹಣಕಾಸು ವರ್ಷದ ಫೆಬ್ರವರಿವರೆಗೆ 22,629 ಕೋಟಿ ರೂಪಾಯಿ ಸಂಗ್ರಹವಾಗಿದ್ದು, ಇದು ವರ್ಷದಿಂದ ವರ್ಷಕ್ಕೆ 12.3% ಹೆಚ್ಚಳವಾಗಿದೆ. 2026–27 ಹಣಕಾಸು ವರ್ಷಕ್ಕೆ ರೂ.29,000 ಕೋಟಿ ಆದಾಯ ಗುರಿ ನಿಗದಿಪಡಿಸಲಾಗಿದೆ. ತಜ್ಞರ ಪ್ರಕಾರ, ಸಂಪೂರ್ಣ ಡಿಜಿಟಲ್ ನೋಂದಣಿ ವ್ಯವಸ್ಥೆ ಜಾರಿಗೆ ಬಂದರೆ ಮಧ್ಯವರ್ತಿಗಳ ಅವಲಂಬನೆ ಕಡಿಮೆಯಾಗುವ ಸಾಧ್ಯತೆ ಇದೆ, ಇದು ವಿಶೇಷವಾಗಿ ಸಂಸ್ಥಾತ್ಮಕ ಹೂಡಿಕೆದಾರರು ಹಾಗೂ ವಿದೇಶದಲ್ಲಿ ವಾಸಿಸುವ ಭಾರತೀಯರಿಗೆ ಆಸ್ತಿ ವ್ಯವಹಾರಗಳನ್ನು ಸುಲಭಗೊಳಿಸುತ್ತದೆ.

## ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಲೋಕಸಭಾ ಕ್ಷೇತ್ರದ ಗ್ರಾಮೀಣ ಅಭಿವೃದ್ಧಿಗೆ ಮತ್ತೊಂದು ಮಹತ್ವದ ಹೆಜ್ಜೆಯಾಗಿ, ಭಾಲ್ಕಿ ತಾಲೂಕಿನ ಇಂಚೂರ್ –ಲಾಧಾ – ಕುಂಟೆಗಾವ್ –ಮೊರಂಬಿ ಗ್ರಾಮದವರೆಗೆ ಮುಖ್ಯ ರಸ್ತೆಗೆ ಸೇರುವ ಸುಮಾರು 9 ಕಿಲೋಮೀಟರ್ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಇಂದು ಭೂಮಿ ಪೂಜೆ ನೆರವೇರಿಸಲಾಯಿತು. ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಈಶ್ವರ ಖಂಡ್ರೆ ಅವರ ಸುಮಾರು ₹9 ಕೋಟಿ ಅನುದಾನದಡಿ, ಗ್ರಾಮ ರಸ್ತೆಯನ್ನು ಎಂ.ಡಿ.ಆರ್ ರಸ್ತೆಯಾಗಿ ಪರಿವರ್ತಿಸಿ, ಏಕಮಾರ್ಗ ರಸ್ತೆಯನ್ನು



ಎರಡು ಮಾರ್ಗದ ರಸ್ತೆಯಾಗಿ ಅಭಿವೃದ್ಧಿಪಡಿಸುವ ಕಾಮಗಾರಿಗೆ ಸಂಸದರಾದ ಶ್ರೀ ಸಾಗರ ಖಂಡ್ರೆ ಇಂಚೂರ್ ಗ್ರಾಮದಲ್ಲಿ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

## ಜಾತ್ರಾ ಮಹೋತ್ಸವಕ್ಕೆ ಆಹ್ವಾನ




• ಮಲ್ಲಮ್ಮ ನುಡಿ ವಾರ್ತೆ ಕನಕಗಿರಿ

ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲೂಕಿನ (ಸುವರ್ಣಗಿರಿ) ಜಾತ್ರಾ ಮಹೋತ್ಸವದ ದಿನಾಂಕ 02–03–2026ರಿಂದ ಪ್ರಾರಂಭವಾಗಿ 15–03–2026ರವರೆಗೆ ನಿತ್ಯವು ಉತ್ಸವಗಳು ನಡೆಯಲಿದೆ. ಈ ಮಹೋತ್ಸವದ ಕಾರ್ಯಕ್ರಮಗಳು ದಿನಾಂಕ 03–03–2026ರಂದು ಧ್ವಜಾರೋಹಣ. ದಿನಾಂಕ: 09–03–2026ರಂದು (ರಾತ್ರಿ) ಕಲ್ಯಾಣೋತ್ಸವ (ಗರುಡೋತ್ಸವ) ನಡೆಯಲಿದೆ. ದಿನಾಂಕ: 11–03–2026 ರಥೋತ್ಸವ (ತೇರು) ಸಂಜೆ 4–00ಕ್ಕೆ ನಡೆಯಲಿದೆ. ಸಕಲ ಭಕ್ತಾದಿಗಳು ಆಗಮಿಸಿ ಶ್ರೀ ದೇವರ ದರ್ಶನ ಪಡೆದು ಕೃಪೆಗೆ ಪಾತ್ರರಾಗಬೇಕೆಂದು ಡಾ.ಸುರೇಶ್ ಬಿ.ಇಟ್ನಾಳ ಭಾ. ಜಿಲ್ಲಾಧಿಕಾರಿಗಳು, ಕೊಪ್ಪಳ ಸಿದ್ರಾಮೇಶ್ವರ, ಅಪಾರ ಜಿಲ್ಲಾಧಿಕಾರಿಗಳು ಹಾಗೂ ಆಡಳಿತಾಧಿಕಾರಿಗಳು ಶ್ರೀ ಕನಕಾಚಲಪತಿ ದೇವಸ್ಥಾನ, ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ವಿಶ್ವನಾಥ ಮುರುಡಿ ತಿಳಿಸಿದ್ದಾರೆ.

## ಕುಸಿದ ಹುಮನಾಬಾದ್ ಆಡಳಿತ!

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ತಾಲ್ಲೂಕಿನಲ್ಲಿ ಆಡಳಿತ ವ್ಯವಸ್ಥೆ ದಿನದಿಂದ ದಿನಕ್ಕೆ ಕುಸಿಯುತ್ತಿರುವುದು ಜನರಲ್ಲಿ ಆತಂಕ ಮತ್ತು ಅಸಮಾಧಾನವನ್ನುಂಟು ಮಾಡುತ್ತಿದೆ. ಸರ್ಕಾರಿ ಕಚೇರಿಗಳಲ್ಲಿ ಸಾಮಾನ್ಯ ಜನರಿಗೆ ಸರಿಯಾದ ಸೇವೆ ಸಿಗುತ್ತಿಲ್ಲ ಎಂಬ ಆರೋಪಗಳು ಕೇಳಿಬರುತ್ತಿವೆ. ಜನರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ಕಚೇರಿಗಳಿಗೆ ಸುತ್ತಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಸರ್ಕಾರ ಜನರ ಹಿತಕ್ಕಾಗಿ ಅನೇಕ ಯೋಜನೆಗಳನ್ನು ಜಾರಿಗೆ ತರುತ್ತಿದ್ದರೂ, ಅವುಗಳ ಅನುಷ್ಠಾನದಲ್ಲಿ ಸ್ಥಳೀಯ ಆಡಳಿತ ಯಂತ್ರ ವಿಫಲವಾಗುತ್ತಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ಕಚೇರಿಗಳಲ್ಲಿ ಅಧಿಕಾರಿಗಳು ಸಮಯಕ್ಕೆ ಸರಿಯಾಗಿ ಲಭ್ಯರಾಗದಿರುವುದು, ಅರ್ಜಿಗಳನ್ನು ಸರಿಯಾಗಿ ಪರಿಗಣಿಸದಿರುವುದು ಹಾಗೂ ಜನರೊಂದಿಗೆ ಸರಿಯಾದ ರೀತಿಯಲ್ಲಿ ವರ್ತಿಸದಿರುವುದು ಆಡಳಿತದ ಮೇಲಿನ ನಂಬಿಕೆಯನ್ನು ಕುಗ್ಗಿಸುತ್ತಿದೆ. ಈ ಹಿನ್ನೆಲೆಯಲ್ಲಿ ಹಿರಿಯ ಅಧಿಕಾರಿಗಳು ಹುಮನಾಬಾದ್ ಆಡಳಿತದ ಕಾರ್ಯವೈಖರಿಯನ್ನು ಗಂಭೀರವಾಗಿ ಪರಿಶೀಲಿಸಿ, ಜನಪರ ಆಡಳಿತಕ್ಕೆ ಒತ್ತು ನೀಡುವಂತೆ ಕ್ರಮ ಕೈಗೊಳ್ಳಬೇಕು. ಅಧಿಕಾರಿಗಳು ತಮ್ಮ ಕರ್ತವ್ಯವನ್ನು ಪ್ರಾಮಾಣಿಕವಾಗಿ ನಿರ್ವಹಿಸಿ, ಜನರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವ ಮೂಲಕ ಆಡಳಿತದ ಮೇಲೆ ಜನರಿಗೆ ಮತ್ತೆ ನಂಬಿಕೆ ಮೂಡಿಸುವುದು ಅಗತ್ಯವಾಗಿದೆ.

### ಸಮಸ್ಯೆಗಳಿಗೆ ತಕ್ಷಣದ ಸ್ಪಂದನೆ ಅಗತ್ಯ

ಗ್ರಾಮೀಣ ಪ್ರದೇಶದ ರೈತರು, ಕೂಲಿ ಕಾರ್ಮಿಕರು ಹಾಗೂ ಬಡವರು ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಲು ಬಂದಾಗ ಅವರಿಗೆ ತಕ್ಷಣ ಸ್ಪಂದನೆ ಸಿಗಬೇಕು. ಆದರೆ ಅನೇಕ ಬಾರಿ ಅವರು ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಒಳಗಾಗುತ್ತಿರುವುದು ವಿಷಾದನೀಯ ಸಂಗತಿ. ಇದರಿಂದ ಜನರಲ್ಲಿ ಸರ್ಕಾರದ ವಿರುದ್ಧ ಅಸಮಾಧಾನ ಹೆಚ್ಚಾಗುತ್ತಿದೆ.

## ಹೈಕಮಾಂಡ್ ಇರು ಎಂದರೆ..!

• ಮಲ್ಲಮ್ಮ ನುಡಿ ವಾರ್ತೆ ಮೈಸೂರು

ಹೈಕಮಾಂಡ್ ಇರು ಎಂದರೆ ಇರುತ್ತೇನೆ, ಮುಂದುವರಿಯಿರಿ ಎಂದರೆ ಮುಂದುವರಿಯುತ್ತೇನೆ. ಎಲ್ಲವೂ ಹೈ ಕಮಾಂಡ್ಗೆ ಬಿಟ್ಟ ವಿಚಾರ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ತಾಲ್ಲೂಕಿನ ಪಿಲ್ಲಹಳ್ಳಿ ಗ್ರಾಮದ ಹೆಲಿಪ್ಯಾಡ್‌ನಲ್ಲಿ ಶನಿವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಯಾರೋ ಏನೋ ಹೇಳುತ್ತಾರೆ ಎಂಬುದು ನನಗೆ ಮುಖ್ಯ ಅಲ್ಲ. ನನಗೆ ಹೈ ಕಮಾಂಡ್ ತೀರ್ಮಾನವಷ್ಟೇ ಮುಖ್ಯ. ಹೈಕಮಾಂಡ್ ಬಗ್ಗೆ ನನಗೆ ಸಂಪೂರ್ಣ ವಿಶ್ವಾಸ ಇದೆ' ಎಂದರು. ಮೈಸೂರಿನ ಜನರಷ್ಟೇ ಅಲ್ಲ, ಇಡೀ ನಾಡಿನ ಜನರು ನಾನು ಮುಖ್ಯಮಂತ್ರಿಯಾಗಿ ಮುಂದುವರಿಯಬೇಕು ಎಂದು ಬಯಸಿದ್ದಾರೆ. ಆದರೆ, ಅಂತಿಮ ತೀರ್ಮಾನ ಮಾಡುವುದು ಹೈಕಮಾಂಡ್' ಎಂದರು. ಹೈಕಮಾಂಡ್ ಅವಕಾಶ ಕೊಟ್ಟರೆ ಮತ್ತೆರಡು ಬಜೆಟ್ ಮಂಡಿಸುತ್ತೇನೆ. ಈ ವಿಷಯದಲ್ಲಿ ಹೈಕಮಾಂಡ್ ತೀರ್ಮಾನಕ್ಕೆ ಬದ್ಧ ಎಂದು ತಿಳಿಸಿದರು.

ರಾಜ್ಯ ರಾಜಕೀಯದಲ್ಲಿ ಮುಖ್ಯಮಂತ್ರಿ ಬದಲಾವಣೆ ವಿಚಾರದ ಬಗ್ಗೆ ಚರ್ಚೆ ನಡೆಯುತ್ತಿರುವ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ ಹೇಳಿಕೆ ಮಹತ್ವಪಡೆದುಕೊಂಡಿದೆ.



**ಹೈ ಕಮಾಂಡ್ ಇರು ಎಂದರೆ ಇರುತ್ತೇನೆ, ಮುಂದುವರಿಯಿರಿ ಎಂದರೆ ಮುಂದುವರಿಯುತ್ತೇನೆ. ಎಲ್ಲವೂ ಹೈ ಕಮಾಂಡ್ಗೆ ಬಿಟ್ಟ ವಿಚಾರ: ಸಿದ್ದರಾಮಯ್ಯ, ಮುಖ್ಯಮಂತ್ರಿ**

# ವಿದ್ಯಾರ್ಥಿಗಳು ಮೊಬೈಲ್, ಟಿ.ವಿ ಯಿಂದ ದೂರವಿಡಿ: ಸಾವರೆ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ವಿದ್ಯಾರ್ಥಿಗಳಿಗೆ ಶಿಕ್ಷಕರು ಹಾಗು ಪಾಲಕರು ಮೊಬೈಲ್ ಮತ್ತು ಟಿ.ವಿಗಳಿಂದ ದೂರವಿಡಬೇಕು ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ಕ್ಷೇತ್ರಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಬಿ.ಆರ್.ಪಿ ಸಂಜೀವಕುಮಾರ ಸಾವರೆ ಹೇಳಿದರು.

ತಾಲೂಕಿನ ಭಾತಂಬ್ರಾ ಗ್ರಾಮದ ಸರ್ಕಾರಿ ಮಾದರ ಪ್ರಾಥಮಿ ಶಾಲೆಯಲ್ಲಿ ಶನಿವಾರ ಆಯೋಜಿಸಿದ್ದ ಪಾಲಕರ-ಶಿಕ್ಷಕರ ಸಭೆ ಮತ್ತು ಶಾಲಾ ಮಟ್ಟದ ವಿಜ್ಞಾನ ವಸ್ತು ಪ್ರದರ್ಶನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಪರೀಕ್ಷಾ ಹತ್ತಿರ ಬರುತ್ತಿದೆ, ಮಕ್ಕಳು ಮೊಬೈಲ್ ಗೀಳಿನಿಂದ ಹೊರಬಂದು, ಓದಿನ ಕಡೆ ಹೆಚ್ಚಿನ ಲಕ್ಷ ಕೊಡಬೇಕು. ಪಾಲಕರು ತಮ್ಮ ಮಕ್ಕಳಿಗೆ ಮೊಬೈಲ್ ಮತ್ತು ಟಿ.ವಿಗಳಿಂದ ದೂರವಿಡುವ ಕಾರ್ಯಮಾಡಬೇಕು ಎಂದು ಹೇಳಿದರು. ಪ್ರಾಸ್ತಾವಿಕವಾಗಿ ಮಾತನಾಡಿದ ಶಾಲೆಯ ಮುಖ್ಯ ಶಿಕ್ಷಕ ರಾಜಕುಮಾರ ಪಾಲಾಪೂರೆ, ಪಾಲಕರು ತಮ್ಮ ಮಕ್ಕಳ ವಿದ್ಯಾಭ್ಯಾಸದ ಕಡೆಗೆ ಹೆಚ್ಚಿನ ಗಮನ ಕೊಡಬೇಕು. ನಾವು ಗಳಿಸುವ ಆಸ್ತಿ ಒಂದು ಸಲ ನಮ್ಮ ಕೈತಪ್ಪಬಹುದು ಆದರೆ ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡಿ ಬೆಳೆಸಿದರೆ ಕೊನೆಯವರೆಗೆ ಉಳಿಯುವುದು ಎಂದು ಹೇಳಿದರು. ಕಲವಾಡಿಯ ಮಹಾತ್ಮಾಗಾಂಧಿ ಪ್ರೌಢಶಾಲೆಯ ನಿವೃತ್ತ ಮುಖ್ಯಶಿಕ್ಷಕ ಜಯರಾಜ ದಾಬಶೆಟ್ಟಿ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಉತ್ತಮ ಸಂಸ್ಕಾರಯುತ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ. ಇದಕ್ಕೆ ಭಾತಂಬ್ರಾ ಸರ್ಕಾರಿ ಶಾಲೆಯೇ ಸಾಕ್ಷಿಯಾಗಿದೆ ಎಂದು ಹೇಳಿದರು. ಕಿತ್ತೂರರಾಣಿ ಚನ್ನಮ್ಮ ವಸತಿ ಶಾಲೆಯ ವಿಜ್ಞಾನ ಶಿಕ್ಷಕ ಮಹೇಶ ವಾರದ ವಿಶೇಷ ಉಪನ್ಯಾಸ ಮಂಡಿಸಿದರು. ಎಸ್.ಡಿ.ಎಮ್.ಸಿ ಅಧ್ಯಕ್ಷ ಜೈಪಾಲ ಜಾಧವ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ವಿಜ್ಞಾನ ಶಿಕ್ಷಕಿ ಉಮಾ ಮಹೇಶ, ವಿಜಯಲಕ್ಷ್ಮಿ ಮಾನಕಾರ, ಪೂಜಾಶ್ರೀ ಪಾಟೀಲ ಸೇರಿದಂತೆ ಪಾಲಕರು ಮತ್ತು ಎಸ್.ಡಿ.ಎಮ್.ಸಿ ಸದಸ್ಯರು ಇದ್ದರು.

ಉಮಾ ವಾರದ ಸ್ವಾಗತಿಸಿದರು. ವಿಜಯಲಕ್ಷ್ಮಿ ನಿರೂಪಿಸಿದರು. ಪಿ.ಪಾಟೀಲ ವಂದಿಸಿದರು.

# ಮರಾಠಿ ಸಾಹಿತ್ಯ ಸಮ್ಮೇಳನ




• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಪಟ್ಟಣದ ಭಾಲ್ಕೇಶ್ವರ ಮಂದಿರದಲ್ಲಿ ಫೆ.8 ರಂದು ರವಿವಾರ ಛತ್ರಪತಿ ಶಿವರಾಯ ಮರಾಠಿ ಸಾಹಿತ್ಯ ಸಂಸ್ಕೃತಿ ಮಂಡಳ ಕರ್ನಾಟಕದ ವತಿಯಿಂದ 3ನೇ ಮರಾಠಿ ಸಾಹಿತ್ಯ ಸಮ್ಮೇಳನ ಆಯೋಜಿಸಲಾಗಿದೆ ಎಂದು ಮಂಡಳದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಬೆಳಿಗ್ಗೆ 8 ಗಂಟೆಗೆ ಗ್ರಂಥ ದಿಂಡಿ ಮತ್ತು 8.30ಕ್ಕೆ ಧ್ವಜಾರೋಹಣ ನಡೆಯುವುದು. 9 ಗಂಟೆಗೆ ಗ್ರಂಥ ಲೋಕಾರ್ಪಣೆ, 10 ಗಂಟೆಗೆ ಕಾರ್ಯಕ್ರಮ ಉದ್ಘಾಟನೆ ನಡೆಯುವುದು. ಉದ್ಘಾಟನಾ ಸಮಾರಂಭದಲ್ಲಿ ಸಮ್ಮೇಳನಾಧ್ಯಕ್ಷ ಡಾ। ಶ್ರೀಪಾಲ ಸಬನೀಶ, ಸ್ವಾಗತಾಧ್ಯಕ್ಷ ಡಾ। ದಿನಕರ ಮೋರೆ, ಉದ್ಘಾಟಕರಾಗಿ ದಿಗಂಬರರಾವ ಮಾನಕಾರಿ, ತುಕಾರಾಮ ಮೋರೆ, ಅ.ಕೆ.ಆಕರೆ, ಭರತ ಸಾತಪುತೆ, ಜನಾರ್ಧನರಾವ ಬಿರಾದಾರ, ಸುಭಾಷ ಶೇಡೋಳೆ, ಡಿ.ಜಿ.ಜಗತಾಪ, ವೈಶಾಲಿತಾಯಿ ಜಾಧವ, ಅರ್ಜುನರಾವ ಸೋಮವಂಶಿ, ಯಾದವರಾವ ಕನಸೆ, ಡಾ। ಗುಂಡೇರಾವ ಶೇಡೋಳೆ, ಬಲಭೀಮ ರಮೇಶರಾವ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹೀರಾಚಂದ ವಾಘಮಾರೆ, ಜಯರಾಜ ದಾಬಶೆಟ್ಟಿ, ಪಿ.ಆರ್.ಪಾಟೀಲ ಉಪಸ್ಥಿತರಿರುವರು. ಮದ್ಯಾಹ್ನ 2 ಗಂಟೆಗೆ ಪರಿಸಂವಾದ, 3 ಗಂಟೆಗೆ ಕವಿ ಗೋಷ್ಠಿ, ಸಾಯಂಕಾಲ 5 ಗಂಟೆಗೆ ಸಮಾರೋಪ ಸಮಾರಂಭ ನಡೆಯಲಿದೆ ಎಂದು ತಿಳಿಸಿದ್ದಾರೆ.

# ಸರ್ಕಾರದ ಜನಪರ ಬಜೆಟ್‌ಗೆ ಹರ್ಷ: ಚಂದ್ರಶೇಖರ ಚನ್ನಶೆಟ್ಟಿ



• ಮಲ್ಲಮ್ಮ ನುಡಿ ವಾರ್ತೆ ಬೀದರ

ಕರ್ನಾಟಕ ರಾಜ್ಯ ಸರ್ಕಾರವು ಪ್ರಸಕ್ತ ಸಾಲಿನ ಬಜೆಟ್ ಮಂಡಿಸಿರುವ ಹಿನ್ನೆಲೆಯಲ್ಲಿ ರಾಜ್ಯದ ಮುಖ್ಯಮಂತ್ರಿ ಹಾಗೂ ಸಚಿವರಿಗೆ ಬ್ಲಾಕ್ ಕಾಂಗ್ರೆಸ್ ಕಮಿಟಿ ಅಧ್ಯಕ್ಷರಾದ ಚಂದ್ರಶೇಖರ ಚನ್ನಶೆಟ್ಟಿ ಅವರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ರಾಜ್ಯದ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ಅವರು ಮಂಡಿಸಿದ ಬಜೆಟ್ ಜನಪರವಾಗಿದ್ದು ರಾಜ್ಯದ ಸಮಗ್ರ ಅಭಿವೃದ್ಧಿಗೆ ಪೂರಕವಾಗಲಿದೆ ಎಂದು ತಿಳಿಸಿದ್ದಾರೆ. ಈ ಬಜೆಟ್ ಮೂಲಕ ಸಾಮಾಜಿಕ ಕಲ್ಯಾಣ, ಮೂಲಭೂತ ಸೌಲಭ್ಯಗಳ ಅಭಿವೃದ್ಧಿ, ಶಿಕ್ಷಣ, ಆರೋಗ್ಯ, ಕೃಷಿ ಹಾಗೂ ನಗರಾಭಿವೃದ್ಧಿ ಸೇರಿದಂತೆ ಹಲವು ಕ್ಷೇತ್ರಗಳಿಗೆ ವಿಶೇಷ ಒತ್ತು ನೀಡಲಾಗಿದೆ ಎಂದು ಅವರು ಹೇಳಿದ್ದಾರೆ.

ಬಜೆಟ್ ರೂಪಿಸುವ ಪ್ರಕ್ರಿಯೆಯಲ್ಲಿ ಪ್ರಮುಖವಾಗಿ ಸಹಕರಿಸಿದ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಈಶ್ವರ ಬಿ. ಖಂಡ್ರೆ ಅವರು ಜಿಲ್ಲೆ ಸೇರಿದಂತೆ ರಾಜ್ಯದ ಅಭಿವೃದ್ಧಿಗೆ ಹಲವು ಯೋಜನೆಗಳನ್ನು ಕೈಗೊಳ್ಳುತ್ತಿರುವುದು ಶ್ಲಾಘನೀಯವಾಗಿದೆ. ಅದೇ ರೀತಿ ಪೌರಾಡಳಿತ ಮತ್ತು ಹಜ್ ಸಚಿವರಾದ ಶ್ರೀ ರಹೀಂ ಖಾನ್ ಅವರು ನಗರಾಭಿವೃದ್ಧಿ ಹಾಗೂ ನಾಗರಿಕ ಸೌಲಭ್ಯಗಳ ವಿಸ್ತರಣೆಗೆ ಮಹತ್ವದ ಕಾರ್ಯಗಳನ್ನು ಮಾಡುತ್ತಿರುವುದಾಗಿ ಅವರು ಪ್ರಶಂಸಿಸಿದ್ದಾರೆ.

ರಾಜ್ಯದ ಅಭಿವೃದ್ಧಿಗೆ ದಿಕ್ಕುತೋರಿಸುವಂತಹ ಬಜೆಟ್ ಮಂಡಿಸಿರುವುದಕ್ಕಾಗಿ ಮುಖ್ಯಮಂತ್ರಿ ಹಾಗೂ ಸಚಿವರಿಗೆ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುತ್ತೇನೆ. ಮುಂದಿನ ದಿನಗಳಲ್ಲಿ ಈ ಬಜೆಟ್‌ನಲ್ಲಿ ಘೋಷಿಸಲಾದ ಯೋಜನೆಗಳು ಯಶಸ್ವಿಯಾಗಿ ಜಾರಿಗೆ ಬಂದು ಜನಸಾಮಾನ್ಯರಿಗೆ ಹೆಚ್ಚಿನ ಪ್ರಯೋಜನವಾಗಲಿ ಎಂದು ಆಶಿಸುತ್ತೇನೆ ಎಂದು ಚಂದ್ರಶೇಖರ ಚನ್ನಶೆಟ್ಟಿ ಅವರು ತಿಳಿಸಿದ್ದಾರೆ.

# ಕಾರಂಜಾ ಸಂತ್ರಸ್ತರ ಬೇಡಿಕೆ: ಸಿಎಂ ಬಳಿ ಸರ್ವಪಕ್ಷ ನಿಯೋಗ ಕರೆದುಕೊಂಡು ಹೋಗಲು ಖಂಡ್ರೆಗೆ ಆಗ್ರಹ



• ಮಲ್ಲಮ್ಮ ನುಡಿ ವಾರ್ತೆ ಬೀದರ

ಜಿಲ್ಲೆಯ ಪ್ರಮುಖ ಸಮಸ್ಯೆಯಾಗಿರುವ ಕಾರಂಜಾ ನೀರಾವರಿ ಯೋಜನೆಗೆ ಸಂಬಂಧಿಸಿದಂತೆ ಭೂಮಿ ನೀಡಿದ ರೈತ ಸಂತ್ರಸ್ತರ ನ್ಯಾಯಯುತ ಬೇಡಿಕೆಗಳನ್ನು ಕಾಲಮಿತಿಯಲ್ಲಿ ಈಡೇರಿಸಲು, ಆದಷ್ಟು ಶೀಘ್ರ ಮುಖ್ಯಮಂತ್ರಿಗಳ ಬಳಿ ಸರ್ವಪಕ್ಷಗಳ ನಿಯೋಗವನ್ನು ಕರೆದುಕೊಂಡು ಹೋಗುವಂತೆ ಹಿರಿಯ ಹೋರಾಟಗಾರ ಡಾ.ಲಕ್ಷ್ಮಣ ಗಸ್ತಿ ಅವರು ಅರಣ್ಯ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರಿಗೆ ಆಗ್ರಹಿಸಿದ್ದಾರೆ.

ಕಾರಂಜಾ ನೀರಾವರಿ ಯೋಜನೆಗೆ ಭೂಮಿ ನೀಡಿದ ರೈತರು ದೀರ್ಘಕಾಲದಿಂದ ಸಮರ್ಪಕ ಪರಿಹಾರಕ್ಕಾಗಿ ಹೋರಾಟ ನಡೆಸುತ್ತಿದ್ದು, ಮಾನವೀಯತೆ ಮತ್ತು ವೈಜ್ಞಾನಿಕ ಮಾನದಂಡಗಳ ಆಧಾರದ ಮೇಲೆ ಸೂಕ್ತ ಪರಿಹಾರ ನೀಡಬೇಕು ಎಂಬುದು ಸಂತ್ರಸ್ತರ ಪ್ರಮುಖ ಬೇಡಿಕೆಯಾಗಿದೆ. ಈ ಹಿನ್ನಲೆಯಲ್ಲಿ ಕಾರಂಜಾ ಸಂತ್ರಸ್ತರ ಹೋರಾಟ ಸಮಿತಿಯು ಹಲವು ವರ್ಷಗಳಿಂದ ಹೋರಾಟ ನಡೆಸುತ್ತಿರುವುದು ಗಮನಾರ್ಹವಾಗಿದೆ.

ಈ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬೆಳಗಾವಿ ಅಧಿವೇಶನದ ಸಂದರ್ಭದಲ್ಲಿ ಸಂತ್ರಸ್ತರ ನ್ಯಾಯಯುತ ಬೇಡಿಕೆಗಳನ್ನು ಪರಿಗಣಿಸಿ ಉನ್ನತ ಮಟ್ಟದ ತಾಂತ್ರಿಕ ಸಮಿತಿಯನ್ನು ರಚಿಸಲು ಆದೇಶಿಸಿದ್ದರು. ಪ್ರಾದೇಶಿಕ ಆಯುಕ್ತರ ಅಧ್ಯಕ್ಷತೆಯಲ್ಲಿ ರಚನೆಯಾದ ಈ ಸಮಿತಿಯು ಸುಮಾರು ಎರಡು ತಿಂಗಳ ಹಿಂದೆ ಸರ್ಕಾರಕ್ಕೆ ತನ್ನ ವರದಿಯನ್ನು ಸಲ್ಲಿಸಿದೆ. ಆದರೆ ಈ ವರದಿಯ ಮೇಲೆ ಸರ್ಕಾರ ಇನ್ನೂ ಕ್ರಮ ಕೈಗೊಳ್ಳದಿರುವುದು ಸಂತ್ರಸ್ತರಲ್ಲಿ ಅಸಮಾಧಾನ ಉಂಟುಮಾಡಿದೆ.

ಈ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ ಹಿರಿಯ ಹೋರಾಟಗಾರರು ಹಾಗೂ ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಸಂಸ್ಥಾಪಕ ಅಧ್ಯಕ್ಷರಾದ ಡಾ. ಲಕ್ಷ್ಮಣ ಗಸ್ತಿ ಅವರ ನೇತೃತ್ವದಲ್ಲಿ ಇತ್ತೀಚೆಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮತ್ತು ಸಚಿವ ರಹೀಂ ಖಾನ್ ಅವರನ್ನು ಭೇಟಿ ಮಾಡಿ, ಈ ವಿಷಯದಲ್ಲಿ ತ್ವರಿತ ಕ್ರಮ ಕೈಗೊಳ್ಳುವಂತೆ ಮನವಿ ಮಾಡಲಾಗಿದೆ. ಈ ವೇಳೆ ಅಧಿವೇಶನದ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಬಳಿ ಸರ್ವಪಕ್ಷಗಳ ನಿಯೋಗವನ್ನು ಕರೆದುಕೊಂಡು ಹೋಗಲು ವಿಶೇಷ ಪ್ರಯತ್ನ ಮಾಡುವುದಾಗಿ ಜಿಲ್ಲಾ ಉಸ್ತುವಾರಿ ಸಚಿವರು ಭರವಸೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಕಾರಂಜಾ ಸಂತ್ರಸ್ತರ ಮುಳುಗಡೆ ಹಿತರಕ್ಷಣಾ ಸಮಿತಿಯ ಅಧ್ಯಕ್ಷ ಚಂದ್ರಶೇಖರ ಪಾಟೀಲ ಹೊಚಕನಳ್ಳಿ, ವಿನಯ ಮಾಳಗೆ, ರೋಹನ್ ಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಬೀದರ ಜಿಲ್ಲೆಯ ಜ್ವಲಂತ ಸಮಸ್ಯೆಯಾದ ಕಾರಂಜಾ ಸಂತ್ರಸ್ತರ ಬೇಡಿಕೆಯನ್ನು ಜಿಲ್ಲಾ ಉಸ್ತುವಾರಿ ಸಚಿವರು ಗಂಭೀರವಾಗಿ ಪರಿಗಣಿಸಿ, ಇದನ್ನು ಸವಾಲಾಗಿ ಸ್ವೀಕರಿಸಿ ಪ್ರಸ್ತುತ ಅಧಿವೇಶನದ ಸಂದರ್ಭದಲ್ಲೇ ಸರ್ವಪಕ್ಷಗಳ ನಿಯೋಗವನ್ನು ಮುಖ್ಯಮಂತ್ರಿಗಳ ಬಳಿ ಕರೆದುಕೊಂಡು ಹೋಗಬೇಕು ಎಂದು ಕಾರಂಜಾ ಮುಳುಗಡೆ ಸಂತ್ರಸ್ತರ ಹಿತರಕ್ಷಣಾ ಹೋರಾಟ ಸಮಿತಿಯ ಅಧ್ಯಕ್ಷ ಚಂದ್ರಶೇಖರ ಪಾಟೀಲ ಹೊಚಕನಳ್ಳಿ, ಮುಖಂಡರಾದ ರಾಜಪ್ಪಾ ಕೋಸಮ್, ರಾಜಕುಮಾರ ಭುಸ್ಸಾ, ಸಂಗಾರೆಡ್ಡಿ ಔರಾದ, ಮಹ್ಮದ್ ಸೋಲಾಪೂರಿ ಬಗದಲ್, ಇಸುಫ್ ರೇಕುಳಗಿ ಮಾದಪ್ಪ ಖೌದೆ, ರೇವಣಪ್ಪಾ ಖೇಣಿರಂಜೋಳ ಅವರು ಪತ್ರಿಕಾ ಪ್ರಕಟಣೆಯಲ್ಲಿ ಆಗ್ರಹಿಸಿದ್ದಾರೆ.

# ಶಿಕ್ಷಣದ ಜೊತೆ ಸಾಂಸ್ಕೃತಿಕ ಚಟುವಟಿಕೆಗೆ ಮಹತ್ವ ಕೋಡಿ

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ





ವಿದ್ಯಾರ್ಥಿಗಳ ಸಮಗ್ರ ವ್ಯಕ್ತಿತ್ವ ವಿಕಾಸಕ್ಕೆ ಶಿಕ್ಷಣದ ಜೊತೆಗೆ ಸಾಂಸ್ಕೃತಿಕ ಚಟುವಟಿಕೆಗಳಿಗೂ ಮಹತ್ವ ನೀಡಬೇಕೆಂದು ತಹಶೀಲ್ದಾರ್ ಮಂಜುನಾಥ ಪಂಚಾಳ ನುಡಿದರು. ತಾಲ್ಲೂಕಿನ ಮುಸ್ತರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಶಾಲಾ ವಾರ್ಷಿಕೋತ್ಸವ(ಮಕ್ಕಳ ಹಬ್ಬ) ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ಶಾಲೆಗಳಲ್ಲಿ ನುರಿತ ಹಾಗೂ ತರಬೇತಿ ಪಡೆದು ಉತ್ತಮ ಗುಣಮಟ್ಟದ ಶಿಕ್ಷಣ ನೀಡುವ ಶಿಕ್ಷಕರಿದ್ದಾರೆ. ಪೋಷಕರು ಖಾಸಗಿ ಶಾಲೆಗಳ ವ್ಯಾಮೋಹಕ್ಕೆ ಒಳಗಾಗದೆ ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲು ಮಾಡುವಂತೆ ಮನವಿ ಮಾಡಿದರು. ಸಾಮಾನ್ಯವಾಗಿ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮಗಳನ್ನು ಖಾಸಗಿ ಶಾಲೆಗಳು ಆದ್ದೂರಿಯಾಗಿ ಆಚರಣೆ ಮಾಡುತ್ತವೆ. ಶಾಲೆಯ ಮುಖ್ಯ ಶಿಕ್ಷಕ ಹಾಗೂ ಶಿಕ್ಷಕರು, ಮಕ್ಕಳ ಪೋಷಕರು ಹಾಗೂ ಗ್ರಾಮಸ್ಥರ ಸಹಕಾರ ಪಡೆದು ಮುಸ್ತರಿ ಗ್ರಾಮದ ಸರ್ಕಾರಿ ಶಾಲೆಯ ವಾರ್ಷಿಕೋತ್ಸವ ಆದ್ದೂರಿಯಾಗಿ ಆಚರಣೆ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ್ ಗುಡಾಳ ಮಾತನಾಡಿ, ಮಾತೃ ಭಾಷೆ ಕನ್ನಡ ಪರಿಪೂರ್ಣವಾಗಿ ಅಧ್ಯಯನ ಮಾಡಿದಾಗ ಎಲ್ಲ ಭಾಷೆಯನ್ನು ಅಧ್ಯಯನ ಮಾಡಲು ಸಹಕಾರಿಯಾಗುತ್ತದೆ ಎಂದರು. ಮಕ್ಕಳು ಸಾಧನೆ ಮಾಡಲು ಕೇವಲ ಅಂಕಗಳು ಮುಖ್ಯ ಇಲ್ಲ ಮಕ್ಕಳಲ್ಲಿ ಇರುವ ಪ್ರತಿಭೆಯ ಆಧಾರದ ಮೇಲೆ ಮಗುವಿಗೆ ಪ್ರೇರಣೆ ನೀಡಬೇಕು ಎಂದರು. ಮುಖ್ಯ ಗುರುಗಳ ಬೇಡಿಕೆಯಂತೆ ಶಾಲೆಗೆ ಸ್ಮಾರ್ಟ್ ರೋಮ್, ಶೌಚಾಲಯ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಭರವಸೆ ನೀಡಿದರು. ಶಾಲೆಯ ಮುಖ್ಯ ಶಿಕ್ಷಕ ರಮೇಶ್ ಸಲಗರ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷ ಸಿದ್ದಲಿಂಗ ಅಡಕಾಯಿ, ಉಪಾಧ್ಯಕ್ಷ ಮಂಜುನಾಥ್ ರೆಡ್ಡಿ, ಎಸ್ಡಿಎಂಸಿ ಅಧ್ಯಕ್ಷ ವಿಜಯಕುಮಾರ್ ಮಜಗೆ, ಉಪಾಧ್ಯಕ್ಷೆ ನಾಗಲತಾ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ರವೀಂದ್ರರೆಡ್ಡಿ ಮಾಲಿ ಪಾಟೀಲ್, ಸರ್ಕಾರಿ ನೌಕರರ ಸಂಘದ ತಾಲುಕಾಧ್ಯಕ್ಷ ರಾಜಶೇಖರ ಉಪ್ಪಿನ, ಪ್ರೌಢ ಶಾಲಾ ಶಿಕ್ಷಕರ ಸಂಘದ ತಾಲುಕಾಧ್ಯಕ್ಷ ಅಶೋಕಕುಮಾರ ಮಹೇಂದ್ರಕರ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲುಕಾಧ್ಯಕ್ಷ ರಾಜಪ್ಪ ಜಮಾದರ್, ಸಾವಿತ್ರಿಬಾಯಿ ಫುಲೇ ಶಿಕ್ಷಕಿಯರ ಸಂಘದ ತಾಲೂಕಾಧ್ಯಕ್ಷೆ ಪ್ರೇಮಿಳಾ ರೆಡ್ಡಿ, ಡಾ. ಗೋವಿಂದ, ಸಂತೋಷ ತಾಂಡೂರ್,

ಕರುಣಾದೇವಿ, ಜೈಶ್ರೀ, ಅಂಬಿಕಾ ಸೇರಿದಂತೆ ಎಸ್ಡಿಎಂಸಿ ಸದಸ್ಯರು, ಗ್ರಾಮಸ್ಥರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಎಲೆಕ್ಟ್ರಿಕ್ ವಾಹನ ಬಳಕೆಗೆ ರಾಜ್ಯ ಸರ್ಕಾರ ಪ್ರೋತ್ಸಾಹ: ರಹೀಮ್ ಖಾನ್

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಜನರು ಹೆಚ್ಚು ಹೆಚ್ಚು ಎಲೆಕ್ಟ್ರಿಕ್ ದ್ವಿಚಕ್ರ ವಾಹನಗಳನ್ನು ಬಳಕೆ ಮಾಡುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಎಲ್ಲಾ ರೀತಿಯ ಪ್ರೋತ್ಸಾಹ ನೀಡಲಿದೆ ಎಂದು ಪೌರಾಡಳಿತ ಸಚಿವ ರಹೀಮ್ ಖಾನ್ ಭರವಸೆ ನೀಡಿದ್ದಾರೆ.

ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ 'ಇವೈಸ್ ರೆಂಟಲ್ಸ್ ' ಆನ್ಲೈನ್ ದ್ವಿಚಕ್ರ ವಾಹನ ಬಾಡಿಗೆ ನೀಡುವ ಮೊಬೈಲ್ಆಪ್ ಬಿಡುಗಡೆ ಮಾಡಿ ಸಚಿವರು ಮಾತನಾಡಿದರು.

ವಾಯು ಮಾಲಿನ್ಯದಿಂದ ಪರಿಸರ ಹಾಳಾಗುತ್ತಿದ್ದು, ಇದರಿಂದ ಅನೇಕ ಆರೋಗ್ಯ ಸಮಸ್ಯೆಗಳು ಎದುರಾಗುತ್ತಿವೆ.

ದಿನೇ ದಿನೇ ಇಂಧನ ಬೆಲೆ ಗಗನಮುಖಿಯಾಗುತ್ತಿದ್ದು, ಬಡವರು ಹಾಗೂ ಕೆಳಮಧ್ಯಮ ವರ್ಗದವರಿಗೆ ಇದು ಹೊರೆಯಾಗಿದೆ. ಈ ಸಮಸ್ಯೆಗೆ ವಿದ್ಯುತ್ ಚಾಲಿತ ವಾಹನಗಳು ಪರ್ಯಾಯ ಸಾರಿಗೆ ಸಾಧನಗಳಾಗಿವೆ ಎಂದು ಪೌರಾಡಳಿತ ಸಚಿವ ರಹೀಮ್ ಖಾನ್ ಅಭಿಪ್ರಾಯ ವ್ಯಕ್ತಪಡಿಸಿದರು.

ಈ ನಿಟ್ಟಿನಲ್ಲಿ ಖಾಸಗಿ ಸಂಸ್ಥೆಗಳು ಕೈಗೊಳ್ಳುವ ಪ್ರಯತ್ನಗಳಿಗೆ ರಾಜ್ಯ ಸರ್ಕಾರ ಸಂಪೂರ್ಣ ಉತ್ತೇಜನ ನೀಡಲಿದೆ ಎಂದು ಪೌರಾಡಳಿತ ಸಚಿವರು ಸಮಾರಂಭದಲ್ಲಿ ಘೋಷಿಸಿದರು.

ಜನಪ್ರಿಯ ರಿಯಾಲಿಟಿ ಶೋ 'ಬಿಗ್ ಬಾಸ್' ಸ್ಪರ್ಧೆ ವಿಜೇತ ಗಿಲ್ಲಿ ನಟ 'ಇವೈಸ್ ರೆಂಟಲ್ಸ್' ನ ನೂತನ ದ್ವಿಚಕ್ರ ವಾಹನಗಳನ್ನು ಮಾರುಕಟ್ಟೆಗೆ ಸಮರ್ಪಿಸಿದರು.

ಈ ವೇಳೆ ಮಾತನಾಡಿದ ಗಿಲ್ಲಿ ನಟ, "ಗ್ರಾಮೀಣ ಭಾಗದಿಂದ ಉದ್ಯೋಗ ಅರಸಿ ಬೆಂಗಳೂರಿಗೆ ಬರುವ ಯುವಕ-ಯುವತಿಯರಿಗೆ ಹೊಸ ದ್ವಿಚಕ್ರ ವಾಹನ ಖರೀದಿ ಮಾಡಲು ಹಣ ಸಾಲದು. ಇಂಥವರಿಗೆ ಬಾಡಿಗೆ ಆಧಾರದಲ್ಲಿ 'ಇವೈಸ್ ರೆಂಟಲ್ಸ್' ವಾಹನಗಳು ತುಂಬಾ ಉಪಯುಕ್ತವಾಗಿವೆ ಎಂದರು. ಮಾಜಿ ಶಾಸಕಿ ಸೌಮ್ಯ ರೆಡ್ಡಿ, ಬಿಗ್ ಬಾಸ್ ಖ್ಯಾತಿಯ 'ಒಳ್ಳೆ ಹುಡುಗ ಪ್ರಥಮ್', ಕಿರುತೆರೆ ರಿಯಾಲಿಟಿ ಶೋಗಳಿಂದ ಮನೆ ಮಾತಾಗಿರುವ ರಜತ್, ಇವೈಸ್ ರೆಂಟಲ್ಸ್ ಸಂಸ್ಥಾಪಕ ಮುಖ್ಯ ಕಾರ್ಯ ನಿರ್ವಾಹಕ ಮುಖ್ಯಸ್ಥ ಸುರೇಶ್ ರೆಡ್ಡಿ, ನಿರ್ದೇಶಕ ಸುರೇಶ್, 2021ನೇ ಸಾಲಿನ ಮಿಸ್ ಇಂಡಿಂ-ಯಾ ಪ್ರಶಸ್ತಿ ಪಡೆದ ಸ್ಮಿತಾ ಪ್ರಭು, ಸೇರಿದಂತೆ ಹಲವು ಗಣ್ಯರು ಈ ಸಂಧರ್ಭದಲ್ಲಿ ಉಪಸ್ಥಿತರಿದ್ದರು.

# ಸಂಪಾದಕೀಯ

ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349



## ಜನರ ವಿಶ್ವಾಸ ಕಳೆದುಕೊಳ್ಳುತ್ತಿರುವ ರಾಜಕಾರಣಿಗಳು

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರ ವಿಶ್ವಾಸವೇ ರಾಜಕಾರಣಿಗಳ ದೊಡ್ಡ ಬಂಡವಾಳ. ಜನರು ತಮ್ಮ ಸಮಸ್ಯೆಗಳನ್ನು ಪರಿಹರಿಸಬೇಕೆಂಬ ಆಶಯದಿಂದ ರಾಜಕಾರಣಿಗಳನ್ನು ಆಯ್ಕೆಮಾಡುತ್ತಾರೆ. ಆದರೆ ಇತ್ತೀಚಿನ ದಿನಗಳಲ್ಲಿ ಹಲವಾರು ರಾಜಕಾರಣಿಗಳು ಜನರ ವಿಶ್ವಾಸವನ್ನು ಕಳೆದುಕೊಳ್ಳುತ್ತಿರುವುದು ದುಃಖಕರ ಸಂಗತಿಯಾಗಿದೆ.

ಚುನಾವಣೆ ಸಮಯದಲ್ಲಿ ಜನರ ಮುಂದೆ ಅನೇಕ ಭರವಸೆಗಳನ್ನು ನೀಡಿ ಮತಗಳನ್ನು ಪಡೆಯುವ ರಾಜಕಾರಣಿಗಳು, ಅಧಿಕಾರಕ್ಕೆ ಬಂದ ನಂತರ ಆ ಭರವಸೆಗಳನ್ನು ಮರೆತುಬಿಡುವುದು ಸಾಮಾನ್ಯವಾಗಿ ಕಾಣಿಸುತ್ತಿದೆ. ಜನರ ಸಮಸ್ಯೆಗಳಿಗೆ ಸ್ಪಂದಿಸದೆ ಸ್ವಾರ್ಥ ರಾಜ-ಕಾರಣ, ಅಧಿಕಾರದ ಲಾಭ ಮತ್ತು ವೈಯಕ್ತಿಕ ಪ್ರಗತಿಗೆ ಹೆಚ್ಚು ಒತ್ತು ನೀಡುತ್ತಿರುವುದು ಜನರಲ್ಲಿ ಅಸಮಾಧಾನವನ್ನು ಹುಟ್ಟಿಸಿದೆ.

ಕೆಲವು ರಾಜಕಾರಣಿಗಳು ಅಭಿವೃದ್ಧಿಯ ಕೆಲಸಗಳಿಗೆ ಬದಲು ಜಾತಿ, ಧರ್ಮ ಮತ್ತು ಗುಂಪು ರಾಜಕಾರಣವನ್ನು ಮುಂದಿಟ್ಟುಕೊಂಡು ಸಮಾಜದಲ್ಲಿ ವಿಭಜನೆ ಉಂಟುಮಾಡುತ್ತಿರುವುದು ಮತ್ತೊಂದು ವಿಷಾದಕರ ಸಂಗತಿ. ಜನರ ಜೀವನಮಟ್ಟವನ್ನು ಸುಧಾರಿಸುವ ಬದಲು ರಾಜಕೀಯ ಲಾಭಕ್ಕಾಗಿ ಮಾತಿನ ರಾಜಕಾರಣ ನಡೆಸುವುದು ಪ್ರಜಾಪ್ರಭುತ್ವಕ್ಕೆ ಒಳ್ಳೆಯ ಸೂಚನೆಯಲ್ಲ.

ಇದೇ ಸಮಯದಲ್ಲಿ ಭ್ರಷ್ಟಾಚಾರ, ಅಧಿಕಾರದ ದುರುಪಯೋಗ ಮತ್ತು ಪಾರದರ್ಶಕತೆಯ ಕೊರತೆ ಕೂಡ ಜನರ ವಿಶ್ವಾಸ ಕುಸಿಯಲು ಪ್ರಮುಖ ಕಾರಣಗಳಾಗಿವೆ. ಜನರು ತಮ್ಮ ಸಮಸ್ಯೆಗಳಿಗೆ ಪರಿಹಾರ ಸಿಗದಿದ್ದಾಗ ಮತ್ತು ಸರ್ಕಾರದ ಯೋಜನೆಗಳು ಸರಿಯಾಗಿ ತಲುಪದಿದ್ದಾಗ ಜನರಲ್ಲಿ ರಾಜಕೀಯ ವ್ಯವಸ್ಥೆಯ ಮೇಲೆ ನಿರಾಸೆ ಹೆಚ್ಚುತ್ತದೆ.

ಆದ್ದರಿಂದ ರಾಜಕಾರಣಿಗಳು ಜನರ ವಿಶ್ವಾಸವನ್ನು ಮರುಪಡೆಯಲು ನಿಷ್ಠೆಯಿಂದ ಕೆಲಸ ಮಾಡಬೇಕು. ಜನರ ಸಮಸ್ಯೆಗಳನ್ನು ಸಮೀಪದಿಂದ ಅರಿತು ಅವುಗಳಿಗೆ ಪರಿಹಾರ ಕಂಡುಹಿಡಿಯಬೇಕು. ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆ ನೀಡಿ ಪಾರದರ್ಶಕ ಮತ್ತು ಜನಪರ ಆಡಳಿತ ನಡೆಸುವುದು ಅತ್ಯಗತ್ಯ. ಪ್ರಜಾಪ್ರಭುತ್ವದಲ್ಲಿ ಅಧಿಕಾರ ಶಾಶ್ವತವಲ್ಲ. ಜನರ ವಿಶ್ವಾಸವನ್ನು ಉಳಿಸಿಕೊಂಡ ರಾಜಕಾರಣಿಗಳೇ ದೀರ್ಘಕಾಲ ರಾಜಕೀಯದಲ್ಲಿ ಉಳಿಯಬಲ್ಲರು. ಜನರ ವಿಶ್ವಾಸ ಕಾಪಾಡಿಕೊಳ್ಳುವುದು ಪ್ರತಿಯೊಬ್ಬ ರಾಜಕಾರಣಿಯ ಮೊದಲ ಕರ್ತವ್ಯವಾಗಬೇಕು.

# ಗ್ರಾಮ ಒನ್: ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಸೇವೆಗಳನ್ನು ಒಂದೇ ಸೂರಿನಡಿ ಜನರಿಗೆ ಒದಗಿಸುವ ಉದ್ದೇಶದಿಂದ ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಖಾಲಿರುವ ಗ್ರಾಮ-1 ಫ್ರಾಂಚೈಸಿ ಕೇಂದ್ರಗಳನ್ನು ಸ್ಥಾಪಿಸಲು ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಾರ್ವಜನಿಕರು ತಮ್ಮ ಸಮೀಪದಲ್ಲೇ ಸರ್ಕಾರದ ಅನೇಕ ಸೇವೆಗಳನ್ನು ಸುಲಭವಾಗಿ ಪಡೆಯಲು ರಾಜ್ಯ ಸರ್ಕಾರದ ನೂತನ ಯೋಜನೆಗಳನ್ನು ಸೇವಾ ಸಿಂಧು ಪೋರ್ಟಲ್ ಮೂಲಕ ಅನುಷ್ಟಾನಗೊಳಿಸಲಾಗುತ್ತಿದ್ದು, ಆಸಕ್ತ ಅಭ್ಯರ್ಥಿಗಳು ತಮ್ಮ ಅರ್ಜಿಗಳನ್ನು ವೆಬ್‌ಸೈಟ್ ವಿಳಾಸ: https://sevasindhuservices.karnataka.gov.in/directApply.do?serviceId=2631 ಮೂಲಕ ಮಾರ್ಚ್ 15ರೊಳಗಾಗಿ ಸಲ್ಲಿಸಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಮಾರ್ಚ.8 ರಂದು ಬೆಳಿಗ್ಗೆ 10.30 ಗಂಟೆಗೆ ಪೂಜ್ಯ ಶ್ರೀ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚಾರಣೆ ಕಾರ್ಯಕ್ರಮ ಆಯೋಜಿಸಲಾಗಿದೆ.

ಉದ್ಘಾಟನೆಯನ್ನು ಅರಣ್ಯ, ಜೀವಿಶಾಸ್ತ್ರ ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಮಾಡಲಿದ್ದಾರೆ.

ಘನ ಉಪಸ್ಥಿತಿಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಸಚಿವರಾದ ಲಕ್ಷ್ಮಿ ಹೆಬ್ಬಾಳಕರ್ ಅವರು ಭಾಗವಹಿಸಲಿದ್ದಾರೆ.

ಅಧ್ಯಕ್ಷತೆಯನ್ನು ಪೌರಾಡಳಿತ ಮತ್ತು ಹಜ್ ಸಚಿವರಾದ ರಹೀಂ ಖಾನ್ ಅವರು ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಬೀದರ ಲೋಕಸಭಾ ಸಂಸದರಾದ ಸಾಗರ ಈಶ್ವರ ಖಂಡ್ರೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ನಾರಾಯಣರಾವ್, ಔರಾದ್ (ಬಿ) ಶಾಸಕ ಪ್ರಭು ಬಿ.ಚವ್ಹಾಣ್, ಬಸವಕಲ್ಯಾಣ ಶಾಸಕ ಶರಣು ಸಲಗರ, ಬೀದರ ದಕ್ಷಿಣ ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಹುಮನಾಬಾದ ಶಾಸಕ ಡಾ.ಸಿದ್ದು ಪಾಟೀಲ ಹಾಗೂ ವಿಧಾನ ಪರಿಷತ್ ಶಾಸಕರುಗಳಾದ ಡಾ.ಚಂದ್ರಶೇಖರ ಬಿ.ಪಾಟೀಲ್, ಶಶೀಲ ಜಿ.ನಮೋಶಿ, ಭೀಮರಾಔ ಬಿ.ಪಾಟೀಲ, ಡಾ.ಎಂ.ಜಿ.ಮೂಳೆ ಅವರುಗಳು ಭಾಗವಹಿಸಲಿದ್ದಾರೆ. ಅಧ್ಯಕ್ಷರು, ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕೃಷ್ಣಾ ಮೇಲ್ದಂಡೆ ಯೋಜನೆ (ಕಾಡಾ) ಭೀಮರಾಯನಗುಡಿ ಕಲಬುರಗಿಯ ಬಾಬು ಹೊನ್ನನಾಯ್ಕ, ಬೀದರ ಮಹಾನಗರ ಪಾಲಿಕೆಯ ಅಧ್ಯಕ್ಷ ಮಹಮ್ಮದ್ ಗೌಸ್, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ ಅವರುಗಳು ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಬೀದರ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ, ಬೀದರ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ್ ಬದೋಲೆ, ಬೀದರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರದೀಪ ಗುಂಟಿ, ಬೀದರ ಮಹಾನಗರ ಪಾಲಿಕೆಯ ಆಯುಕ್ತರಾದ ಮುಕುಲ್ ಜೈನ್ ಅವರುಗಳು ಭಾಗವಹಿಸಲಿದ್ದಾರೆ.

### ಮಾರ್ಚ್ 18 ರಿಂದ ಏಪ್ರಿಲ್ 2ರವರೆಗೆ ಎಸ್ಎಸ್ಎಲ್‌ಸಿ ವಾರ್ಷಿಕ ಪರೀಕ್ಷೆ

# ಅಕ್ರಮಗಳಿಗೆ ಆಸ್ಪದವಿಲ್ಲದೇ ಪಾರದರ್ಶಕ ಪರೀಕ್ಷೆಗೆ ಡಿಸಿ ಸೂಚನೆ



• ಮಲ್ಲಮ್ಮ ನುಡಿ ವಾರ್ತೆ
ವಿಜಯನಗರ

ಇದೇ ಮಾರ್ಚ್ 18 ರಿಂದ ಏಪ್ರಿಲ್ 2ರವರೆಗೆ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ-1 ನಡೆಯುತ್ತಿದ್ದು, ಪರೀಕ್ಷೆ ವೇಳೆ ಯಾವುದೇ ಅಕ್ರಮಗಳಿಗೆ ಎಡಮಾಡಿಕೊಡದೇಪಾರದರ್ಶಕವಾಗಿ ಮತ್ತು ಸುಗಮವಾಗಿ ನಡೆಸಲು ಅಧಿಕಾರಿಗಳುಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದರು.

ಶಾಲಾಶಿಕ್ಷಣ ಇಲಾಖೆವತಿಯಿಂದ ಆಯೋಜಿಸಲಾಗಿದ್ದ ಎಸ್.ಎಸ್.ಎಲ್.ಸಿ ಪರೀಕ್ಷಾ-1 ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಾರ್ಚ್ 18 ರಿಂದ ಏಪ್ರಿಲ್ 02 ರವರೆಗೆ ಜಿಲ್ಲಾ ಕೇಂದ್ರದಲ್ಲಿ 16, ತಾಲ್ಲೂಕು ಕೇಂದ್ರದಲ್ಲಿ 15, ಹೋಬಳಿ ಮಟ್ಟದಲ್ಲಿ 14 ಹಾಗೂ ಗ್ರಾಮೀಣ ಪ್ರದೇಶದಲ್ಲಿ 28 ಕೇಂದ್ರ ಸೇರಿ ಒಟ್ಟು 73 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ.

ಇದಕ್ಕಾಗಿ ಜಿಲ್ಲೆಯಲ್ಲಿ ಒಟ್ಟು 22,041 ವಿದ್ಯಾರ್ಥಿಗಳು ಪರೀಕ್ಷೆಗೆ ಎದುರಿಸಲಿದ್ದಾರೆ. ಪರೀಕ್ಷಾ ಕೇಂದ್ರಗಳಿಗೆನಿಗಧಿತಅವಧಿಯೊಳಗೆ ಪ್ರಶ್ನೆ ಪತ್ರಿಕೆ ರವಾನಿಸಬೇಕು. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಪೂರಕ ವಾತಾವರಣ, ಕೊಠಡಿ, ಕುಡಿಯುವ ನೀರು, ಶೌಚಾಲಯ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯ ಒದಗಿಸಬೇಕು. ಆರೋಗ್ಯ ಇಲಾಖೆಯಿಂದ ಪ್ರಥಮ ಚಿಕಿತ್ಸಾ ಕಿಟ್‌ನೊಂದಿಗೆ ಸಿಬ್ಬಂದಿ ನಿಯೋಜಿಸಬೇಕು. ಪರೀಕ್ಷೆ ಸಂದರ್ಭದಲ್ಲಿ ವಿದ್ಯುತ್ ವ್ಯತ್ಯಯವಾಗದಂತೆ ಜೆಸ್ಕಾಂ ಇಲಾಖೆ ಎಚ್ಚರವಹಿಸಬೇಕು. ವಿದ್ಯಾರ್ಥಿಗಳಿಗೆಅನುಕೂಲವಾಗುವಂತೆ ಕೆಎಸ್ಆರ್‌ಟಿಸಿ ಹೆಚ್ಚುವರಿ ಬಸ್ ಸೇವೆ ಕಲ್ಪಿಸುವಂತೆ ತಿಳಿಸಿದ ಅವರು, ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಕಡ್ಡಾಯವಾಗಿ ಸಿಸಿಟಿವಿ ಅಳವಡಿಬೇಕು. ಪರೀಕ್ಷಾ ಪ್ರಕ್ರಿಯೆಯನ್ನು ಜಿಲ್ಲಾ ಪಂಚಾಯತ್ ಕೆಸ್ವಾನ್ ನಲ್ಲಿ ತಂಡದೊಂದಿಗೆ ವೆಬ್ ಕಾಸ್ಟಿಂಗ್ ಮೂಲಕ ನಿರಂತರವಾಗಿ ಗಮನಿಸಲಾಗುವುದು ಎಂದು ತಿಳಿಸಿದರು.

ಪ್ರಶ್ನೆ ಪತ್ರಿಕೆಗಳನ್ನು ಜಿಲ್ಲಾ ಮತ್ತು ತಾಲ್ಲೂಕು ಖಜಾನೆಗಳಲ್ಲಿ ಪೊಲೀಸ್ ಭದ್ರತೆಯಲ್ಲಿ ರವಾನಿಸಬೇಕು. ಪರೀಕ್ಷೆ ಮುಗಿದ ನಂತರ ಪ್ರತಿದಿನ ಉತ್ತರ ಪತ್ರಿಕೆಗಳನ್ನು ಜಿಲ್ಲಾ ಕೇಂದ್ರದ ಭದ್ರತಾ ಕೊಠಡಿಯಲ್ಲಿ ಸುರಕ್ಷಿತವಾಗಿ ಸಂಗ್ರಹಿಸಬೇಕು ಎಂದ ಅವರು, ಅಧಿಕಾರಿಗಳಿಗೆ ಈಗಾಗಲೇ ಸಾಕಷ್ಟು ಪರೀಕ್ಷೆ ನಡೆಸಿದ ಅನುಭವಿದೆ. ಆದರೂ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಿ ಜಿಲ್ಲೆಗೆ ಕೀರ್ತಿ ತನ್ನಿ ಎಂದರು.

ಜಿಲ್ಲಾ ಪಂಚಾಯತ್ ಸಿಇಓ ನೋಂಗ್ಜಾಯ್ ಮಹ್ಮದ್ ಅಲಿ ಅಕ್ರಂ ಷಾ ಮಾತನಾಡಿ, ಕಲಿಕಾ ವಿಷಯದಲ್ಲಿ ತೀರಾ ಹಿಂದುಳಿದ ವಿದ್ಯಾರ್ಥಿಗಳಿಗೆ ಹೆಚ್ಚಿನ ಅಂಕ ಗಳಿಸಲು ಸೂಕ್ತ ನಿರ್ದೇಶನ ನೀಡಿ ಹುರಿದುಂಬಿಸಿ ಪ್ರೋತ್ಸಾಹಿಸಬೇಕು. ಈ ಮೂಲಕ ಫಲಿತಾಂಶ ವೃದ್ಧಿಗೆ ಅಧಿಕಾರಿಗಳು ಶ್ರಮಿಸಬೇಕು. ಪರೀಕ್ಷಾ ವೇಳೆ ಯಾವುದೇ ರೀತಿಯ ಸಮಸ್ಯೆ, ಗೊಂದಲಗಳು ಉಂಟಾದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನು ಅಥವಾ ಮೇಲಾಧಿಕಾರಿಗಳನ್ನು ಸಂಪರ್ಕಿಸಿ ಪರಿಹಾರ ಕಂಡುಕೊಳ್ಳಬಹುದು ಎಂದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜಾಹ್ನವಿ, ಡಿಡಿಪಿಐ ವೆಂಕಟೇಶ್, ಕ್ಷೇತ್ರ ಶಿಕ್ಷಣಾಧಿಕಾರಿ ಶೇಖರಪ್ಪ ಹೊರಪೇಟೆ ಸೇರಿದಂತೆ ಮತ್ತಿತರರು ಇದ್ದರು.

# ಉರಿಲಿಂಗಪೆದ್ದಿ ಶಾಖಾ ಮಠದಲ್ಲಿ ಇಫ್ತಾರ ಕೂಟ



• ಮಲ್ಲಮ್ಮ ನುಡಿ ವಾರ್ತೆ.
ಬಸವಕಲ್ಯಾಣ

ಪ್ರತಿಯೊಂದು ಧರ್ಮಗಳು ಒಳ್ಳೆಯ ವಿಚಾರ ಬೋಧಿಸುತ್ತವೆ. ಇಸ್ಲಾಂ ಧರ್ಮದ ಪ್ರವಾದಿ ಮಹ್ಮದ ಪೈಗಂಬರ್ ಅವರು ಸೌಹಾರ್ದ ಬೆಸೆಯುವ ಕಾರ್ಯ ಮಾಡಿದ್ದಾರೆ. ರಂಜಾನ್ ಒಂದು ತಿಂಗಳು ಶಾಂತಿ ಯ ಪ್ರತೀಕ ಇಫ್ತಾರ ಕೂಟದಿಂದ ಎಲ್ಲರೂ ಒಂದಾಗಿ ಸಹೋದರತೆ, ಸಮಾನತೆ, ಭಾತೃತ್ವ, ಭಾವೈಕ್ಯತೆ, ಸಮಾನತೆ, ಮನುಷ್ಯ ಪ್ರಜ್ಞೆ ಬೆಳೆಸುವ ಸಾರಸ್ವದ ಸಂಕೇತ ಇಫ್ತಾರ ಕೂಟ ಎಂದು ಹಿರಿಯ ಸಾಹಿತಿ ಡಾ.ಗವಿಸಿದ್ಧಪ್ಪ ಪಾಟೀಲ ಅಭಿಮತಪಟ್ಟರು.

ಇಲ್ಲಿನ ಬೇಲೂರು ಉರಿಲಿಂಗಪೆದ್ದಿಯ ಶಾಖಾ ಮಠದಲ್ಲಿ

ಏರ್ಪಡಿಸಿದ ಸಾಮೂಹಿಕ ಇಫ್ತಾರ ಕೂಟ ಮತ್ತು ಸೌಹಾರ್ದ ಪಥಿಕ ಸಿರಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿ ಇಂತಹ ಕೆಲಸ ಮಠಮಾನ್ಯ ಇತರ ಧರ್ಮೀ ಯರು ಮಾಡಬೇಕು. ಉರಿಲಿಂಗಪೆದ್ದಿ ಮಠದ ಪೂಜ್ಯಶ್ರೀ ಪಂಚಾಕ್ಷರಿ ಸ್ವಾಮಿಗಳು ಜಾತ್ಯಾತೀತವಾಗಿ ಎಲ್ಲರನ್ನೂ ಒಟ್ಟಾಗಿತಗೆದುಕೊಂಡು, ಸಾಮಾಜಿಕ, ಧಾರ್ಮಿಕ, ಸಾಹಿತ್ಯಿಕ ಸಾಂಸ್ಕೃತಿಕ ವಾಗಿ ಯಗೆದು-ಕೊಂಡು ಹೋಗುತ್ತಿದ್ದಾರೆ ಇಂತವರಿಗೆ ಬೆಂಬಲ ಸಹಕಾರ ಜನರು, ಸಮುದಾಯ, ಸರಕಾರ ನೀಡಬೇಕಾಗಿದೆ ಎಂದರು. ಬೇಲೂರಿನ

ಪೂಜ್ಯಶ್ರೀ ಪಂಚಾಕ್ಷರಿ ಸ್ವಾಮೀಜಿ ಮಾತನಾಡಿ ನಮ್ಮ ಮಠ ಗರೀಬರ ಮಠ ನಮ್ಮ ಕೈಲಾದ ಕೆಲಸ ಮಾಡಿದ್ದೇವೆ. ಎಲ್ಲರ ಜೊತೆ ಸೇರಿ ಒಂದಾದರೆ ಒಗ್ಗಟ್ಟು ಬರುತ್ತದೆ. ಬಸವಾದಿ ಶರಣರು, ಉರಿಲಿಂಗಪೆದ್ದಿ ಕೂಡಾ ಇದೇ ಕಾರ್ಯ ಮಾಡುತ್ತಾ ಬಂದವರು. ಕೋಮು ದ್ವೇಷ ಬೆಳೆಸದೇ ಕೋಮು ಸಾಮರಸ್ಯ ಬೆಳೆಸುಬ ಉದ್ದೇಶವಾಗಿದೆ ಎಂದರು

ಇಸ್ಲಾಂ ಧರ್ಮ ಇವತ್ತು ಬಸವಣ್ಣ ಮೊದಲಾದ ಶರಣರ, ಸಂತ, ಸೂಫಿಗಳು ಒಂದುಗೂಡಿಸಿದ ತತ್ವ, ಸಿದ್ಧಾಂತ ಅಳವಡಿಸಿಕೊಂಡು ಬಂದರೆ ಮಾನವೀಯತೆ ಬೆಳೆಯಲು ಸಾಧ್ಯ ಮನುಷ್ಯ ಹುಟ್ಟಿದ ಮೇಲೆ ಸಾವು ಖಚಿತ ಆ ಬದುಕಿನ ಅವಧಿಯಲ್ಲಿ ಸೌಹಾರ್ದತೆ ಬೆಸೆಯುವುದು ಅಗ್ಯತ್ಯವೆಂದು. ಅಬ್ದುಲ್ ಖಾದರ ಮಾತನಾಡಿದರು. ಈ ಸಂದರ್ಭದಲ್ಲಿ ಪಿಎ ಚಂದ್ರಕಾತ ನಾರಾಯಣಪುರೆ, ಹಿಂದುಳಿದ ವರ್ಗಗಳ ಇಲಾಖೆ ಭಾಲ್ಕಿ ಕಲ್ಯಾಣಾಧಿಕಾರಿ ರವೀಂದ್ರ ಮೇತ್ರೆ, ನೊಬೆಲ್ ಪಬ್ಲಿಕ್ ಸ್ಕೂಲ್ ಸಂಸ್ಥಾಪಕ ಅಬ್ದುಲ್ ಖಲೀಲ ಗೊಬರೆ ಅವರಿಗೆ ಸೌಹಾರ್ದ ಪಥಿಕ ಸಿರಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಪ್ರಶಸ್ತಿ ಪುರಸ್ಕೃತರಾದ ಪಿಎ ಚಂದ್ರಕಾಂತ ನಾಯಾರಣಪುರ ಮಾತನಾಡಿ ಇಂತಹ ಕೂಟದಿಂದ ಸಾಮರಸ್ಯ ತರಲು ಸಾಧ್ಯ. ನಮ್ಮ ಸೇವೆ ಗುರುತಿಸಿದ್ದಕ್ಕೆ ಧನ್ಯವಾದ ಅರ್ಪಿಸಿದರು. ಮಾಜಿ ವಿಧಾನ ಪರಿಷತ್ ಸದಸ್ಯ ವಿಜಯಸಿಂಗ್. ಅಕ್ಷರದಾಸೋಹದ ಸಂಜುಕುಮಾರ್ ಕಾಂಗೆ,

ಸಂಜೀವ ಜಾದವ, ನಾಗನಾಥ ಚಾಮ್ಮಲ್ಲೆ, ಡಾ ಜಭಿಯಾ, ಎಂ,ಡಿ ಮಸ್ತಾಪ, ನೂರ ಸರ್, ಇಮಾಮುದ್ದಿನ, ಡಾ ಬಾಲಕೃಷ್ಣ ರಾಠೋಡ, ಅನ್ನಪೂರ್ಣ ಅಂಬಾರಾಯ ಸಂಗೋಳಕರ, ನಿತ್ಯಾನಂದ ಮಂತಾಳಕರ್, ಗೌತಮ್ ವಾಗ್ಮರೆ, ಶಿವಕುಮಾರ ಕಾಂಗೆ, ಅಶೋಕ ಗುಪ್ತಾ, ಶಿಕ್ಷಕರಾದ ನಾಗಪ್ಪ ನಿಣ್ಣೆ, ಭಿಮಶಾ ವಾಘಮಾರೆ, ದೀಪಕ ಸಿಂಗೆ, ವಿಜಯ ಲಕ್ಷ್ಮಿ ರಾಧು, ಸರಸ್ವತಿ ಗಾಯಕವಾಡ, ಅನುಸಯ್ಯಾ ಮಂತಾಳಕರ್, ಸಿದ್ದು ಕೋಣೆಗಳು, ಈಶ್ವರತಡೋಳಾ, ಕಲ್ಲಪ್ಪ ಬೇಲೂರು ಶ್ರೀಪತಿ ಸಖರಾಮ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಮಹಾಲಿಂಗದೇವರು ಸ್ವಾಗತಿಸಿದರು. ಮಹ್ಮದ ಮುಸ್ತಾನ ನಿರೂಪಿಸಿದರು. ವಕೀಲರಾದ ಸಂಜುಕುಮಾರ ಖೇಲೆ ವಂದಿಸಿದರು.

# ಬಲಗೈ ಸಮುದಾಯಗಳ ಒಕ್ಕೂಟ ಸಮಿತಿಯಿಂದ ಪ್ರತಿರೋಧ ಪ್ರತಿಭಟನಾ ರ್‍ಯಾಲಿ



• ಮಲ್ಲಮ್ಮ ನುಡಿ ವಾರ್ತೆ
ಭಾಲ್ಕಿ

ನ್ಯಾಯಮೂರ್ತಿ ನಾಗಮೋಹನದಾಸ್ ರವರ ಅವೈಜ್ಞಾನಿಕ ವರದಿಯನ್ನು ಖಂಡಿಸಿ ಶನಿವಾರ ಬಲಗೈ ಸಮುದಾಯಗಳ ಒಕ್ಕೂಟ ಸಮಿತಿವತಿಯಿಂದ ಬ್ರಹತ್ ಪ್ರತಿರೋಧ ಪ್ರತಿಭಟನಾ ರ್‍ಯಾಲಿ ನಡೆಯಿತು. ಬಲಗೈ ಸಮುದಾಯದ ಸಾವಿರಾರು ಜನರು ನೀಲಿ ಧ್ವಜಹಿಡಿದು ಪ್ರತಿಭಟನಾ ರ್‍ಯಾಲಿಯಲ್ಲಿ ಭಾಗವಹಿಸಿದ್ದರು. ಮೆರವಣಿಗೆಯುದ್ದಕ್ಕೂ ನ್ಯಾಯಕ್ಕಾಗಿ ಹೋರಾಟ, ಬಲಗೈ ಸಮುದಾಯದ ಜನರಿಗೆ ಅನ್ಯಾಯಮಾಡುತಿರು ಕಾಂಗ್ರೆಸ್ ಸರ್ಕಾರಕ್ಕೆ ಧಿಕ್ಕಾರ ಎನ್ನುವ ಘೋಷಣೆಗಳು ಮುಗಿಲು ಮುಟ್ಟಿದ್ದವು.

ಪ್ರತಿಭಟನಾ ರ್‍ಯಾಲಿಯು ಪಟ್ಟಣದ ಭಾಲ್ಕೇಶ್ವರ ಮಂದಿರದಿಂದ ಪ್ರಾರಂಭವಾಗಿ ಮಹಾತ್ಮಾ ಜ್ಯೋತಿಬಾ ಫುಲೆ ವೃತ್ತದ ಮೂಲಕ ಹಾದು ಗಾಂಧಿವೃತ್ತ, ಬಸವೇಶ್ವರ ವೃತ್ತದ ಮೂಲಕ ಸಾಗಿ ಡಾ|ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ಸಮಾವೇಶ ಗೊಂಡಿತು. ನಂತರ ಮಾತನಾಡಿದ ಪ್ರತಿಭಟನಾಕಾರರು, ದೇಶದ ಬಹುಸಂಖ್ಯಾತ ಪರಿಶಿಷ್ಟ ಜ್ಯಾತಿ ಸಂಭಂಧಿತ ಜಾತಿಗಳು ಶತಶತಮಾನಗಳಿಂದ ಸಾಮಾಜಿಕ ಸಮಾನತೆ, ಶಿಕ್ಷಣ, ಉದ್ಯೋಗ ಮತ್ತು ಅಧಿಕಾರಗಳಿಂದ ವಂಚಿತರಾಗಿದ್ದು, ಬಾಬಾ ಸಾಹೇಬ ಅಂಬೇಡ್ಕರ್ ರವರ ನಿರಂತರ ಶ್ರಮದ ಫಲದಿಂದ ಈ ದೇಶಕ್ಕೆ ನೀಡಿದ ಸಂವಿಧಾನದಿಂದಾಗಿ ದೊರೆತ ಮೀಸಲಾತಿಯಿಂದ ಒಂದೆ-ರಡು ತಲೆಮಾರಿನಿಂದ ಶಿಕ್ಷಣ, ಉದ್ಯೋಗದಲ್ಲಿ ಅವಕಾಶವನ್ನು ಪಡೆದು ಪರಿಶಿಷ್ಟ ಸಮುದಾಯ ಸಮಾಜದ ಮುಂಚೂಣಿಗೆ ಬರುತ್ತಿರುವುದನ್ನು ಸಹಿಸದ ಜಾತಿವಾದಿಗಳು ಒಳಮೀಸಲಾತಿಯ ಹೆಸರಿನಲ್ಲಿ ಬಲಗೈ ಸಂಭಂದಿತ ಜಾತಿಗಳನ್ನು ಹೊರಗಿಡುವ ಹುನ್ನಾರ ನಡೆಸುತ್ತಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನಾ ಮೆರವಣಿಗೆಯಲ್ಲಿ ಪ್ರಮುಖರಾದ ವಿಲಾಸ ಮೋರೆ, ಸುರೇಶ ಕಾನೇಕರ, ವಿಶ್ವನಾಥ ಮೋರೆ, ರಾಜಕುಮಾರ ಮೋರೆ, ಅಶೋಕ ಗಾಯಕವಾಡ, ವಿಠಲದಾಸ ಪ್ಯಾಗೆ, ಸಂಜು ಭಾವಿಕಟ್ಟೆ, ಓಂಕಾರ ಮೋರೆ, ವಿಲಾಸ.ಎ.ಮೋರೆ, ವಿಯಕುಮಾರ ಗಾಯಕವಾಡ, ಶಿವಕುಮಾರ ಮೇತ್ರೆ, ಮಾರಿತು ಭಾವಿಕಟ್ಟೆ, ಪ್ರಕಾಶ ಭಾವಿಕಟ್ಟೆ, ಕೀರ್ತಿರತನ ಸೋನಾಳೆ, ಮಾರುತಿ ಭಂಗಾರೆ, ಜೈಪಾಲ ಬೋರಾಳೆ, ಲಕ್ಷಣ ಗುಪ್ತಾ, ಶ್ರಾವಣ ಗಾಯಕವಾಡ, ತಿಪ್ಪಣ್ಣ ಶಿವಪೂರೆ, ಮನೋಹರ ಮೋರೆ, ಪ್ರಶಾಂತ ಕೊಟಗೀರಾ, ಶಿವಕುಮಾರ ಭಂಗಾರೆ, ಕಪೀಪ ಗೊಡಬೋಲೆ, ಜೈಪ್ರಕಾಶ ಭೌದ್ಧೆ, ಬಸವರಾಜ ಭಾವಿಕಟ್ಟೆ, ಮಾರುತಿ ಕಂಟೆ, ಡಿ.ಡಿ.ಸಿಂಧೆ, ಡಾ|ಕಾಶಿನಾಥ ಚಲವಾ, ಅರವಿಂದ ಗಾಯಕವಾಡ, ವೀರಶೆಟ್ಟಿ ಮೂಲಗೆ, ಶಿವರಾಜ ಮೋರೆ, ಲವಕುಶ ಕಾಂಬಳೆ, ಪ್ರವೀಣ ಮೋರೆ, ವಿನೋದ ವಾನಖೆಡೆ, ರಾಹುಲ ಬೌದ್ಧೆ, ಅದೇಶ ಭಾವಿಕಟ್ಟೆ, ಅಮರ ಖರ್ಗೆ, ರಾಜು ದಂಡೆ ಸೇರಿದಂತೆ ಹಲವರು ಇದ್ದರು.

# ಹೊಲಿಗೆ ಯಂತ್ರ ವಿತರಣೆ ಕಾರ್ಯಕ್ರಮ ಯಶಸ್ವಿ

• ಮಲ್ಲಮ್ಮ ನುಡಿ ವಾರ್ತೆ
ಬೀದರ



ದಕ್ಷಿಣ ಕ್ಷೇತ್ರದಲ್ಲಿ ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಅನುದಾನದಡಿ ಅರ್ಹ ಫಲಾನುಭವಿಗಳಿಗೆ ಹೊಲಿಗೆ ಯಂತ್ರಗಳನ್ನು ವಿತರಿಸುವ ಕಾರ್ಯಕ್ರಮ ಶಾಸಕಕರ ಕಚೇರಿಯಲ್ಲಿ ವಿಜೃಂಭಣೆಯಿಂದ ನೆರವೇರಿತು. ಈ ಕಾರ್ಯಕ್ರಮದಲ್ಲಿ ಅನೇಕ ಮಹಿಳಾ ಫಲಾನುಭವಿಗಳು ಭಾಗವಹಿಸಿ ಸರ್ಕಾರದ ಜನಪರ ಯೋಜನೆಯ ಸದುಪಯೋಗ ಪಡೆದುಕೊಂಡರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಶಾಸಕರಾದ ಡಾ.ಶೈಲೇಂದ್ರ ಬೆಲ್ದಾಳೆ ಅವರು ಹಿಂದುಳಿದ ವರ್ಗಗಳ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗೆ ಹಲವು ಪರಿಣಾಮಕಾರಿ ಯೋಜನೆಗಳನ್ನು ಜಾರಿಗೆ ತಂದಿದ್ದು, ಅವುಗಳ ಸದುಪಯೋಗವನ್ನು ಪ್ರತಿಯೊಬ್ಬ ಅರ್ಹರು ಪಡೆಯಬೇಕು ಎಂದು ಕರೆ ನೀಡಿದರು.

ಮಹಿಳೆಯರು ಸ್ವಯಂ ಉದ್ಯೋಗವನ್ನು ಅಳವಡಿಸಿಕೊಂಡು ಆತ್ಮನಿರ್ಭರರಾಗಬೇಕು, ಕುಟುಂಬದ ಆದಾಯವನ್ನು ಹೆಚ್ಚಿಸಬೇಕು ಹಾಗೂ ಸಮಾಜದಲ್ಲಿ ಮಾದರಿಯಾಗಬೇಕು ಎಂದು ಅವರು ಹೇಳಿದರು. ಮಹಿಳೆಯರ ಸಬಲೀಕರಣವೇ ಸಮಾಜದ ಸಮಗ್ರ ಅಭಿವೃದ್ಧಿಗೆ ಮೂಲಸ್ತಂಭವಾಗಿದ್ದು, ಈ ರೀತಿಯ ಯೋಜನೆಗಳು ಅವರ ಬದುಕಿನಲ್ಲಿ ಮಹತ್ವದ ಬದಲಾವಣೆಯನ್ನು ತರಲಿವೆ ಎಂದು ತಿಳಿಸಿದರು.

ಹೊಲಿಗೆ ಯಂತ್ರಗಳ ವಿತರಣೆಯಿಂದ ಮಹಿಳೆಯರಿಗೆ ಮನೆಯಲ್ಲಿಯೇ ಉದ್ಯೋಗ ಸೃಷ್ಟಿಯಾಗಲಿದ್ದು, ಸಣ್ಣ ಮಟ್ಟದ ಕೈಗಾರಿಕಾ ಚಟುವಟಿಕೆಗಳಿಗೆ ಉತ್ತೇಜನ ದೊರೆಯಲಿದೆ. ಇದರ ಮೂಲಕ ಮಹಿಳೆಯರು ತಮ್ಮ ಸಮಯವನ್ನು ಸಮರ್ಪಕವಾಗಿ ಬಳಸಿಕೊಂಡು ಆದಾಯ ಗಳಿಸಲು ಸಾಧ್ಯವಾಗುತ್ತದೆ. ಗ್ರಾಮೀಣ ಹಾಗೂ ನಗರ ಬಡ ಮಹಿಳೆಯರಿಗೆ ಇದು ಶಾಶ್ವತ ಆರ್ಥಿಕ ನೆರವಾಗಲಿದ್ದು, ಕುಟುಂಬದ ಆರ್ಥಿಕ ಸ್ಥಿತಿಯನ್ನು ಬಲಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ ಎಂದು ಶಾಸಕರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಮಾತನಾಡಿದ ಅಧಿಕಾರಿಗಳು, ಯೋಜನೆಯ ಆಯ್ಕೆ ಪ್ರಕ್ರಿಯೆ ಸಂಪೂರ್ಣ ಪಾರದರ್ಶಕವಾಗಿದ್ದು, ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದರು. ಯೋಜನೆಯ ಉದ್ದೇಶ ನಿಜವಾದ ಫಲಾನುಭವಿಗಳಿಗೆ ನೆರವು ಒದಗಿಸುವುದಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಅರ್ಹರಿಗೆ ಸೌಲಭ್ಯಗಳನ್ನು ವಿಸ್ತರಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಹೇಳಿದರು.

ಫಲಾನುಭವಿಗಳು ಸರ್ಕಾರ ಹಾಗೂ ಶಾಸಕರಿಗೆ ಕೃತಜ್ಞತೆ ಸಲ್ಲಿಸಿ, ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಸ್ವಾವಲಂಬಿ ಬದುಕು ನಡೆಸುವ ವಿಶ್ವಾಸ ವ್ಯಕ್ತಪಡಿಸಿದರು.

ಸಮಾಜದ ಹಿಂದುಳಿದ ವರ್ಗಗಳ ಆರ್ಥಿಕ ಸಬಲೀಕರಣದತ್ತ ಇದು ಮಹತ್ವದ ಹೆಜ್ಜೆಯಾಗಿದ್ದು, ಕ್ಷೇತ್ರದ ಅಭಿವೃದ್ಧಿಗೆ ಮತ್ತೊಂದು ಮೈಲಿಗಲ್ಲಾಗಿದೆ.

ಈ ಸಂದರ್ಭದಲ್ಲಿ ತಾಲ್ಲೂಕು ಸಹಾಯಕ ಅಭಿವೃದ್ಧಿ ಅಧಿಕಾರಿ ರಮೇಶ ಹೆಗ್ಗೆ, ಮುಖಂಡರಾದ ಸುರೇಶ್ ಮಾಶೆಟ್ಟಿ, ಶಣ್ಮುಕಪ್ಪ ಕಾರಕಂಪಳ್ಳಿ, ಅಶೋಕ ರೆಡ್ಡಿ, ನಾಗಶೆಟ್ಟಿ ಚಟನಳ್ಳಿ, ಕಾಶಿನಾಥ ಅಲ್ಲಿ, ಸುಭಾಷ ಮಟಗೆ, ಉದಯ ಮಹಾರಾಜ, ಪುಂಡಲೀಕ ಟುಬಾಕ, ಜನಾರ್ದನ ರೆಡ್ಡಿ, ಪರಮೇಶ ಪಾಟೀಲ, ಮಹೇಶ ತೋರಣ, ಶೈಲೇಶ, ಸಿದ್ದಾರೂಢ ಭಾಲ್ಕೆ, ಸೂರ್ಯಕಾಂತ, ಸೂರ್ಯಕಾಂತ ಗುನ್ನಳ್ಳಿ ಮತ್ತಿತರರು ಉಪಸ್ಥಿತರಿದ್ದರು.

# ಪಿ.ಲಂಕೇಶ ದಿಟ್ಟ ನಿಲುವಿನ ವಿಶಿಷ್ಟ ಶೈಲಿಯ ಬರಹಗಾರರು: ಮೈನಾಳೆ



• ಮಲ್ಲಮ್ಮ ನುಡಿ ವಾರ್ತೆ
ಕಮಲನಗರ

ಪಿ.ಲಂಕೇಶ ಕನ್ನಡ ಸಾಹಿತ್ಯ ಮತ್ತು ಪತ್ರಿಕೋದ್ಯಮದ ದಿಗ್ಗಜ, ಕವಿ, ಕಾದಂಬರಿಗಾರ, ನಾಟಕಗಾರ, ಅನುವಾದಕ ಮತ್ತು ಚಲನಚಿತ್ರನಿರ್ದೇಶಕದ ಜೊತೆಗೆ 'ಲಂಕೇಶ ಪತ್ರಿಕೆ' ಮೂಲಕ ದಿಟ್ಟ ಪತ್ರಿಕೋದ್ಯಮವನ್ನು ಪ್ರತಿಪಾದಿಸಿದ ಅವರು, ತಮ್ಮ ವಿಶಿಷ್ಟಶೈಲಿಯ ಬರವಣಿಗೆಯಿಂದ ಕನ್ನಡ ನವ್ಯ ಸಾಹಿತ್ಯದ ಪ್ರಮುಖ ಧ್ವನಿಯಾಗಿದ್ದರು ಎಂದು ವಿಶ್ರಾಂತ ಪ್ರಾಂಶುಪಾಲ ಡಾ. ಎಸ್.ಎಸ್. ಮೈನಾಳೆ ಹೇಳಿದರು.

ಪಟ್ಟಣದ ಸಿದ್ದರಾಮೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿ ಬೆಂಗಳೂರು ಮತ್ತು ಜಿಲ್ಲಾ ಚ-ಕೋರ ಸಾಹಿತ್ಯ ವಿಚಾರ ವೇದಿಕೆ ಬೀದರ್ ಹಾಗೂ ಕಾಲೇಜ್ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಪಿ.ಲಂಕೇಶರ ಸಾಹಿತ್ಯ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮ-14 ಉದ್ಘಾಟಿಸಿ ಅವರು ಮಾತನಾಡಿದರು.

ವಿಶೇಷ ಉಪನ್ಯಾಸ ನೀಡಿದ ಪಾಂಶುಪಾಲ ಶಿವಾಜಿ ಆರ್.ಎಚ್ ಮಾತನಾಡಿ ಪಾಳ್ಯದ ಲಂಕೇಶ ಅವರು ದಲಿತ ಮತ್ತು ರೈತರ ಚಳುವಳಿಗಳ ಕಾರ್ಯಕರ್ತರ ಒಡನಾಡಿಗಳಾಗಿದ್ದರು. ಲೋಹಿಯಾವಾದಿ ವಿಚಾರಗಳನ್ನು ಮೈಗೂಡಿಸಿಕೊಂಡ ಅವರು ದಲಿತ ಮತ್ತು ಶೋಷಿತರ ಪರವಾದ ಸಾಮಾಜಿಕ ಅಂಶಗಳನ್ನು ಮುಂದಿಟ್ಟುಕೊಂಡು ಹೋರಾಟ ನಡೆಸಿದರು. ಪತ್ರಿಕೆಯಲ್ಲಿ ರಾಜಕಾರಣಿಗಳ ವಿರುದ್ಧ ಹರಿತ ಲೇಖನ ಪ್ರಕಟಿಸಿ ಸಾಮಾಜಿಕ ಮತ್ತು ರಾಜಕೀಯ ನ್ಯಾಯ ಒದಗಿಸಿಕೊಟ್ಟವರಲ್ಲಿ ಪ್ರಮುಖರಲ್ಲಿ ಪ್ರಮುಖರಾಗಿದ್ದವರು ಎಂದು ಬಣ್ಣಿಸಿದರು.

ಎಸ್ ಎಸ್ ಡಿಗ್ರಿ ಕಾಲೇಜ್ ಪ್ರಾಚಾರ್ಯ ಡಾ.ರಮೇಶ ಎಸ್. ಚವ್ಹಾಣ ಸಭೆ ಅಧ್ಯಕ್ಷತೆ ವಹಿಸಿದರು. ರಾಜ್ಯ ಸರಕಾರಿ ನೌಕರರ ಸಂಘದ ತಾಲೂಕಾಧ್ಯಕ್ಷ ಡಾ.ಸುನೀಲ ಕಸ್ತೂರೆ ಮತ್ತು ಎಸ್ ಎನ್ ಶಿವಣಕರ್ ಮಾತನಾಡಿದರು.

ಚಕೋರ ಸಾಹಿತ್ಯ ವಿಚಾರ ವೇದಿಕೆ ಜಿಲ್ಲಾ ಸಂಚಾಲಕಿ ಡಾ.ಮುಕ್ತಂಬಿ ಎಂ, ದೈಹಿಕ ಶಿಕ್ಷಣದ ನಿರ್ದೇಶಕ ಡಾ.ಮಂಜುನಾಥ, ಉಪ ಪ್ರಾಚಾರ್ಯ ಪ್ರವೀಣ. ಆರ್.ಸಿಂಧೆ, ಆಟಿಆಯ್ ಕಾಲೇಜ್ ಪ್ರಾಚಾರ್ಯ ಯುವರಾಜ ಬಿರಾದಾರ, ಎಎಸ್ ಯೋಜನಾಧಿಕಾರಿ ಡಾ.ಬಾಲಾಜಿ ಬೊಂಡಲೆ, ವಿಜಯಕುಮಾರ ವಾರದ್, ಶಿವಶಂಕರ ಕಾಂಬಳೆ ಸೇರಿದಂತೆ ಕಾಲೇಜು ವಿದ್ಯಾರ್ಥಿಗಳು ಇದ್ದರು.

# ಮಹಿಳೆಯರು ಗ್ಯಾರಂಟಿ ಯೋಜನೆಗಳ ಸದುಪಯೋಗ ಪಡೆದುಕೊಳ್ಳಿ: ಅಫ್ಸರಮಿಯಾ

• ಮಲ್ಲಮ್ಮ ನುಡಿ ವಾರ್ತೆ
ಹುಮನಾಬಾದ



ಮಹಿಳೆಯರು ಸಬಲೀಕರಣಗೊಳ್ಳಲು ಕಾಂಗ್ರೆಸ್ ಸರ್ಕಾರ ಅನ್ನಭಾಗ್ಯ, ಗೃಹಲಕ್ಷ್ಮೀ, ಗೃಹ ಜ್ಯೋತಿ, ಶಕ್ತಿ ಯೋಜನೆಗಳನ್ನು ಜಾರಿಗೆ ತಂದಿದೆ ಎಂದು ತಾಲೂಕ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಅಫ್ಸರಮಿಯಾ ತಿಳಿಸಿದರು. ತಾಲೂಕಿನ ಸಿಂಧನಕೇರಾ ಗ್ರಾಮ ಪಂಚಾಯತ್

ಆವರಣದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ತಾಲೂಕ ಪಂಚ ಗ್ಯಾರೆಂಟಿ ಯೋಜನೆಗಳ ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರು ಈ ಪಂಚ ಗ್ಯಾರೆಂಟಿ ಯೋಜನೆ ಪ್ರತಿ ಹಳ್ಳಿಯ ಪ್ರತಿ ಮನೆ ಮನೆಗೆ ಮುಟ್ಟಿಸಲು ನಮಗೆ ಆದೇಶ ಮಾಡಿದ್ದಾರೆ ಎಂದರು. ಈ ಯೋಜನೆಯಿಂದ ವಂಚಿತರಾದವರು ನಮ್ಮನ್ನು ಸಂಪರ್ಕಿಸಿ ಎಂದು ಹೇಳಿದರು. ಪಂಚ ಗ್ಯಾ-ರೆಂಟಿ ಯೋಜನೆಗಳನ್ನು ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ದೀಪಿಕಾ ನಾಯಕ ಮಾತನಾಡಿ, ಯೋಜನೆಗಳ ಬಗ್ಗೆ ಸಮಗ್ರ ಮಾಹಿತಿ ನೀಡಿ, ತಾಲೂಕಿನಲ್ಲಿ ಇನ್ನು ಗ್ಯಾರೆಂಟಿ ಯೋಜನೆಗಳು ಯಾರಿಗೆ ಸಿಗುತ್ತಿಲ್ಲ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸಂಪರ್ಕಿಸಿ ಯೋಜನೆಯ ಲಾಭ ಪಡೆದುಕೊಳಬೇಕು ಎಂದು ತಿಳಿಸಿದರು. ಶಿವಕುಮಾರ ಬೆಳಕೇರಿ ಮಾತನಾಡಿ, 2023ರ ವಿಧಾನಸಭೆ ಚುನಾವಣೆಯಲ್ಲಿ ನೀಡಿದ ಭರವಸೆಯಂತೆ ಗ್ಯಾರಂಟಿ ಯೋಜನೆ ಜಾರಿಗೊಳಿಸಿ, ಕೊಟ್ಟ ಮಾತಿನಂತೆ ನಮ್ಮ ಕಾಂಗ್ರೆಸ್ ಸರ್ಕಾರ ನಡೆದು-ಕೊಂಡಿದ್ದೇ ಎಂದರು. ಶಂಕರನಾಗ್ ಸಾಹುಕಾರ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಪಂಚ ಗ್ಯಾರೆಂಟಿ ಅನುಷ್ಠಾನ ಸಮಿತಿ ಸದಸ್ಯರಾದ ಲಕ್ಷ್ಮಣ ಸುಂಗೆ, ರಂಜಿತ ಮಾನಕರೆ, ಜೀವನ ಫುಲೇ, ಮೋಜಸ್ ಮಿತ್ರಾ, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸುಗಂಧ ಸೇರಿದಂತೆ ತಾಲೂಕ ಮಟ್ಟದ ಅನುಷ್ಠಾನ ಅಧಿಕಾರಿಗಳು, ಗ್ರಾಮದ ಪ್ರಮುಖರು, ಮಹಿಳೆಯರು ಉಪಸ್ಥಿತರಿದ್ದರು.

# ಡಿ.ಡಿ.ಯು: ಮಕ್ಕಳಿಗೆ ಬೀಳ್ಕೊಡುಗೆ ಸಮಾರಂಭ



ಮಲ್ಲಮ್ಮನುಡಿ ವಾರ್ತೆ ಯಾದಗಿರಿ

ಯಾದಗಿರಿ ನಗರದ ಡಿ ದೇವರಾಜ ಅರಸ್ ಪ್ರೌಢ ಶಾಲೆ ಯಾದಗಿರಿಯಲ್ಲಿಂದು 2025-26ನೇ ಸಾಲಿನ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭವನ್ನು ಹಮ್ಮಿಕೊಳ್ಳಲಾಯಿತು.

ಈ ಬೀಳ್ಕೊಡುಗೆ ಸಮಾರಂಭಕ್ಕೆ ಉದ್ಘಾಟಕರಾಗಿ ಡಿಡಿಯು ಸಮೂಹ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿಗಳಾದ ಮಲ್ಲಿಕಾರ್ಜುನ ಮೇಟಿ ಉದ್ಘಾಟಿಸಿದರು. ನಿಂಗಣ್ಣ ಹೊಸಮನಿ, ಗೋಪಾಲಕೃಷ್ಣ, ಬಬಿನ್ ರಾಜ್, ರಾಜೇಶ್ ಕುಮಾರ, ಜ್ಯೋತಿ ಬೆಳಗಿದರು. ಮುಖ್ಯಅತಿಥಿಗಳಾಗಿ ಗುರುಶಾಂತಪ್ಪ ಬಬಲಾದ ಅವರು ಉಪಸ್ಥಿತರಿದ್ದರು. ಮುಖ್ಯ ಶಿಕ್ಷಕರಾದ ವೆಂಕಟೇಶ ಪೂಜಾರಿ ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದರು. ಸತತ ಪ್ರಯತ್ನವೇ ಸಾಧನೆಯ ರಹಸ್ಯ, ನಿರ್ಭಯವಾಗಿ ಪರೀಕ್ಷೆಗಳನ್ನು ಎದುರಿಸಿ ಎಂದು ಮುಖ್ಯ ಅತಿಥಿಗಳಾದ ಗುರುಬಸಪ್ಪ ಬದಲಾದ ಮಾತನಾಡಿದರು. ಈ ಕಾರ್ಯಕ್ರಮವನ್ನು ವಿದ್ಯಾರ್ಥಿಗಳಾದ ವರ್ಷ, ವಿಶಾಲ್ ನಿರೂಪಿಸಿದರು, ಆಕಾಶ ಸ್ವಾಗತಿಸಿದರು, ಅಂಬರೇಶಗೌಡ ವಂದಿಸಿದರು. ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ಮೇಟಿ ಆಡಳಿತಾಧಿಕಾರಿಗಳು, ಡಿಡಿಯು ಸಮೂಹ ಶಿಕ್ಷಣ ಸಂಸ್ಥೆಗಳು, ಸಿಬಿಎಸ್ಇ ವಿಭಾಗದ ಮುಖ್ಯಸ್ಥರಾದ ಬಬಿನ್ ರಾಜ್, ಐಸಿಎ ವಿಭಾಗದ ಮುಖ್ಯಸ್ಥರಾದ ರಾಜೇಶ್ ಕುಮಾರ್, ಕಾಲೇಜಿನ ಪ್ರಾಂಶುಪಾಲರಾದ ಗೋಪಾಲ ಕೃಷ್ಣ, ಬಾಲಕರ ವಸತಿ ನಿಲಯದ ಮೇಲ್ವಿಚಾರಕರಾದ ನಿಂಗಣ್ಣ ಹೊಸಮನಿ, ಮುಖ್ಯ ಶಿಕ್ಷಕರಾದ ವೆಂಕಟೇಶ ಪೂಜಾರಿ, ಹಾಗೂ ಶಿಕ್ಷಕರಾದ ಕವಿತಾ ಪಾಟೀಲ್, ಹುಚ್ಚಪ್ಪ ದೇವರಗೋನಾಲ, ಅಯ್ಯಣ್ಣ ಕೆ, ಪ್ರಭುಮೈಲಾರಿ, ಸರೀತಾಕುಮಾರಿ, ನಸರೀನ್ ಬೇಗಂ, ಈರಮ್ಮ, ಮಹಮ್ಮದ್ ಸೌದಾಗರ, ಹಾಗೂ ಮುದ್ದು ಮಕ್ಕಳು ಮತ್ತು ಯಲ್ಲಮ್ಮ ಇನ್ನಿತರರು ಉಪಸ್ಥಿತರಿದ್ದರು.

# ಮಕ್ಕಳಿಗಾಗಿ ಆಸ್ತಿ ಮಾಡಬೇಡಿ ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡಿ:ಚನ್ನಾರಡ್ಡಿ ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.

ಅಂಗನವಾಡಿ ಕೇಂದ್ರಗಳಲ್ಲಿ ಅಂಗನವಾಡಿ ಮಕ್ಕಳಿಗಾಗಿ ಬಾಲಮೇಳ ಕಾರ್ಯಕ್ರಮ ಮಾಡುತ್ತಿರುವುದು ಪ್ರಶಂಸನೀಯ, ಮಕ್ಕಳಿಗಾಗಿ ಆಸ್ತಿ ಮಾಡಬೇಡಿ ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡಿ ಎಂದು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರ ಹೇಳಿದರು. ತಾಲೂಕಿನ ಕುರಕುಂದಾ ಗ್ರಾಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆ ಶಹಾಪೂರ ಹಾಗೂ ಅಜೀಮ್ ಪ್ರೇಮ್ ಜೀ ಫೌಂಡೇಶನ್ ಜಿಲ್ಲಾ ಸಂಸ್ಥೆ ಯಾದಗಿರಿ ಇವರ ಸಂಯುಕ್ತಾಶ್ರಯದಲ್ಲಿ ಶನಿವಾರ ನಡೆದ ಬಾಲಮೇಳ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.ಈ ಕಾರ್ಯಕ್ರಮ ಮಾಡುವ ಉದ್ದೇಶ ಪಾಲಕರು ಅಂಗನವಾಡಿ ಕೇಂದ್ರಗಳಲ್ಲಿ ತಮ್ಮ ಮಕ್ಕಳನ್ನು ಕಡ್ಡಾಯವಾಗಿ ನೊಂದಾಯಿಸಿಕೊಳ್ಳಬೇಕು,ಮಕ್ಕಳು ಬಾಲ್ಯಾವಸ್ಥೆಯಿಂದಲೇ ಅವರ ಬೌದ್ಧಿಕ, ಮಾನಸಿಕ,ದೈಹಿಕ,ಬೆಳವಣಿಗೆ,ಆರೋಗ್ಯ ಸ್ಥಿತಿ ಗತಿ ತಿಳಿಯುವಂತಾಗಬೇಕು. ಮತ್ತು ಅಂಗನವಾಡಿಗಳಲ್ಲಿ ಮಗುವಿಗೆ ಗರ್ಭಿಣಿ ತಾಯಂದಿರಿಗೆ ದೊರೆಯುವ ಸೌಲಭ್ಯಗಳ ಅರಿವು ಮೂಡಿಸಲು, ಮತ್ತು ಮಕ್ಕಳಲ್ಲಿ ಅಡಗಿದ ಸೂಪ್ತ ಪ್ರತಿಭೆಯನ್ನು ಗುರುತಿಸಲು ಈ ಕಾರ್ಯಕ್ರಮ ಉಪಯುಕ್ತವಾಗಿದ್ದು ಇದರ ಸದುಪಯೋಗ ಪಡೆದುಕೊಳ್ಳಿ ಎಂದು ಹೇಳಿದರು.ಪಾಲಕರು ಮಕ್ಕಳಿಗಾಗಿ ಆಸ್ತಿ ಮಾಡದೇ ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡಬೇಕು, ಚಿಕ್ಕವಯಸ್ಸಿನಲ್ಲೇ ಮಕ್ಕಳಿಗೆ ಪ್ರೀತಿ ವಾತ್ಸಲ್ಯ, ಸಂಸ್ಕೃತಿ ಸಂಸ್ಕಾರ ನೀಡಿ ಭವಿಷ್ಯದಲ್ಲಿ ನಿಮ್ಮ ಮಗುವನ್ನು ಈ ದೇಶದ ಈ ನಾಡಿನ ಆಸ್ತಿಯನ್ನಾಗಿ ಮಾಡಬೇಕು ಎಂದು ಪಾಲಕರಲ್ಲಿ ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ಅಂಗನವಾಡಿ ಕೇಂದ್ರಗಳಿಗೆ ಕರ್ನಾಟಕ ಸರ್ಕಾರ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಅಂಗನವಾಡಿ ಕೇಂದ್ರಗಳಿಗೆ ಟಿವಿ ವಿತರಣೆ ಮಾಡಿದರು.ನಂತರ ಕುರಕುಂದಾ ಗ್ರಾಮದ ಹೊರವಲಯದಲ್ಲಿ ನಡೆದ ನರೇಗಾ ಯೋಜನೆಯಡಿ ನಡೆದ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕೂಲಿ ಕಾರ್ಮಿಕರ ಯೋಗಕ್ಷೇಮ ವಿಚಾರಿಸಿ ಬೇಸಿಗೆ ದಿನಗಳಲ್ಲಿ ಜನರು ಯಾವುದೇ ಕಾರಣಕ್ಕೂ ನಗರ ಪ್ರದೇಶಗಳಿಗೆ ವಲಸೆ ಹೋಗದೆ ನಿಮ್ಮ ಊರಿನಲ್ಲಿ ನರೇಗಾ ಯೋಜನೆಯಡಿ ಕೂಲಿ ಕೆಲಸ ಮಾಡಿ ಆರ್ಥಿಕವಾಗಿ ಸ್ವಾವಲಂಬನೆ ಬದುಕು ಕಟ್ಟಿಕೊಳ್ಳಬೇಕು ಎಂದು ಕರೆ ನೀಡಿದರು.



ಬಿಸಲಿನ ತಾಪ ಹೆಚ್ಚು ಇರುವುದರಿಂದ ಆರೋಗ್ಯಕ್ಕೆ ಒತ್ತು ನೀಡಿ ಕೆಲಸ ನಿರ್ವಹಿಸಲು ಸೂಚಿಸಿದರು.ಈ ಸಂದರ್ಭದಲ್ಲಿ ತಾಪಂ ಇಓ ಮಲ್ಲಿಕಾರ್ಜುನ ಸಂಗ್ವಾರ, ಸಿಡಿಪಿಓ ಮಲ್ಲಣ್ಣ ದೇಸಾಯಿ,ಪಿಡಿಓ ಶೇಷಾಗಿರಿರಾವ್ ಕುಲಕರ್ಣಿ,ಅಂಗನವಾಡಿ ಮೇಲ್ವಿಚಾರಕಿ ತ್ರೀವೇಣಿ,

ಅಜೀಮ್ ಪ್ರೇಮ್ ಜೀ ಫೌಂಡೇಶನ್ ಸಿಬ್ಬಂದಿ ಚೈತ್ರಾ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಈಟೆ, ಶರಣಬಸಪ್ಪ, ಶರಣಪ್ಪ ಜಂಬೆ,ಅಂಗನವಾಡಿ ಕಾರ್ಯಕರ್ತೆಯರು,ಸಹಾಯಕಿಯರು,ಹಾಗೂ ಗ್ರಾಮಸ್ಥರು ಇನ್ನಿತರರಿದ್ದರು.

# ಕೇಂದ್ರ ಮಾರ್ಗಸೂಚಿ ಜಾರಿಗೆ ರಾಜ್ಯ ಸರಕಾರ ಚಿಂತನೆ



ಬಳ್ಳಾರಿ/ಕಂಪ್ಲಿ:ಬಳ್ಳಾರಿ ಜಿಲ್ಲೆಯಲ್ಲಿರುವ 162 ಆಶಾ ಕಾರ್ಯಕರ್ತೆಯರ ಪೈಕಿ 120 ಕಾರ್ಯಕರ್ತೆಯರು ಉದ್ಯೋಗ ಕಳೆದುಕೊಳ್ಳುವ ಆತಂಕದಲ್ಲಿದ್ದಾರೆ. ಕೇಂದ್ರಸರಕಾರದ ಮಾರ್ಗಸೂಚಿಯನ್ನು ರಾಜ್ಯ ಸರಕಾರ ಜಾರಿಗೆ ತರಲು ಮುಂದಾಗಿರುವ ಕಾರಣ ಈ ಪರಿಸ್ಥಿತಿ ನಿರ್ಮಾಣಗೊಂಡಿದ್ದು, ಇದೀಗ ತಮ್ಮ ಉದ್ಯೋಗ ಉಳಿಸಿಕೊಡುವಂತೆ ಅವರು ಸರಕಾರದ ಮೊರೆ ಹೋಗಿದ್ದಾರೆ.

2009 ರಿಂದ ಅಸ್ತಿತ್ವದಲ್ಲಿರುವ ಆಶಾ ಕಾರ್ಯಕರ್ತೆಯರ ಹುದ್ದೆಗಳನ್ನು ಜನಸಂಖ್ಯೆಗೆ ಅನುಗುಣವಾಗಿ ಶರ್ತಬದ್ಧಗೊಳಿಸಬೇಕೆಂದು ಕೇಂದ್ರ ಸರಕಾರ ಕಳೆದ ವರ್ಷ ಮಾರ್ಗಸೂಚಿ ಹೊರಡಿಸಿದ್ದು, ಅದರಂತೆ ಪ್ರತೀ ಒಂದು ಸಾವಿರ ಜನಸಂಖ್ಯೆಗೆ ಒಬ್ಬರು ಆಶಾ ಕಾರ್ಯಕರ್ತೆ ಹುದ್ದೆ ನಿಗದಿ ಮಾಡಲಾಗಿದೆ. ಇದಕ್ಕಿಂತ ಕಡಿಮೆ ಜನಸಂಖ್ಯೆ ಇರುವ ಪ್ರದೇಶದ ಕಾರ್ಯಕರ್ತೆಯರನ್ನು ಹುದ್ದೆಯಿಂದ ತೆರವು ಮಾಡಲು ನಿರ್ಧರಿಸಲಾಗಿದೆ. ಜಿಲ್ಲೆಯಲ್ಲಿ ಕಾರ್ಯಕರ್ತೆಯರು ಉದ್ಯೋಗ ಕಳೆದುಕೊಳ್ಳುವ ಆತಂಕದಲ್ಲಿದ್ದಾರೆ.

ನಮ್ಮನ್ನು ಉಳಿಸಿಕೊಡಿ. ಕಂಪ್ಲಿ ತಾಲೂಕಿನ ಆಶಾ ಕಾರ್ಯಕರ್ತೆಯರು ಬುಧವಾರ ಕಂಪ್ಲಿ ಶಾಸಕ ಜೆ. ಎನ್. ಗಣೇಶ್ ಅವರನ್ನು ಭೇಟಿ ಮಾಡಿ ನಮ್ಮ ಉದ್ಯೋಗ ಉಳಿಸಿಕೊಡಿ ಎಂದು ಮನವಿ ಮಾಡಿದರು. ನಿಮ್ಮಿಂದ ಮಾತ್ರ ಇದು ಸಾಧ್ಯ. ನಮ್ಮಲ್ಲಿ ನಿವೃತಿಯಾಗುತ್ತಿರುವಂತೆ ಮಾರ್ಗಸೂಚಿಗೆ ಸರಿಯಾಗಿ ಹೊಂದಾಣಿಕೆ ಮಾಡಲಿ. ಆದರೆ ಈಗಲೇ ರಿಲೀವ್ ಮಾಡಬೇಡಿ. ಎಲ್ಲ ಪಿಎಚ್‌ಸಿಗಳಲ್ಲಿ ಗ್ರೂಪ್ ಡಿ ಹುದ್ದೆ ಖಾಲಿ ಇಲ್ಲದ ಕಾರಣ ಜಿಲ್ಲೆಯ ಮೂಲೆ ಮೂಲೆಗೆ ಹೋಗಬೇಕಾಗಬಹುದು. ಕೇವಲ ಗೌರವಧನಕ್ಕೆ ದುಡಿಯುವ ನಮಗೆ ಇದು ಅಸಾಧ್ಯ ಎಂದವರು ಅಲವತ್ತುಕೊಂಡರು. ಶಾಸಕ ಜೆ.ಎನ್. ಗಣೇಶ್ ಮಾತನಾಡಿ ಸಿಎಂ ರವರ ಜತೆ ಚರ್ಚಿಸುವೆ, ಆಶಾ ಕಾರ್ಯಕರ್ತೆಯರಲ್ಲಿ ಯಾರೂ ಶ್ರೀಮಂತರಿಲ್ಲ. ಸಮಸ್ಯೆಯನ್ನು ವೈಯಕ್ತಿಕವಾಗಿ ತೆಗೆದುಕೊಳ್ಳುತ್ತೇನೆ. ಇವತ್ತೇ ಆರೋಗ್ಯ ಇಲಾಖೆ ಕಚೇರಿ ಸಂಪರ್ಕಿಸಿ ಮಾಹಿತಿ ಪಡೆದು ಸಚಿವರು ಮತ್ತು ಮುಖ್ಯಮಂತ್ರಿ ಭೇಟಿ ಮಾಡಿ ಚರ್ಚಿಸುವೆ ಎಂದು ಶಾಸಕರು ಹೇಳಿದರು..

# ಸಂಘ ಸಂಸ್ಥೆಗಳಿಂದ ಅರ್ಜಿ ಆಹ್ವಾನ

ಬೀದರ: ಹುಮನಾಬಾದ ತಾಲ್ಲೂಕಿನಲ್ಲಿ 2025-26ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ವಿಚಾರಗೋಷ್ಠಿ ಹಾಗೂ ಅರಿವು ಮೂಡಿಸುವ ಕಾರ್ಯಾಗಾರ ಏರ್ಪಡಿಸಲು ನೋಂದಾಯಿತ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸರ್ಕಾರೇತರ ಸಂಘ-ಸಂಸ್ಥೆಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಹುಮನಾಬಾದ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು (ಗ್ರೇಡ್-1) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಹತೆಗಳು: ಸ್ವಯಂ ಸೇವಾ ಸಂಸ್ಥೆಯ ನೋಂದಣಿಗೊಂಡಿದ್ದು, ನೋಂದಣಿ ಚಾಲ್ತಿಯಲ್ಲಿರಬೇಕು. ಸ್ವಯಂ ಸೇವಾ ಸಂಸ್ಥೆಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರ ಅಭಿವೃದ್ಧಿಗಾಗಿ ಕನಿಷ್ಠ 5 ವರ್ಷ ಸೇವೆ ಸಲ್ಲಿಸಿರಬೇಕು. ಎಸ್.ಸಿ./ಎಸ್.ಟಿ. ಜನರ ಕಲ್ಯಾಣಕ್ಕಾಗಿ ಸೇವೆ ಸಸಲ್ಲಿಸುತ್ತಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಸಂಘಗಳು. ಸಂಸ್ಥೆ/ಸಂಘ ಪ್ರತಿ ವರ್ಷ ಅಡಿಟ್ ಮಾಡಿಸಿರಬೇಕು. ಸಂಸ್ಥೆ-ಸಂಘವು ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಿರುವ ಅನುಭವ ಹೊಂದಿರಬೇಕು.

ಅರ್ಹರು ಅಗತ್ಯ ದಾಖಲಾತಿಗಳೊಂದಿಗೆ ಮಾರ್ಚ.10 ರೊಳಗಾಗಿ ಸಹಾಯಕ ನಿರ್ದೇಶಕರು (ಗ್ರೇಡ್-1), ಸಮಾಜ ಕಲ್ಯಾಣ ಇಲಾಖೆ ಹುಮನಾಬಾದ ಕಾರ್ಯಾಲಯಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಶಿಕ್ಷಕರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ

ತಾಲೂಕಿನ ಅಲಗೂಡ ಸರ್ಕಾರಿ ಪ್ರೌಢಶಾಲೆಯಲ್ಲಿ ಇಕೋ ಕ್ಲಬ್ ನಿಮಿತ್ಯ. ಪರಿಸರ ಕುರಿತು ಮಾತನಾಡಿದ ಗೌರವ ಶಿಕ್ಷಕರಾದ ಹರ್ಷವರ್ಧನ್ ಕಾಂಬಳೆ. ಅಲ್ಲದೆ ರಾಮ ಅಲಗೂಡೆ. ತಾಲೂಕಾ ಸರ್ಕಾರಿ ನೌಕರರ ಮಹಿಳಾ ಸಂಘದ ಅಧ್ಯಕ್ಷರಾಗಿ ಆಯ್ಕೆಯಾದ ಶಿಕ್ಷಕ ಸುಜಾತಾ ಖೈರಾಟಕರ. ತಾಲೂಕು ಹಿಂಧಿ ಪ್ರೌಢ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ನಾಗಪ್ಪ ನಿಣ್ಣೆ ಇವರನ್ನು ಇಕೋ ಕ್ಲಬದ ವಿಜ್ಞಾನ ಶಿಕ್ಷಕರಾದ ಬೊಮ್ಮಲಿಂಗಪ್ಪ. ಕೆ. ಸುಲಭಾ ಪೋದ್ದಾರ ಸನ್ಮಾನಿಸಿದ್ದರು . ಈ ಸಂಧರ್ಭ ದಲ್ಲಿ ಎಸ್.ಡಿ. ಎಂ. ಸಿ. ಉಪಾಧ್ಯಕ್ಷರಾದ ಸಂತೋಷ ಪಾಟೀಲ. ಗೋಪಾಳ ಸೋಮವಂಶಿ. ಶಿಕ್ಷಕರಾದ ರಾಜಕುಮಾರ್. ಬಿರಾದಾರ. ಭೌಧ ಪ್ರಕಾಶ್ ಸಿಂಗ್. ಸರಸ್ವತಿ ಗೌಡೆ. ಓಂಕಾರ್. ಸುಚಿತ್ರಾ ಮೇತ್ರೆ. ಗೀತಾ ಕಾಂಬ್ಳೆ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಭಾಷಣ ಮಾಡಿದ ವಿದ್ಯಾರ್ಥಿಗಳಿಗೆ ಮುಖ್ಯಗುರುಗಳಾದ ರಮೇಶ ರಾಜೋಳೆ ಬಹುಮಾನ ನೀಡಿ ಪ್ರೋತ್ಸಾಹಿಸಿದ್ದರು.

# ಇತಿಹಾಸದಲ್ಲೇ ಅತ್ಯಧಿಕ ಬಾರಿ ಬಜೆಟ್

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.

ದಾಖಲೆಯ 17ನೇ ಬಜೆಟ್ ಮಂಡಿಸುವ ಮೂಲಕ ರಾಜ್ಯದ ಇತಿಹಾಸದಲ್ಲೇ ಅತ್ಯಧಿಕ ಬಾರಿ ಬಜೆಟ್ ಮಂಡಿಸಿದ ನಾಯಕರಾಗಿರುವ ಸನ್ಮಾನ್ಯ ಶ್ರೀ ಸಿದ್ದರಾಮಯ್ಯ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು.

ರಾಜ್ಯದ ಸರ್ವತೋಮುಖ ಅಭಿವೃದ್ಧಿ, ಆರ್ಥಿಕ ಪ್ರಗತಿಯನ್ನು ನಿರ್ಧರಿಸುವ ಈ ಬಾರಿಯ ಬಜೆಟ್ ಮಹತ್ವದ್ದಾಗಿದೆ. ಪಂಚ ಗ್ಯಾರಂಟಿ ಯೋಜನೆಗಳ ಯಶಸ್ವಿ ಅನುಷ್ಠಾನದೊಂದಿಗೆ ಶೋಷಿತರು, ದಮನಿತರು ಹಾಗೂ ಹಿಂದುಳಿದ ವರ್ಗಗಳು ಸೇರಿದಂತೆ ಸಮಾಜದ ಎಲ್ಲಾ ಜನರ ಆಶೋತ್ತರಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಮಾನ್ಯ ಮುಖ್ಯಮಂತ್ರಿಗಳು ರಾಜ್ಯವನ್ನು ಮುನ್ನಡೆಸುತ್ತಿದ್ದಾರೆ.ದಾಖಲೆ ರಾಮಯ್ಯನವರ ಪ್ರಸ್ತುತ ಸಾಲಿನ ಬಜೆಟ್ ರಾಜ್ಯದ ಜನರ ಕಲ್ಯಾಣಕ್ಕೆ ಪೂರಕವಾದ ಐತಿಹಾಸಿಕ ಬಜೆಟ್ ಇದಾಗಿದೆ.



ರಾಜ್ಯದ ಯುವ ಜನತೆಯ ಬೇಡಿಕೆಗೆ ಅನುಗುಣವಾಗಿ ಸಿಎಂ ಸಿದ್ದರಾಮಯ್ಯನವರು ಪ್ರಸ್ತುತ ಸಾಲಿನ ಬಜೆಟ್ ಮಂಡಿಸಿದ್ದಾರೆ. ನಿರುದ್ಯೋಗಿಗಳಿಗೆ ಉದ್ಯೋಗ ಅವಕಾಶ ಕಲ್ಪಿಸಿಕೊಡುವ ನಿಟ್ಟಿನಲ್ಲಿ ಸರಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗೆ ಭರ್ತಿ ಮಾಡುವುದಕ್ಕೆ ಗ್ರಿನ್ ಸಿಗ್ನಲ್ ನೀಡಲಾಗಿದೆ. ಅಲ್ಲದೇ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿ ಸಾಮಾಜಿಕ ಜಾಲತಾಣದ ಮೇಲೆ ಕಡಿವಾಣಕ್ಕೆ ಮುಂದಾಗಿರುವುದು ಐತಿಹಾಸಿಕ ನಿರ್ಧಾರ ಇದಾಗಿದೆ ಯಾದಗಿರಿ ಜಿಲ್ಲೆಗೆ ಹೆಚ್ಚಿನ ಮಹತ್ವ ಕೊಟ್ಟು ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಕೊಟ್ಟಿದ್ದಕ್ಕಾಗಿ ಧನ್ಯವಾದಗಳು ಮತ್ತು ಜಿಲ್ಲೆ ಅಭಿವೃದ್ಧಿಗೆ ಹೆಚ್ಚಿನ ಮಹತ್ವ ಕೊಟ್ಟ . ಸನ್ಮಾನ್ಯ ಶ್ರೀ ಸಿದ್ದರಾಮಯ್ಯ ಮಾನ್ಯ ಮುಖ್ಯಮಂತ್ರಿಗಳು ಕರ್ನಾಟಕ ಸರ್ಕಾರ ಅವರಿಗೆ ಹೃದಯಪೂರ್ವಕ ಅಭಿನಂದನೆಗಳು. ಭೀಮು ಪೂಜಾರಿ ಸಾಮಾಜಿಕ ಹೋರಾಟಗಾರ ಯಾದಗಿರಿ

# ಅಂತರ್ಜಲ ವೃದ್ಧಿಗೆ ಸರ್ಕಾರ ಬದ್ಧ

ಕಲಬುರಗಿ: ಮಾರ್ಚ 07 (ಕ.ವಾ) ರಾಜ್ಯದ ಕೃಷಿವಲಯದ ಏಳಿಗೆಗಾಗಿ ಅಂತರ್ಜಲ ಮರುಪೂರಣ ಮತ್ತು ನೀರಾವರಿ ಯೋಜನೆಗಳಿಗೆ ಸರ್ಕಾರ ಆದ್ಯತೆ ನೀಡುತ್ತಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್. ಎಸ್. ಭೋಸರಾಜು ತಿಳಿಸಿದರು.

# ಸರ್ಕಾರಿ ಹುದ್ದೆಗಳ ತುಂಬುವಾಗ ವರ್ಗೀಕರಣಕ್ಕೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ. ಬಳ್ಳಾರಿ

ರಾಜ್ಯ ಸರ್ಕಾರ ಖಾಲಿ ಇರುವ 56,342 ಹುದ್ದೆಗಳ ಭರ್ತಿಯಲ್ಲಿ 15% ಒಳ ಮೀಸಲಾತಿಯನ್ನು ಗ್ರೂಪ್ ಎ, ಬಿ, ಸಿ ವರ್ಗೀಕರಣದಂತೆ ಜಾರಿಗೊಳಿಸಲು ಬಳ್ಳಾರಿ ಜಿಲ್ಲಾ ಮಾದಿಗ ಸಂಘಗಳ ಒಕ್ಕೂಟ ಹಕ್ಕೊತ್ತಾಯ ಮಂಡಿಸಿದೆಈ ಕುರಿತು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯದ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಗಿದೆ

**ಹಕ್ಕೊತ್ತಾಯಗಳು:** ಸರ್ಕಾರದ ಆದೇಶ ಸಂಖ್ಯೆ ಸಿಆ ಸುಇ-1ಸೇಹಿಮ 2026, ದಿನಾಂಕ 27.02.2026 ಅನ್ನು ತಕ್ಷಣ ಹಿಂಪಡೆಯಬೇಕು., 2. 56,342 ಖಾಲಿ ಹುದ್ದೆಗಳ ಭರ್ತಿಗೆ 15% ಒಳ ಮೀಸಲಾತಿಯನ್ನು ಅನ್ವಯಿಸುವ ತಿದ್ದುಪಡಿ ಆದೇಶವನ್ನು, ಆದೇಶ ಸಂಖ್ಯೆ ಸಕಇ-8 ಎಸ್‌ಎಲ್ಪಿ 2024 (ಭಾ-1), ದಿನಾಂಕ 25.08.2025 ಮತ್ತು ಸಿಆಸುಇ-2 ಸೇಹಿಮ 2025, ದಿನಾಂಕ 03.09.2025 ರ ಅನುಸಾರ ಹೊರಡಿಸಬೇಕು.ನಾಗಮೋಹನ್ ದಾಸ್ ವರದಿಯ ಆಧಾರದ ಮೇಲೆ ಪರಿಶಿಷ್ಟ ಜಾತಿ ಗಳನ್ನು ಗ್ರೂಪ್ ಎ, ಬಿ, ಸಿ ವರ್ಗೀಕರಣದಂತೆ ಒಳ ಮೀಸಲಾತಿ ಉಪವರ್ಗೀಕರಣವನ್ನು ಜಾರಿಗೊಳಿಸಬೇಕು.56% ಮೀಸಲಾತಿ ವ್ಯವಸ್ಥೆಯನ್ನು ಸಂವಿಧಾನದ 9ನೇ ಅನುಸೂಚಿಯಲ್ಲಿ ಸೇರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು.ಪರಿಷ್ಕೃತ ರೋಸ್ಟರ್ ವ್ಯವಸ್ಥೆಯನ್ನು ಪ್ರಕಟಿಸಿ ಉಪಗುಂಪುಗಳವಾರು ಹಂಚಿಕೆಯನ್ನು ಖಚಿತಪಡಿಸಬೇಕು., 56% ಮೀಸಲಾತಿ ಪ್ರಮಾಣವನ್ನು ನ್ಯಾಯಾಲಯದ ಮುಂದೆ ದೃಢವಾಗಿ ಸಮರ್ಥಿಸಬೇಕು.ಸಾಮಾಜಿಕ ನ್ಯಾಯವು ಕೇವಲ ಘೋಷಣೆಯಲ್ಲ,

ಅದು ಸಂವಿಧಾನಬದ್ಧ ಹಕ್ಕು., ಈ ಹಕ್ಕೊತ್ತಾಯಕ್ಕೆ ಸರ್ಕಾರ ತಕ್ಷಣ ಸ್ಪಂದಿಸದಿದ್ದಲ್ಲಿ, ಮಾದಿಗ ಸಮುದಾಯವು ರಾಜ್ಯಾದ್ಯಂತ ತನ್ನ ಹಕ್ಕುಗಳ ರಕ್ಷಣೆಗೆ ರಸ್ತೆಗಿಳಿದು ತೀವ್ರ ಹೋರಾಟ ನಡೆಸಬೇಕಾದ ಅನಿವಾರ್ಯ ಪರಿಸ್ಥಿತಿ ಉಂಟಾಗುತ್ತದೆ ಎಂಬುದನ್ನು ಸ್ಪಷ್ಟಪಡಿಸಿದೆ, ಮನವಿ ಪತ್ರ ಸಲ್ಲಿಸಿದ ಸಂದರ್ಭದಲ್ಲಿ ಮುಖಂಡರಾದ ದುರುಗಪ್ಪ ತಳವಾರ್.ಎ.ಕೆ ಗಂಗಾಧರ.ವೆಂಕಟೇಶ್ ಮೂರ್ತಿ.ದುರುಗಪ್ಪ ವಕೀಲರು.ಪ್ರಸಾದ್. ಹನುಮೇಶ್. ಗೋನಾಳು ರಮೇಶ್ ರಾಜೇಶ್.ಆರ್.ಶಿವಶಂಕರ್. ಷಣ್ಮುಖ.ಶಿವಪ್ಪ.ಸುಂಕಣ್ಣ ಎರ್ರಗುಡಿ ಮತ್ತಿತರರು ಉಪಸ್ಥಿತರಿದ್ದರು

# ಪಸಪೂಲ್, ಕಂದಕೂರ ಗ್ರಾಮಕ್ಕೆ ಸಿಇಓ ಬೇಟಿ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.

ಗುರುಮಠಕಲ್ ತಾಲೂಕಿನ ಪಸಪೂಲ್, ಕಂದಕೂರ ಗ್ರಾಮ ಪಂಚಾಯಿತಿಗಳಿಗೆ ಯಾದಗಿರಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಮಾನ್ಯ ಶ್ರೀ ಲವೀಶ್ ಓರಾಡಿಯಾ ಅವರು ಭೇಟಿ ನೀಡಿ ಪರಿಶೀಲ ನಡೆಸಿದರು. ಪಸಪೂಲ್ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ, ಕಡತಗಳು ವೀಕ್ಷಿಸಿದರು. ಕರವಸೂಲಿ ರೆಜಿಸ್ಟರ್, ಬ್ಯಾಂಕ್ ಪಾಸ್ ಬುಕ್, ಮನರೇಗಾ ಕಾಮಗಾರಿಗಳ ಮುಕ್ತಾಯ ಬಗ್ಗೆ ವಿಚಾರಿಸಿದರು. ಕುಡಿಯುವ ನೀರಿನ ತಪಾಸಣೆ, ಶಾಲಾ ಕೊಠಡಿ ಮತ್ತು ಗ್ರಂಥಾಲಯ ಕಟ್ಟಡ ವೀಕ್ಷಿಸಿದರು. ಆನಂತರ ಕಂದಕೂರು ಗ್ರಾಮ ಪಂಚಾಯಿತಿಯ ಭೇಟಿ ನೀಡಿ, ಕರವಸೂಲಿ ಕುರಿತು ವಿಚಾರಿಸಿದರು. ಶುದ್ಧ ಕುಡಿಯುವ ನೀರಿನ ಘಟಕ ಕಾರ್ಯಚರಣೆ ಕುರಿತು ಮಾಹಿತಿ ಪಡೆದರು. ಮುಂದುವರೆದು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಭೇಟಿ ನೀಡಿ, ಮಕ್ಕಳಿಗೆ ಮೂಲಸೌಕರ್ಯಗಳ ಒದಗಿಸಿರುವ ಕುರಿತು ಮಾಹಿತಿ ಪಡೆದರು. ಸರ್ಕಾರಿ ಆಸ್ಪತ್ರೆ ಭೇಟಿ ನೀಡಿ ಸ್ವಚ್ಛತೆ ಸೇರಿದಂತೆ ಅಲ್ಲಿರುವ ರೆಜಿಸ್ಟರ್ ವೀಕ್ಷಿಸಿದರು. ಆಸ್ಪತ್ರೆಯ ಕೊಣೆಗಳಲ್ಲಿ ಫ್ಯಾನ್, ಲೈಟ್ ಕಾರ್ಯಾಚರಣೆ ಕುರಿತು ತಪಾಸಣೆ ನಡೆಸಿದರು. ಇನ್ನಿತರ ಸೌಲಭ್ಯಗಳ ಕುರಿತು ಮಾಹಿತಿ ಪಡೆದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಮನರೇಗಾ ಸಿಬ್ಬಂದಿ ವರ್ಗದವರು ಮತ್ತು ಗ್ರಾಮ ಪಂಚಾಯಿತಿ ಸಿಬ್ಬಂದಿ ವರ್ಗದವರು ಹಾಜರಿದ್ದರು.



# ನೀಲಹಳ್ಳಿ ಶಾಲೆಯ ಮಕ್ಕಳಿಗೆ ಶೂ ಮತ್ತು ಸಾಕ್ಸ್ ವಿತರಣೆ



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.

ಯಾದಗಿರಿ ತಾಲೂಕಿನ ನೀಲಹಳ್ಳಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಗೆ ಶೂ ಮತ್ತು ಸಾಕ್ಸ್ ಶಾಲಾ ಮಕ್ಕಳಿಗೆ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಎಸ್.ಡಿ.ಎಂ.ಸಿ ಅಧ್ಯಕ್ಷ ಚಂದ್ರಶೇಖರ್ ಬಾಗಲಿ, ಶಾಲಾ ಮುಖ್ಯ ಗುರು ಅಬ್ದುಲ್ ಬಾಷಾ, ಸಹ ಶಿಕ್ಷಕ ನಿಂಗಪ್ಪ, ಗೌರವ ಶಿಕ್ಷಕರಾದ ಗಿರೀಶ್ ಹಾಗೂ ಶಿವಶಂಕರ ಬಾಗ್ಲಿ ಮತ್ತು ಎಸ್.ಡಿ.ಎಂ.ಸಿ ಉಪಾಧ್ಯಕ್ಷರು, ಸದಸ್ಯರು, ಗ್ರಾಮದ ಪ್ರಮುಖರು ಇದ್ದರು.

# ಅನಧಿಕೃತ ಫ್ಲೆಕ್ಸ್, ಬ್ಯಾನರ್ ಅಳವಡಿಸಿದರೆ ಜೈಲು ಶಿಕ್ಷೆ ಹಾಗೂ ದಂಡ: ಉಮೇಶ ಚವ್ಹಾಣ ಎಚ್ಚರಿಕೆ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.

ನಗರದ ಸೌಂದರ್ಯ ಕಾಪಾಡುವ ನಿಟ್ಟಿನಲ್ಲಿ ಮತ್ತು ಸಾರ್ವಜನಿಕ ಆಸ್ತಿ ವಿರೂಪಗೊಳ್ಳದಂತೆ ತಡೆಯಲು, ಅನುಮತಿ ಇಲ್ಲದೆ ಫ್ಲೆಕ್ಸ್ ಹಾಗೂ ಬ್ಯಾನರ್‌ಗಳನ್ನು ಅಳವಡಿಸುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಯಾದಗಿರಿ ನಗರಸಭೆ ಪೌರಾಯುಕ್ತರಾದ ಉಮೇಶ ಚವ್ಹಾಣ ಅವರು ಎಚ್ಚರಿಕೆ ನೀಡಿದ್ದಾರೆ. ಶುಕ್ರವಾರ ನಗರಸಭೆ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಫ್ಲೆಕ್ಸ್ ಮತ್ತು ಬ್ಯಾನರ್ ಮಾಲೀಕರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕಾನೂನು ಉಲ್ಲಂಘಿಸಿದರೆ ಕಠಿಣ ಕ್ರಮ

ಕರ್ನಾಟಕ ಬಹಿರಂಗ ಸ್ಥಳಗಳ (ವಿರೂಪಗೊಳಿಸುವುದನ್ನು ಪ್ರತಿಬಂಧಿಸುವ) ತಿದ್ದುಪಡಿ ಅಧಿನಿಯಮ 2020ರ



ಕಲಂ 3ರ ಅನ್ವಯ, ಅನಧಿಕೃತವಾಗಿ ಜಾಹೀರಾತು ಪ್ರದರ್ಶಿಸಿ ಸಾರ್ವಜನಿಕ ಸ್ಥಳಗಳನ್ನು ವಿರೂಪಗೊಳಿಸಿದರೆ: 6 ತಿಂಗಳವರೆಗೆ ಸೆರೆವಾಸದ ದಂಡನೆ. 1,000 ರೂ.ಗಳವರೆಗೆ ದಂಡ. ಅಥವಾ ಶಿಕ್ಷೆ ಮತ್ತು ದಂಡ ಎರಡನ್ನೂ ವಿಧಿಸಲು ಕಾನೂನಿನಲ್ಲಿ ಅವಕಾಶವಿದೆ ಎಂದು ಅವರು ವಿವರಿಸಿದರು. ನಗರಸಭೆಯ ಅನುಮತಿ ಕಡ್ಡಾಯ

ಯಾದಗಿರಿ ನಗರ ಹಾಗೂ ಜಿಲ್ಲಾ ವ್ಯಾಪ್ತಿಯಲ್ಲಿ ಯಾವುದೇ ಸಂಘ-ಸಂಸ್ಥೆಗಳು, ಸಂಘಟನೆಗಳು ಅಥವಾ ಸಾರ್ವಜನಿಕರು ಬ್ಯಾನರ್ ಅಳವಡಿಸುವ ಮುನ್ನ ನಗರಸಭೆಯಿಂದ ಕಡ್ಡಾಯವಾಗಿ ಅನುಮತಿ ಪಡೆಯಬೇಕು. ಅನುಮತಿ ನೀಡುವಾಗ ಕೇವಲ ನಿಗದಿತ ಅವಧಿಗೆ ಮಾತ್ರ ಅವಕಾಶ ನೀಡಲಾಗುವುದು. ಕಾರ್ಯಕ್ರಮ ಮುಕ್ತಾಯವಾದ ತಕ್ಷಣ ಸಂಬಂಧಪಟ್ಟವರೇ ಸ್ವಯಂಪ್ರೇರಿತರಾಗಿ ಆ ಬ್ಯಾನರ್‌ಗಳನ್ನು ತೆರವುಗೊಳಿಸಬೇಕು ಎಂದು ಸೂಚಿಸಿದರು. ನಗರದ ಸೌಂದರ್ಯಕ್ಕೆ ಸಹಕರಿಸಿ ಅನಧಿಕೃತ ಫ್ಲೆಕ್ಸ್‌ಗಳಿಂದ ಜಿಲ್ಲೆಯ ಪಾರಂಪರಿಕತೆ ಮತ್ತು ಸೌಂದರ್ಯಕ್ಕೆ ಧಕ್ಕೆಯಾಗುತ್ತಿದೆ. ಆದ್ದರಿಂದ ಸಾರ್ವಜನಿಕ ಆಸ್ತಿಗಳಿಗೆ ಹಾನಿ ಮಾಡದೆ, ನಗರದ ಸೌಂದರ್ಯವನ್ನು ಕಾಪಾಡಲು ಪ್ರತಿಯೊಬ್ಬರೂ ಸಹಕರಿಸಬೇಕು. ನಿಯಮ ಮೀರಿ ಅಳವಡಿಸಿದ ಬ್ಯಾನರ್‌ಗಳನ್ನು ನಗರಸಭೆಯಿಂದಲೇ ತೆರವುಗೊಳಿಸಿ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಪೌರಾಯುಕ್ತರು ಕಟ್ಟುನಿಟ್ಟಿನ ಸೂಚನೆ ನೀಡಿದರು. ಸಭೆಯಲ್ಲಿ ಕಚೇರಿ ವ್ಯವಸ್ಥಾಪಕರಾದ ಅಶ್ವಿನಿ, ಪರಿಸರ ಅಭಿಯಂತರರಾದ ಪ್ರಶಾಂತ ಸೂರ್ಯವಂಶಿ, ಆರೋಗ್ಯ ನಿರೀಕ್ಷಕರಾದ ಮಂಜುನಾಥ ಚವ್ಹಾಣ, ಶಿವಪುತ್ರ, ಶರಣಪ್ಪ, ಸಿದ್ದಾರ್ಥ ಇದ್ದರು.

# ಜನರನ್ನು ನಯವಾಗಿ ವಂಚಿಸುವ ದಾಖಲೆಯ ಬಜೆಟ್: ಕರವೇ ಜಿಲ್ಲಾಧ್ಯಕ್ಷ ಟಿಎನ್ ಭೀಮುನಾಯಕ ಟೀಕೆ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.

ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ದಾಖಲೆಯ ಬಜೆಟ್ ಜನರನ್ನು ನಯವಾಗಿ ವಂಚಿಸುವ ಆಮಿಷದ ಬಜೆಟ್ ಆಗಿದೆ ಎಂದು ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಟಿಎನ್ ಭೀಮುನಾಯಕ ಆರೋಪಿಸಿದ್ದಾರೆ. ಈ ಕುರಿತು ಹೇಳಿಕೆ ನೀಡಿರುವ ಅವರು, ಬಜೆಟ್ ನಲ್ಲಿ ಜಿಲ್ಲೆಯ ಯಾವೊಂದು ಬೇಡಿಕೆಗಳನ್ನು ಪರಿಗಣನೆಗೆ ತೆಗೆದುಕೊಳ್ಳದೇ ಕೇವಲ ಮೂಗಿಗೆ ತುಪ್ಪ ಸವರುವ ಕೆಲಸವನ್ನು ಮಾಡಲಾಗಿದೆ, ಕೇವಲ ಆಮಿಷವೊಡ್ಡಿ ಲಾಭ ಮಾಡಿಕೊಳ್ಳುವ ನಿಟ್ಟಿನಲ್ಲಿ ರೂಪಿಸಲಾದ ನಯವಾಗಿ ವಂಚಿಸುವ ಬಜೆಟ್ ಆಗಿದೆ ಎಂದು ಟೀಕಿಸಿದ್ದಾರೆ.



ಜಿಲ್ಲೆಯ ಬಹುದಿನಗಳ ಬೇಡಿಕೆಗಳಾದ ಕೌಶಲ್ಯಾಭಿವೃದ್ಧಿ ವಿಶ್ವವಿದ್ಯಾಲಯ, ಸರ್ಕಾರಿ ಡಿಪ್ಲೋಮಾ ಕಾಲೇಜು, ಎಂಜಿನಿಯರಿಂಗ್ ಕಾಲೇಜು ಕುರಿತು ಪ್ರಸ್ತಾಪ ಇಲ್ಲ,

ಕಡೇಚೂರು ಕೈಗಾರಿಕೆ ವಲಯದಲ್ಲಿ ಕೈಗಾರಿಕೆಗಳು ತಂದು ನಿರುದ್ಯೋಗ ದೂರ ಮಾಡುವುದು ಬಿಟ್ಟು ಇದ್ದ ಬಿದ್ದ ಆರೋಗ್ಯ ಹಾಳು ಮಾಡುವ ನೈರ್ಮಲ್ಯ ಹಾಳು ಮಾಡುವ ಕೇವಲ ಕೆಮಿಕಲ್ ಫ್ಯಾಕ್ಟರಿಗಳನ್ನು ಈಗಾಗಲೇ ತೆರೆದುದೆ ಸಾಧನೆಯಾಗಿದೆ.

ಕಲ್ಯಾಣ ಕರ್ನಾಟಕ ಭಾಗಕ್ಕೆ ಪ್ರತ್ಯೇಕ ಸಚಿವಾಲಯ ಘೋಷಣೆಯಾಗಿಯೇ ಉಳಿದಿದೆ. 371ಜೆ ಪೂರ್ಣಪ್ರಮಾಣದಲ್ಲಿ ಜಾರಿ ಮಾಡುವುದು ಆಗಿಲ್ಲ. ಬಸವ ಕಲ್ಯಾಣದಿಂದ ಅಂಜಿನಾದ್ರಿ ವರೆಗೆ ಪ್ರವಾಸೋದ್ಯಮ ಹಬ್ ಕನಸಾಗಿದೆ. ಯಾದಗಿರಿಗೆ ಸೂಪರ್ ಸ್ಪೆಷಲಿಟಿ ಆಸ್ಪತ್ರೆ ಮಾಡುವುದಾಗಿ ಮಾಡಿದ ಘೋಷಣೆಯೂ ಸಹ ಜನರಿಗೆ ನವಯವಾಗಿ ವಂಚಿಸುವ ಘೋಷಣೆಯಾಗಿದೆ. ಇವರನ್ವಯ ಇನ್ನೊಂದು ಹೊಸ ಆಸ್ಪತ್ರೆ ಕಟ್ಟಿಸುತ್ತಾರೆಯೋ ಅಥವಾ ಈಗ ಇರುವಂಥ ಹೊಸ ಜಿಲ್ಲಾ ಆಸ್ಪತ್ರೆಗೆ ಸುಣ್ಣ ಬಣ್ಣ ಹಚ್ಚಿ ನಾವು ಮಾಡಿದ್ದೂ ಎಂದು ತಮ್ಮ ಲೇಬಲ್ ಅಂಟಿಸುವ ಹಳೆ ಚಾಳಿಯನ್ನೇ ಮುಂದುವರೆಸುವುದು ಆಗುತ್ತದೆಯೋ ಎಂದು ಭೀಮುನಾಯಕ ಅನುಮಾನ ವ್ಯಕ್ತಪಡಿಸಿದ್ದಾರೆ.

ಈಗಾಗಲೇ ಇರುವ ಯಿಮ್ಸ್ ಜಿಲ್ಲಾಸ್ಪತ್ರೆಯಲ್ಲಿ ಸಿಬ್ಬಂದಿ ಇಲ್ಲ, ಸೌಕರ್ಯ ಇಲ್ಲ ಎಂಬುದು ಲೋಕಾಯುಕ್ತರು ಬಂದಾಗಲೇ ಬಯಲಾಗಿದೆ. ಆಸ್ಪತ್ರೆಗೆ ಸೌಕರ್ಯ ಒದಗಿಸುವುದಕ್ಕೇ ಕೈಲಾಗದ ಸರ್ಕಾರ, ಸೂಪರ್ ಸ್ಪೇಷಾಲಿಟಿ ಆಸ್ಪತ್ರೆ ಕೊಡುವುದಾಗಿ ಹೇಳುತ್ತಿರುವುದು ಹಾಸ್ಯಾಸ್ಪದವಾಗಿದೆ ಎಂದು ಅವರು ತರಾಟೆಗೆ ತೆಗೆದುಕೊಂಡಿದ್ದಾರೆ.

ನೈಜವಾಗಿ ಕೊಡಬೇಕಾದ ಹಲವು ವರ್ಷಗಳ ಬೇಡಿಕೆಗಳಾದ ಎಂಜಿನಿಯರಿಂಗ್ ಕಾಲೇಜು, ರಿಂಗ್ ರೋಡ್ ಸೇರಿದಂತೆ ಇನ್ನಿತರ ಬೇಡಿಕೆಗಳು ಈಡೇರಿಸುವ ಬದಲು ಹೀಗೆ ಸುಳ್ಳು ಹೇಳಿ ನಯವಾಗಿ ಜನರನ್ನು ವಂಚಿಸುವ ಕೆಲಸ ಬಿಡಬೇಕು ಎಂದು ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

# ಉದ್ದಿಮೆಗಳಿಗೆ ಕನಿಷ್ಠ ವೇತನಕ್ಕೆ ಶಾಸಕರಿಗೆ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದರು

- ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು




ರಾಜ್ಯದ ಅನುಸೂಚಿತ ಉದ್ದಿಮೆಗಳಿಗೆ ಕನಿಷ್ಠವೇತನ ನೀಡಬೇಕೆಂದು ಒತ್ತಾಯಿಸಿ ಸ್ಥಳ ಶಾಸಕರು ಹಂಪನಗೌಡ ಬಾದರ್ಲಿ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ರಾಜ್ಯ ಸರ್ಕಾರವು ಏಪ್ರಿಲ್ ತಿಂಗಳು 2025ರಲ್ಲಿ ಅನುಸೂಚಿತ ಉದ್ದಿಮೆಗಳಲ್ಲಿ ಕೆಲಸ ಮಾಡುವ

ಕಾರ್ಮಿಕರಿಗೆಅನ್ವಯವಾಗುವಕನಿಷ್ಠ ವೇತನದಕರಡುಅಧಿಸೂಚನೆಯನ್ನು ಪ್ರಕಟಿಸಿದ್ದು. ಈ ರಾಜ್ಯಸರ್ಕಾರವು ಏಪ್ರಿಲ್ 2025ರಲ್ಲಿ ರಾಜ್ಯದಲ್ಲಿನ ಅನುಸೂಚಿತ ಉದ್ದಿಮೆಗಳಲ್ಲಿ ಕೆಲಸ ಅಧಿಸೂಚನೆಗಳಿಗೆ ಕಾರ್ಮಿಕ ಸಂಘಟನೆಗಳು. ಮಾಲೀಕರ ಸಂಘಟನೆಗಳು ಮತ್ತು ಇತರರು ಆಕ್ಷೇಪಣೆಗಳು ಹಾಗು ಸಲಹೆಗಳನ್ನು ಸಲ್ಲಿಸಿದ್ದು, ಕನಿಷ್ಠ ವೇತನ ಸಲಹಾ ಮಂಡಳಿಯು ಇದರ ಕುರಿತು ಎರಡು ಸುತ್ತುಗಳ ಚರ್ಚೆಯನ್ನು ನಡೆಸಿರುತ್ತದೆ.

ಕನಿಷ್ಠವೇತನಸಲಹಾಮಂಡಳಿಯು ತಮ್ಮ ಅಭಿಪ್ರಾಯವನ್ನು 2025 ಆಗಸ್ಟ್ ನಲ್ಲಿ ಸರ್ಕಾರಕ್ಕೆ ಸಲ್ಲಿಸಿ ಹಲವು ತಿಂಗಳು ಕಳೆದರೂ ವೈಜ್ಞಾನಿಕವಾದ ಹಾಗು ಕಾನೂನು ಬದ್ಧವಾದ ಕನಿಷ್ಠವೇತನದ ಅಂತಿಮ ಪ್ರಕಟನೆಯು ಆಗಿರುವುದಿಲ್ಲ.

ಕನಿಷ್ಠವೇತನ ಪರಿಷ್ಕರಣೆಯಾಗಿ ಏಳು ವರ್ಷಗಳು ಕಳೆದಿರುವ ಹಿನ್ನೆಲೆಯಲ್ಲಿ, ಅಂತಿಮ ಅಧಿಸೂಚನೆಯನ್ನು ಸರ್ಕಾರವು ಮಾಡದಿರುವುದು ನ್ಯಾಯಸಮ್ಮತವಲ್ಲ ಎಂಬುದನ್ನು ತಮ್ಮ ಗಮನಕ್ಕೆ ತರಲು ಇಚ್ಚಿಸುತ್ತಿದ್ದೇವೆ.

ರಾಜ್ಯದ ಸಮಗ್ರ ಅಭಿವೃದ್ಧಿಗೆ ಹಾಗು ಲಕ್ಷಾಂತರ ದುರ್ಬಲ ಕಾರ್ಮಿಕ ವರ್ಗಕ್ಕೆ ಆರ್ಥಿಕ ಸ್ವಾವಲಂಬನೆಯನ್ನು ಖಾತರಿಪಡಿಸುವ ಕನಿಷ್ಟವೇತನದ ಪ್ರಕಟನೆಯನ್ನು ಕೂಡಲೇ ರಾಜ್ಯ ಸರ್ಕಾರವು ಮಾಡಬೇಕೆಂದು ತಮ್ಮಲ್ಲಿ ವಿನಂತಿಸುತ್ತಿದ್ದೇವೆ.

ಮಾನ್ಯಸರ್ವೋಚ್ಚನ್ಯಾಯಾಲಯದ ತೀರ್ಪಿನ ಅಯ್ಯುವ್ಯಯದಲ್ಲಿ ಇವತ್ತಿನ ಗ್ರಾಹಕ ಬೆಲೆ ಸೂಚ್ಯಾಂಕ ಮನೆ ಬಾಡಿಗೆ ಹಾಗು ಇತರೆ ಖರ್ಚುಗಳ ಆಧಾರದಲ್ಲಿ ರಾಜ್ಯದ ಕಾರ್ಮಿಕ ಸಂಘಟನೆಗಳು ನೀಡಿರುವ ಈ ಕೆಳಕಂಡ ಸಲಹೆಗಳನ್ನು ಪರಿಗಣಿಸಿ ಅಂತಿಮ ಅಧಿಸೂಚನೆಯನ್ನು ಕೂಡಲೇ ಪ್ರಕಟಿಸಲು ವಿನಂತಿಸುತ್ತಿದ್ದೇ

ನಂತರ ಇದೀಗ 12/02/2026 ಅಧಿಸೂಚನೆಯನ್ವಯ ಮತ್ತೊಮ್ಮೆ ರಾಷ್ಟಪತಿಗಳ ಅಂಕಿತದೊಂದಿಗೆ ಮೇಲ್ಕಂಡ ನವೆಂಬರ್ 2025ರ ಅಧಿಸೂಚನೆ ಅಧಿಕಾರ ಕಾನೂನಾತ್ಮಕ ಬಲ ನೀಡಲಾಗಿದೆ ಹಾಗಾಗಿ ಕೇಂದ್ರ/ರಾಜ್ಯ ಸರ್ಕಾರಗಳು ನೂತನ ಕಾರ್ಮಿಕ ಸಂಹಿತೆಯ ಅನ್ವಯ ರಾಜ್ಯ ನಿಯಮಾವಳಿ ರೂಪಿಸಿ ಹಾಗೂ ಔದ್ಯಮಿಕ ನ್ಯಾಯಧೀಕರಣ ಮತ್ತು ಇನ್ನಿತರ ಪ್ರಾಧಿಕಾರಗಳನ್ನು ರಚಿಸುವ ತನಕ, ಹಾಲಿ ಕಾರ್ಯನಿರ್ವಹಿಸುವ ಔದ್ಯೋಮಿಕರಣ ನ್ಯಾಯಧಿಕರಣ ಮತ್ತು ಕಾರ್ಮಿಕ ಇಲಾಖೆಯಡಿಯ ಇನ್ನಿತರೆ ಎಲ್ಲಾ ಪ್ರಾಧಿಕಾರಗಳು ನಿರಂತರವಾಗಿ ಹಾಗೆ ಮುಂದುವರೆಯಲಿದೆ ಎಂದೂ ಮಾನ್ಯ ಉಚ್ಚಾನ್ಯಾಯಲಯ ದಿನಾಂಕ: 18/02/2026ರ ರಿಟ್ ಅರ್ಜಿ ಸಂಖ್ಯೆ 3784/2026ರ ಪ್ರಕರಣದಲ್ಲಿ ತೀರ್ಪನ್ನು ನೀಡಿದೆ. ಕನಿಷ್ಠ ವೇತನ ಪ್ರಕಟಿಸುವಂತೆ ಆಗ್ರಹಿಸಿ ಶಾಸಕರಿಗೆ ಸೆಂಟ್ರಲ್ ಆಫ್ ಇಂಡಿಯನ್ ಯೂನಿಯನ್ ಟಿಯುಸಿ ತಾಲೂಕು ಸಮಿತಿ ವತಿಯಿಂದ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದರು

ಈ ಸಂದರ್ಭದಲ್ಲಿ. ಯಂಕಪ್ಪ ಕೆಂಗಲ್. ಬಿ. ನಿಂಗಪ್ಪ. ಮರಿಸ್ವಾಮಿ ರೇಣುಕಮ್ಮ ಮಹಾದೇವಮ್ಮ ಸೇರಿದಂತೆ ಇತರರು ಉಪಸ್ಥಿತರಿದ್ದರು

## ಆಸ್ಟ್ರೇಲಿಯಾ ಮಾದರಿ ಲೇಔಟ್‌ಗೆ ಶಾಸಕರು ಪ್ಲಾನ್

# ಕುಡಿಯುವ ನೀರಿನ ಸಮಸ್ಯೆ ಬಗ್ಗೆ ಎಚ್ಚರವಹಿಸಿ: ಬಾದರ್ಲಿ

- ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



ಬೇಸಿಗೆ ಕಾಲ ಪ್ರಾರಂಭಿಸಿದ್ದು. ಈ ಹಿನ್ನೆಲೆಯಲ್ಲಿ ಎಲ್ಲ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಕುಡಿಯುವ ನೀರಿನ ಕೆರೆಗಳನ್ನು ಸ್ವಚ್ಚಗೊಳಿಸಿ ಇನ್ನೂ 15 ದಿನದಲ್ಲಿ ನೀರು ಬಿಡುವ ವ್ಯವಸ್ಥೆ ಮಾಡಲಾಗುತ್ತದೆ ಯಾವುದೇ ಕಾರಣ-ಕ್ಕೂ ಕುಡಿಯುವ ನೀರಿನ ವಿಚಾರದಲ್ಲಿ ಸಮಸ್ಯೆಗಳು ಆಗದಂತೆ ನೋಡಿಕೊಳ್ಳಬೇಕು ಎಂದು ಸಂಬಂಧಪಟ್ಟ ಆರ್. ಡಬ್ಲ್ಯೂ. ಎಸ್ ಹಾಗೂ ಪಿಡಿಓಗಳ ಅಧಿಕಾರಿಗಳಿಗೆ ಶಾಸಕ ಹಂಪನಗೌಡ ಬಾದರ್ಲಿ ತಾಕೀತು ಮಾಡಿದರು.

ನಗರದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಕುಡಿಯುವ ನೀರಿನ ಸಮರ್ಪಕ ಬಳಕೆ ಮತ್ತು ವಿವಿಧ ಇಲಾಖೆ ಅಧಿಕಾರಿಗಳು ಕುರಿತು ಶಾಸಕರು ನೇತೃತ್ವದಲ್ಲಿ ಸಭೆ ನಡೆಯಿತು. ಈಗಾಗಲೇ ಬೇಸಿಗೆ ಕಾಲ ಪ್ರಾರಂಭವಾಗಿದ್ದು. ಇನ್ನೂ 15 ದಿನಗಳಲ್ಲಿ ನೀರು ಬಿಡಲಾಗುತ್ತದೆ. ಆದ್ದರಿಂದ ಪ್ರತಿಯೊಂದು ನಗರ ಗ್ರಾಮೀಣ ಪ್ರದೇಶದಲ್ಲಿ ಎಲ್ಲಾ ಕೆರೆಗಳನ್ನು ಖಾಲಿ ಮಾಡಿಸಿ. ಸ್ವಚ್ಚಗೊಳಿಸಿ ನೀರು ತುಂಬಿಸುವ ಕೆಲಸ ಪಿಡಿಓ ಅಧಿಕಾರಿಗಳ ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಬೇಕು ಎಲ್ಲ ಕೆರೆಗಳು ತುಂಬಿದ ಮೇಲೆ ನೀರನ್ನು ಟೆಸ್ಟ್ ಮಾಡಿಸಬೇಕೆಂದು ಶಾಸಕರು ತಿಳಿಸಿದರು.

> “ ಶಾಸಕರು ತಾವು ಆಸ್ಟ್ರೇಲಿಯಾ ಪ್ರವಾಸ ಮುಗಿಸಿ ಅಲ್ಲಿನ ಸ್ಥಿತಿ ಗತಿ ಬಗ್ಗೆ ಮಾಹಿತಿ ಪಡೆದು-ಕೊಂಡು. ಇವತ್ತಿನ ಸಭೆಯಲ್ಲಿ ಅಲ್ಲಿನ ಜನರಿಗೆ ಯಾವ ರೀತಿಯಲ್ಲಿ ಸೌಲಭ್ಯ . ಸ್ಥಿತಿ ಗತಿ ಬಗ್ಗೆ ವಿವರಿಸಿದರು.

ಅದೇ ಆಸ್ಟ್ರೇಲಿಯಾ ಮಾದರಿಯಲ್ಲಿ ಎಲ್ಲ ಸೌಲಭ್ಯಗಳನ್ನು ಹೊಂದಿರುವ ಹಾಗೆ ಸಿಂಧನೂರು ತಾಲೂಕಿನ ಹರಟೆನೂರ ಗ್ರಾಮದ 4 ಎಕರೆ ಜಮೀನು ನಲ್ಲಿ ಲೇಔಟ್ ಮಾಡುವುದಕ್ಕೆ ಲ್ಯಾಂಡ್ ಆರ್ಮಿ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯವನ್ನು ನಿಭಾಯಿಸಿ ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ. ತಾಲೂಕು ತಹಶೀಲ್ದಾರ್ ಅರುಣ್ ಕುಮಾರ್ ಎಚ ದೇಸಾಯಿ. ನಗರ ಸಭೆ ಪೌರಾಯುಕ್ತರು ಪಾಂಡುರಂಗ ಇಟಗಿ. ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಪಿಡಿಓಗಳು ಮತ್ತು ಸಿಬ್ಬಂದಿ ವರ್ಗ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವಾಲ್ಮೀಕಿ ಶ್ರೀಗಳ ಕ್ಷೇಮ ವಿಚಾರಿಸಿದ ಭೀಮ ನಾಯ್ಕ

- ಮಲ್ಲಮ್ಮ ನುಡಿ, ಹಗರಿಬೊಮ್ಮನಹಳ್ಳಿ 7:



ಹಗರಿಬೊಮ್ಮನಹಳ್ಳಿ, ರಾಜನ 'ಹಳ್ಳಿಯ ವಾಲ್ಮೀಕಿ ಗುರುಪೀಠದ ಪೀಠಾಧಿಪತಿಗಳಾದ ಡಾ. ಪ್ರಸನ್ನ ನಂದಪುರಿ ಮಹಾ ಸ್ವಾಮಿಯವರ ಆರೋಗ್ಯಕ್ಷೇಮವನ್ನು ಮಡಿವಾಳ ಗುರು ಪೀಠದ ಪೀಠಾಧಿಪತಿ ಬಸವ ಮಾಚಿದೇವ ಪರಮಪೂಜ್ಯರ ದಿವ್ಯ ಉಪಸ್ಥಿತಿಯಲ್ಲಿ ಕೆಎಂಎಫ್ ಬಳ್ಳಾರಿ ಮಾಜಿ ಅಧ್ಯಕ್ಷ ಭೀಮ ನಾಯ್ಕ ಕುಶಲೋಪಚಾರಿ ವಿಚಾರಿಸಿ ಉಭಯ ಶ್ರೀಗಳನ್ನು ಸತ್ಕರಿಸಿ ಬೇಗ ಗುಣಮುಖವಾಗುವಂತೆ ಪ್ರಾರ್ಥಿಸಿದರು,

ಈ ಸಂದರ್ಭದಲ್ಲಿ ಅವರು ಮಾತನಾಡಿ, ಪೂಜ್ಯ ವಾಲ್ಮೀಕಿ ಶ್ರೀಗಳು ಶಸ್ತ್ರಚಿಕಿತ್ಸೆ ಒಳಗಾಗಿದ್ದು, ಅವರು ಚೇತರಿಸಿಕೊಳ್ಳುತ್ತಿದ್ದಾರೆ ಶ್ರೀಗಳು ವಾಲ್ಮೀಕಿ ಸಮುದಾಯದ ಸೇರಿದಂತೆ ಲೋಕ ಕಲ್ಯಾಣಕ್ಕಾಗಿ ತಮ್ಮ ಜೀವನವನ್ನೇ ಮುಡುಪಿಟ್ಟು ಶ್ರಮಿಸಿ ಭಕ್ತ ವೃಂದಕ್ಕೆ ಹಾಗೂ ಸಮುದಾಯದ ಸೇವೆಗೆ ಶ್ರೀಗಳ ಮಾರ್ಗದರ್ಶನ ಅವಶ್ಯಕತೆ ಇದ್ದು, ಮಹಾಸ್ವಾಮೀಜಿಗಳು ಆದಷ್ಟು ಬೇಗ ಪೂರ್ಣ ಗುಣಮುಖರಾಗಲಿ ಎಂದರು,

ಈ ಸಂದರ್ಭದಲ್ಲಿ ಹಗರಿಬೊಮ್ಮನಹಳ್ಳಿ ವಾಲ್ಮೀಕಿ ಸಮಾಜದ ತಾಲೂಕ ಅಧ್ಯಕ್ಷರಾದ ಪವಾಡಿ ಹನುಮಂತಪ್ಪ, ಆರ್ ಎಸ್ ಎಸ್ ಎನ್ ಬ್ಯಾಂಕಿನ ಅಧ್ಯಕ್ಷರಾದ ದಾದಮ್ಮನವರ ಬಸವರಾಜ್, ವಾಲ್ಮೀಕಿ ಸಮಾಜದ ಮುಖಂಡರಾದ ಸೆರಗಾರ್ ಹುಚ್ಚಪ್ಪ, ಪುರಸಭೆ ನಾಮ ನಿರ್ದೇಶಕರಾದ ಬಾರಿಕರ ಮಂಜುನಾಥ್, ತ್ಯಾವಣಿಗಿ ಕೊಟ್ರೇಶ್, ಮೂಲಿಮನಿ ಶಾರುಖ್ ಉಪಸ್ಥಿತರಿದ್ದರು,

# ಶ್ರೀಶೈಲ ಮಲ್ಲಿಕಾರ್ಜುನನ ದರ್ಶನಕ್ಕೆ ಭಕ್ತಸಾಗರ: ಹೆದ್ದಾರಿಯುದ್ದಕ್ಕೂ ಭಕ್ತಿಯ ಹರಿವು




- ಮಲ್ಲಮ್ಮ ನುಡಿ ವಾರ್ತೆ ವಿಶೇಷ ವರದಿ ವೀರಣ್ಣ ಕಲಕೇರಿ ಕೆಂಭಾವಿ

> “ ವಿಜಯಪುರ, ಬಾಗಲಕೋಟೆ ಹಾಗೂ ಮಹಾರಾಷ್ಟ್ರದ ಗಡಿಯಿಂದ ಆರಂಭವಾದ ಈ ಭಕ್ತಿಯ ಪಯಣವು ಯಾದಗಿರಿ, ಸಿಂದಗಿ, ಶಹಾಪುರ, ಸುರಪುರ ಹಾಗೂ ಹುನಗುಂದ ಮಾರ್ಗವಾಗಿ ಶ್ರೀಶೈಲದತ್ತ ಯಶಸ್ವಿಯಾಗಿ ಕಾಲ್ನಡಿಗಗೆ ದಾರಿಯುದ್ದಕ್ಕೂ ಸಿಗುತ್ತಿರುವ ಜನರ ಪ್ರೀತಿ ಮತ್ತು ದಾಸೋಹ ಸೇವೆಗಳು ಪಾದಯಾತ್ರಿಗಳಿಗೆ ಬೆನ್ನೆಲುಬಾಗಿ ನಿಂತಿವೆ.

ಯುಗಾದಿ ಹಬ್ಬದ ಸಡಗರ ಹಾಗೂ ಶ್ರೀಶೈಲದ ಮಲ್ಲಿಕಾರ್ಜುನನ ಮಹಾ ಜಾತ್ರೆಯ ಹಿನ್ನೆಲೆಯಲ್ಲಿ ಸಂಗಮಗೊಳ್ಳಲು ರಾಜ್ಯದ ಹಲವು ಹೆದ್ದಾರಿಗಳು ಶ್ರೀಶೈಲ ಭಕ್ತರಿಂದ ತುಂಬಿಕೊಂಡಿವೆ. ವಿಜಯಪುರ, ಬಾಗಲಕೋಟೆ ಹಾಗೂ ನೆರೆಯ ಮಹಾರಾಷ್ಟ್ರದ ಗಡಿ ಭಾಗಗಳಿಂದ ಸಾವಿರಾರು ಭಕ್ತರು ತಂಡೋಪತಂಡವಾಗಿ ಪಾದಯಾತ್ರೆ ಕೈಗೊಂಡಿದ್ದು, ಹೆದ್ದಾರಿ ಸೇರಿದಂತೆ ಹಲವೆಡೆ ಶಿವನಾಮ ಮಲ್ಲಿಕಾರ್ಜುನ ಸ್ಮರಣೆಯಲ್ಲಿ ಮುಳುಗಿದೆ.

ಶ್ರೀಶೈಲ ಮಲ್ಲಿಕಾರ್ಜುನನ ಜಾತ್ರೆಯಲ್ಲಿ ಸಂಗಮಗೊಳ್ಳುವ, ಮಲ್ಲಿಕಾರ್ಜುನ ದರ್ಶನ ಪಡೆಯುವ ಹಂಬಲದ ಭಕ್ತಸಾಗರ ವಿಶೇಷವಾಗಿ ಮಹಾರಾಷ್ಟ್ರದ ಗಡಿ ಗ್ರಾಮಗಳು ಹಾಗೂ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಿಂದ ಹೊರಡುವ ಭಕ್ತರ ಸಮೂಹವು ಯಾದಗಿರಿ, ಸಿಂದಗಿ-ಶಹಾಪುರ ಹಾಗೂ ಸುರಪುರ-ಹುನಗುಂದ ಹೆದ್ದಾರಿಗಳ ಮೂಲಕ ಶ್ರೀಶೈಲದತ್ತ ಹೆಜ್ಜೆ ಹಾಕುತ್ತಿರುವುದು ಸರ್ವೇ ಸಾಮಾನ್ಯವಾಗಿದೆ. ಹಗಲಿರುಳು ಎನ್ನದೆ ಭಕ್ತರು ಸಾಗುತ್ತಿದ್ದಾರೆ. ವರ್ಷದಿಂದ ವರ್ಷಕ್ಕೆ ಪಾದಯಾತ್ರಿಗಳ ಸಂಖ್ಯೆ ಗಣನೀಯವಾಗಿ ಏರಿಕೆಯಾಗುತ್ತಲೇ ಇದೆ ಎಂದೇ ಹೇಳಬಹುದು.

ಕೈಯಲ್ಲಿ ನಂದಿಕೋಲು, ಹೆಗಲ ಮೇಲೆ ಕಿರು ಚೀಲ, ಕೈಯಲ್ಲಿ ವಾಟರ್ ಬಾಟಲ್ ಹಿಡಿದ ಭಕ್ತರು ಗುಂಪು ಗುಂಪಾಗಿ ಸಾಗುತ್ತಿರುವುದು ನೋಡುಗರ ಕಣ್ಣಿಗೆ ದೈವಭಕ್ತಿಯ ಹಬ್ಬದಂತೆ ಕಾಣುತ್ತಿದೆ.

ಮಹಾರಾಷ್ಟ್ರದ ಗಡಿ ಭಾಗದ ಭಕ್ತರು ಸಹ ಇದೇ ಮಾರ್ಗವಾಗಿ ಸೇರಿಕೊಳ್ಳುತ್ತಿರುವುದರಿಂದ ಹೆದ್ದಾರಿಯುದ್ದಕ್ಕೂ ಕೇಸರಿ ಧ್ವಜಗಳು ರಾರಾಜಿಸುತ್ತಿವೆ.

ದಣಿವಿಗೆ ಭಕ್ತರ ಬಿಡಾರಗಳ ದಾಸೋಹ ನೆರಳು:

ಸುಡುವಬಿಸಿಲಿನಲ್ಲಿ ಕಿಲೋಮೀಟರ್‌ಗಟ್ಟಲೆ ನಡೆಯುವ ಭಕ್ತರಿಗೆ ಆಸರೆಯಾಗಿ ಹೆದ್ದಾರಿಯುದ್ದಕ್ಕೂ ಹತ್ತಾರು ಸೇವಾ ಕೇಂದ್ರಗಳು ತಲೆ ಎತ್ತಿವೆ. ಜಿಲ್ಲಾ ಕೇಂದ್ರ ಯಾದಗಿರಿ, ಸಿಂದಗಿ-ಶಹಾಪುರ, ಹುನಗುಂದ ಸುರಪುರ ಈ ಮಾರ್ಗಗಳಲ್ಲಿ ಸ್ಥಳೀಯ ಗ್ರಾಮಸ್ಥರು ಹಾಗೂ ದಾನಿಗಳು ಸೇರಿ ಯಾತ್ರಾರ್ಥಿಗಳಿಗೆ ಭರ್ಜರಿ ಅನ್ನದಾಸೋಹ, ಪಾದಯಾತ್ರಿಗಳಿಗೆ ಕುಡಿಯುವ ನೀರು,

ಮಜ್ಜಿಗೆ ಹಾಗೂ ವಿಶ್ರಾಂತಿಗಾಗಿ ಬಿಡಾರಗಳನ್ನು ಹೂಡಿದ್ದಾರೆ. ಬಿಸಿಲಿನ ತಾಪ ತಾಳಲಾರದೆ ಸುಸ್ತಾಗುವ ಭಕ್ತರಿಗೆ ತಕ್ಷಣದ ಔಷಧೋಪಚಾರ ನೀಡಿ, ಅವರನ್ನು ಪ್ರೋತ್ಸಾಹಿಸಿ ಕಳುಹಿಸಿಕೊಡಲಾಗುತ್ತಿದೆ.

ಆಯಾಸವಿದ್ದರೂ ಭಕ್ತಿಯ ಕಳೆ:

"ಮಲ್ಲಿಕಾರ್ಜುನ ದರ್ಶನ ಪಡೆಯುವ ಹಂಬಲವಿದ್ದರೆ ಬಿಸಿಲು-ಮಳೆ ಯಾವುದೂ ಲೆಕ್ಕಕ್ಕಿಲ್ಲ" ಎನ್ನುವುದು

ಯಾತ್ರಾರ್ಥಿಗಳ ಭಕ್ತರ ಅಚಲ ವಿಶ್ವಾಸದಂತೆ ಹೆದ್ದಾರಿಯಲ್ಲಿ ಸಾಗುವಾಗಲೂ ಭಕ್ತರ ಮುಖದಲ್ಲಿ ಆಯಾಸಕ್ಕಿಂತ ಹೆಚ್ಚಾಗಿ ಭಕ್ತಿಯ ಕಳೆ ಎದ್ದು ಕಾಣುತ್ತಿದೆ. ಮಕ್ಕಳಿಂದ ವೃದ್ಧರವರೆಗೆ ಎಲ್ಲರೂ ಭಕ್ತಿಗೀತೆಗಳನ್ನು ಹಾಡುತ್ತಾ, ಒಬ್ಬರಿಗೊಬ್ಬರು ಧೈರ್ಯ ತುಂಬುತ್ತಾ ಸಾಗುತ್ತಿರುವುದೇ ಒಂದು ಸಂಭ್ರಮ.

# ಸ್ಪರ್ಧಾತ್ಮಕ ಯುಗದಲ್ಲಿ ಮೊಬೈಲ್ ಬಳಕೆ ಬಿಟ್ಟು ಪುಸ್ತಕ ಓದುವ ಅಭಿರುಚಿ ಹೆಚ್ಚಿಸಿಕೊಳ್ಳಿ



ಯಲಬುರ್ಗಾ : ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಯುಗದಲ್ಲಿ ಮೊಬೈಲ್ ಬಳಕೆಯಿಂದ ದೂರವಿದ್ದು ಪುಸ್ತಕ ಓದುವ ಅಭಿರುಚಿಯನ್ನು ಹೆಚ್ಚಿಸಿಕೊಂಡು ಉತ್ತಮ ಅಂಕಗಳನ್ನು ಪಡೆಯಬೇಕು ಎಂದು ಯಲಬುರ್ಗಾ ತಾಲೂಕು ಪಂಚಾಯತಿ ಸಿ.ಇ.ಓ ನೀಲಾಗಂಗ ಬಬಲಾದಿ ಅವರು ಅದ್ಯಕ್ಷತೆ ವಹಿಸಿ, ಅವರು ಯಲಬುರ್ಗಾ ತಾಲೂಕು ಹಿಂದುಳಿದ ವರ್ಗ ಕಲ್ಯಾಣಾಧಿಕಾರಿಗಳ ಕಾರ್ಯಲದ

ಡಿ.ದೇವರಾಜ ಅರಸು ಭವನದಲ್ಲಿ ಎಸ್ ಎಸ್ ಎಲ್ ಸಿ ಪರೀಕ್ಷಾ ಫಲಿತಾಂಶ ಸುಧಾರಣೆಗಾಗಿ ಹಮ್ಮಿಕೊಂಡಿರುವ ಯಲಬುರ್ಗಾ ಮತ್ತು ಕುಕನೂರಿನ ಬಿ ಸಿ ಎಂ ವಸತಿ ನಿಲಯಗಳಲ್ಲಿ 10 ನೇ ತರಗತಿ ಓದುತ್ತಿರುವ ಸುಮಾರು 220 ವಿದ್ಯಾರ್ಥಿಗಳಿಗೆ, ಯಲಬುರ್ಗಾ ದಲ್ಲಿ ಒಂದೆಡೆ ಸೇರಿಸಿ 3 ತರಗತಿಗಳಾಗಿ ವಿವಭಜನೆ ಮಾಡಿ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ಪರೀಕ್ಷಾ ಪೂರ್ವ ತರಬೇತಿಯ ಕಾರ್ಯಕ್ರಮದಲ್ಲಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ ಪ್ರತಿಶತ 90 ರಷ್ಟು ಅಂಕಗಳನ್ನು ಪಡೆದುಕೊಂಡವರಿಗೆ ನಮ್ಮ ಇಲಾಖೆಯಿಂದ ಲ್ಯಾಪಟಾಪ್ ವಿತರಿಸಲಾಗುವದು ಎಂದರು. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ನಾಗವೇಣಿ ಅವರು ದೀಪ ಬೇಳಗಿಸಿ ಮಾತನಾಡಿ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ಪಡೆದು ಇದರ ಸದುಪಯೋಗವನ್ನು ಪಡೆಯಬೇಕು ಎಂದರು. ಕುಕನೂರ ತಾ.ಪಂ.ಸಿಇಓ ಸಂತೋಷ ಪಾಟೀಲ್ ಬಿರಾದಾರ, ಯಲಬುರ್ಗಾ ತಾಲೂಕಾ ವರ್ಗಗಳ ಕಲ್ಯಾಣಾಧಿಕಾರಿ ಶಿವಶಂಕರ ಕರಡಕಲ್ ಮಾತನಾಡಿದರು. ಸಂಪನ್ಮೂಲ ವ್ಯಕ್ತಿಗಳಾದ ರೇವಣೆಪ್ಪ ಬಿ. ಅಬ್ಬಿಗೇರಿ, ಶರಣಬಸಪ್ಪ ಕುಂಬಾರ ಹನುಮಂತಪ್ಪ ಹೊಸಳ್ಳಿ, ನಾಗರಾಜ ಕೊಪ್ಪಳ, ವಿರುಪಾಕ್ಷಪ್ಪ

ಕುರಿ, ಅಮರೇಶ ಸಿದ್ದಾಪೂರ, ರೇಷ್ಮಾ ಎಲಿಗಾರ, ನಿರೂಪಾದೇಪ್ಪ ಕಟ್ಟಿಮನಿ, ಕಟ್ಟಿಮನಿ , ಕಲ್ಮೇಶ ಬ್ಯಾಳಿ ಸಂಪನ್ಮೂಲ ವ್ಯಕ್ತಿ ಗಳು ಹಾಗು ಸಿಬ್ಬಂದಿಗಳು ಭಾಗವಹಿಸಿದ್ದರು.

# ಜಿತೋ ಮಹಿಳಾ ವಿಭಾಗದಿಂದ ಕ್ಯಾನ್ಸರ್ ಜಾಗೃತಿ

- ಮಲ್ಲಮ್ಮ ನುಡಿ ವಾರ್ತೆ ವಿಜಯಪುರ



ನಗರದ ಜಿತೋ ಮಹಿಳಾ ವಿಭಾಗದ ವತಿಯಿಂದ ಕ್ಯಾನ್ಸರ್ ರೋಗ ಜಾಗೃತಿಗಾಗಿ ಕಾರ್ ಜಾಥಾ ನಡೆಸಲಾಯಿತು.

ಮಹಿಳಾ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುವ ದೃಷ್ಟಿಯಿಂದ ಈ ವಿಶೇಷ ಜಾಥಾ ನಡೆಸಿದರು.

ನಗರದ ಜೈನಮಂದಿರದಿಂದ ಆರಂಭಗೊಂಡ ಕಾರ್ ಜಾಥಾ ಶ್ರೀ ಸಿದ್ದೇಶ್ವರ ದೇವಾಲಯ, ಗಾಂಧಿ ವೃತ್ತ, ವಾಟರ್ ಟ್ಯಾಂಕ್, ಶಿವಾಜಿ ವೃತ್ತ ಸೇರಿದಂತೆ ವಿವಿಧ ಮಾರ್ಗಗಳಲ್ಲಿ ಸಂಚರಿಸಿ ಸ್ಪೂರ್ತಿ ಸಭಾಂಗಣಕ್ಕೆ ತಲುಪಿ ಸಂಪನ್ನಗೊಂಡಿತು. ಸಂಘದ ಸದಸ್ಯೆಯರು, ವಿವಿಧ ಸಂಘ-ಸಂಸ್ಥೆಗಳ ಪ್ರತಿನಿಧಿಗಳು, ವೈದ್ಯರು ಉತ್ಸಾಹದಿಂದ ಅದರಲ್ಲೂ ಕೆಂಪು ವರ್ಣದ ಉಡುಗೆಯಲ್ಲಿ ಭಾಗವಹಿಸಿದ್ದು ವಿಶೇಷವಾಗಿತ್ತು.. ಕ್ಯಾನ್ಸರ್ ರೋಗ ತಡೆಗಟ್ಟುವ ವಿಧಾನ, ಕ್ಯಾನ್ಸರ್ ರೋಗಕ್ಕೆ ಕಾರಣವಾಗುವ ಅಂಶಗಳ ಕುರಿತು ಭಿತ್ತಿ ಫಲಕಗಳನ್ನು ಸಹ ಪ್ರದರ್ಶಿಸಲಾಯಿತು.

ಈ ಕಾರ್ ರ‍್ಯಾಲಿಗೆ ಚಾಲನೆ ನೀಡಿದ ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕ ರಾಮನಗೌಡ ಹಟ್ಟಿ ಮಾತನಾಡಿ, ಮಹಿಳೆ ಇಂದು ಎಲ್ಲ ಕ್ಷೇತ್ರದಲ್ಲಿಯೂ ಸಾಧನೆಯ ನಗೆ ಬೀರಿದ್ದಾಳೆ, ವೈದ್ಯಕೀಯ, ವಿಜ್ಞಾನ, ಬಾಹ್ಯಾಕಾಶ ಹೀಗೆ ಎಲ್ಲ ರಂಗದಲ್ಲಿಯೂ ಸಾಧನೆ ತೋರಿದ್ದಾರೆ, ಒಬ್ಬ ತಾಯಿಯಾಗಿ, ಸಹೋದರಿಯಾಗಿ, ಪತ್ನಿಯಾಗಿ ಸಮಾಜದಲ್ಲಿ ತನ್ನದೇ ಆದ ಮಹೋನ್ನತ ಪಾತ್ರ ನಿಭಾಯಿಸುವ ಸ್ತ್ರೀ ಪೂಜ್ಯಳು ಎಂದರು.

ಮಹಿಳಾ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುವ ದೃಷ್ಟಿಯಿಂದ ಕ್ಯಾನ್ಸರ್ ಜಾಗೃತಿ ಜಾಥಾ ಆಯೋಜಿಸಿರುವುದು ಅರ್ಥಪೂರ್ಣ ಎಂದರು.

ಈ ವೇಳೆ ಮಾತನಾಡಿದ ವೈದ್ಯೆ ಡಾ. ವಾಣಿ ಗಚ್ಚಿನಮಠ ಮಾತನಾಡಿ, ಕ್ಯಾನ್ಸರ್ ಬಗ್ಗೆ ಭಯ ಬೇಡ, ಕ್ಯಾನ್ಸರ್ ಬಗ್ಗೆ ಅರಿವು ಅಗತ್ಯ, ಪ್ರಾಥಮಿಕ ಹಂತದಲ್ಲಿಯೇ ಕ್ಯಾನ್ಸರ್ ಪತ್ತೆ ಮಾಡಿದರೆ ಸಂಪೂರ್ಣವಾಗಿ ಅದನ್ನು ಗುಣಪಡಿಸಬಹುದು, ಆದರೆ ಅನೇಕರು ಕ್ಯಾನ್ಸರ್ ಎಂದಾಕ್ಷಣ ಭಯಪಡುತ್ತಾರೆ, ಚಿಕಿತ್ಸೆ ಪಡೆಯಲು ಹಿಂದೇಟು ಹಾಕುತ್ತಾರೆ, ಇದು ಆಗಬಾರದು, ಆರಂಭದಲ್ಲಿಯೇ ವೈದ್ಯರ ಸಲಹೆ ಪಡೆದುಕೊಳ್ಳಬೇಕು, ಉತ್ತಮ ಜೀವನ ಶೈಲಿ ರೂಢಿಸಿಕೊಂಡು, ನಿಯಮಿತವಾದ ಆಹಾರ ಪದ್ಧತಿ ರೂಢಿಸಿಕೊಂಡರೆ ಅನೇಕ ರೋಗಗಳನ್ನು ಬಾರದಂತೆ ತಡೆಗಟ್ಟಬಹುದಾಗಿದೆ ಎಂದರು.

ಕಾನೂನು ತಜ್ಞೆ ಡಾ. ಉಜ್ವಲಾ ಸರನಾಡಗೌಡ, ಖ್ಯಾತ ವೈದ್ಯ ಡಾ. ಕಿರಣ ಓಸ್ವಾಲ್ ಮಾತನಾಡಿದರು. ಖ್ಯಾತ ಉದ್ಯಮಿ ಹಾಗೂ ಸಮಾಜ ಸೇವಕ ಮಹಾವೀರ ಪಾರೇಖ್ ಆಶಯನುಡಿಗಳನ್ನಾಡಿದರು. ಜಿತೋ ಚೇರಮನ್ ಧೀರಿಶ ಧರ್ಮದರ್ಶಿ, ಡಾ. ಅಶ್ವಿನಿ ಯಂಡಿಗೇರಿ, ಸುಹಾಸಿನಿ ವಾರದ, ಡಾ. ಜ್ಯೋತಿ ಕೊರಬು, ಡಾ. ಅಥುಲ್ ಥೊಬ್ಬಿ, ಕಿರಣ ಸಂಕಲೇಚಾ, ಸೋನಾಲಿ ಕೋಠಾರಿ, ಶರ್ಮಿಳಾ ಓಸ್ವಾಲ್ ಮುಂತಾದವರು ಹಾಜರಿದ್ದರು.

# ಕ್ರಿಕೆಟನ್ನು ಉತ್ಸಾಹದಿಂದ ಆಡಿ : ಶಿವಶಂಕರಗೌಡ



- ಮಲ್ಲಮ್ಮ ನುಡಿ ವಾರ್ತೆ ಮುದಗಲ್

ಯಮನೂರು ಉರುಸು ನಿಮಿತ್ಯ ಟೆನ್ನಿಸ್ ಬಾಲ್ ಕ್ರಿಕೆಟ್ ಕ್ರೀಡೆ ಹಮ್ಮಿಕೊಳ್ಳಲಾಗಿದೆ ಆಟಗಾರರು ಉತ್ಸಾಹದಿಂದ ಆಟವಾಡಿ ಗೆಲುವಿನ ಶಿಖರವಾಗಬೇಕೆಂದು ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಶಿವಶಂಕರಗೌಡ ಶುಕ್ರವಾರ ತಿಳಿಸಿದರು.

ಪಟ್ಟಣ ಸಮೀಪದ ಉಪ್ಪಾರ ನಂದಿಹಾಳ ಗ್ರಾಮದ ಯಮನೂರು ಉರುಸು ಅಂಗವಾಗಿ ಟೆನ್ನಿಸ್ ಬಾಲ ಕ್ರಿಕೆಟ್ ಟೂರ್ನಮೆಂಟ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಕ್ರಿಕೆಟ್‌ನಲ್ಲಿ ಸೋಲು-ಗೆಲುವನ್ನು ಸಮಚಿತ್ತದಿಂದ ಸ್ವೀಕರಿಸುವುದು ಕ್ರೀಡಾ ಮನೋಭಾವದ

ಸಂಕೇತವಾಗಿದೆ. ಸೋಲನ್ನು ಅರಗಿಸಿಕೊಳ್ಳುವುದು ಮತ್ತು ಗೆಲುವನ್ನು ಸಂಭ್ರಮಿಸುವುದು ಆಟದ ಅವಿಭಾಜ್ಯ ಅಂಗ. ಕ್ರೀಡೆಯು ಕೇವಲ ಫಲಿತಾಂಶವಲ್ಲ, ಬದಲಾಗಿ ಹೋರಾಟ ಮತ್ತು ಕಲಿಯುವ ಪ್ರಕ್ರಿಯೆಯಾಗಿದೆ. ಉತ್ತಮ ಕ್ರೀಡಾಪಟುಗಳು ಸೋಲಿನಿಂದ ಪಾಠ ಕಲಿಯುತ್ತಾರೆ ಮತ್ತು ಗೆಲುವಿನಿಂದ ವಿನಯಶೀಲರಾಗಿರುತ್ತಾರೆ. ಎಲ್ಲರೂ ನಿಯಮಾವಳಿಗೆ ಬದ್ಧರಾಗಿ ಕ್ರೀಡೆ ಆಡಬೇಕು ಎಂದು ಹೇಳಿದರು.

ಉಪ್ಪರ ನಂದಿಹಾಳ ಗ್ರಾಮದ ಮುಖಂಡರು, ಗ್ರಾಮಸ್ಥರು, ಕ್ರಿಕೆಟ್ ಕ್ರೀಡಾಪಟುಗಳು ಸೇರಿದಂತೆ ಸುತ್ತಲಿನ ಗ್ರಾಮಸ್ಥರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)

### ವಿದ್ಯಾರ್ಥಿ ಸಂಘ ಚುನಾವಣೆಗೆ ನಿರ್ಧಾರಕ್ಕೆ

# ಶೇಖರ್ ರಾಜಶೇಖರಗೌಡ ಆಕ್ಷೇಪ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ರಾಜ್ಯದ ಕಾಲೇಜು, ವಿಶ್ವ ವಿದ್ಯಾಲಯಗಳಲ್ಲಿ ವಿದ್ಯಾರ್ಥಿ ಸಂಘಗಳ ಚುನಾವಣೆ ನಡೆಸುವ ಬಗ್ಗೆ ನಿನ್ನೆ ಮಂಡಿಸಿದ ರಾಜ್ಯದ 2026–27 ನೇ ಸಾಲಿನ ವಾರ್ಷಿಕ ಬಜೆಟ್ ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ ಮಾಡಿರುವುದನ್ನು ಬಿಜೆಪಿ ಮುಖಂಡರುಗಳಾದ ಬುಡಾ ಮಾಜಿ ಅಧ್ಯಕ್ಷ ದಮ್ಮೂರು ಶೇಖರ್, ಜಿಲ್ಲಾ ಪಂಚಾಯ್ತಿ ಮಾಜಿ ಸದಸ್ಯಗೋನಾಳ್ ರಾಜಶೇಖರಗೌಡ ಆಕ್ಷೇಪಿಸಿದ್ದಾರೆ.

16 ವರ್ಷದೊಳಗಿನ ಮಕ್ಕಳಿಗೆ ಜಾಲತಾಣದ ಬಳಕೆಯನ್ನು ನಿಷೇಧಿಸಲಾಗುವುದು ಎಂದು ಬಜೆಟ್ನಲ್ಲಿ ಪ್ರಸ್ತಾಪಿಸಲಾಗಿದೆ. ಹೆಚ್ಚುತ್ತಿರುವ ಮೊಬೈಲ್ ಬಳಕೆಯಿಂದ ಮಕ್ಕಳ ಮೇಲೆ ಬೀರುವ ಅಡ್ಡ ಪರಿಣಾಮಗಳನ್ನು ತಡೆಗಟ್ಟಲು ಈ ಕ್ರಮ ಕೈಗೊಳ್ಳುವುದು ಸೂಕ್ತ ನಿರ್ಧಾರ ಇದನ್ನು ನಾವು ಸ್ವಾಗತಿಸುತ್ತೇವೆ.

ಆದರೆ, ಶಿಕ್ಷಣ ತಜ್ಞರು, ಕುಲಪತಿಗಳು ಸೇರಿದಂತೆ ಅನೇಕರು ವಿದ್ಯಾರ್ಥಿ ಸಂಘಗಳಿಗೆ ಚುನಾವಣೆ ನಡೆಸಲು ಆಕ್ಷೇಪ ವ್ಯಕ್ತಪಡಿಸಿದ್ದರೂ. ಅದನ್ನು ರಾಜ್ಯ ಸರ್ಕಾರ ಪರಿಗಣಿಸದೇ, ವಿದ್ಯಾರ್ಥಿಗಳಲ್ಲಿ ನಾಯಕತ್ವ, ಹೊಣೆಗಾರಿಕೆ ಮತ್ತು ಪ್ರಜಾಪ್ರಭುತ್ವ ಮೌಲ್ಯಗಳನ್ನು ಬೆಳೆಸಲು ಕಾಲೇಜು ಮತ್ತು ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿ ಸಂಘಗಳ ಚುನಾವಣೆ ನಡೆಸುವುದಾಗಿ ಘೋಷಿಸಿದೆ. ಇದು ಸರಿಯಾದ ನಿರ್ಧಾರವಲ್ಲ.

ಈಗಾಗಲೇ ಕಾಲೇಜು ಮಟ್ಟದಲ್ಲಿ ಒಂದೊಂದು ಪಕ್ಷದ ಪರವಾಗಿ ಇರುವ ವಿದ್ಯಾರ್ಥಿ ಸಂಘಟನೆಗಳು ಕಾರ್ಯನಿರ್ವಹಿಸುತ್ತಿವೆ. ಹೀಗಿರುವಾಗಲೂ ಚುನಾವಣೆ ನಡೆಸಲು ಮುಂದಾದರೆ ಅಲ್ಲಿ ಪಕ್ಷದ ರಾಜಕೀಯ ಬೆರೆತು ವಿದ್ಯಾರ್ಥಿಗಳಲ್ಲಿನ ಒಗ್ಗಟ್ಟು ಹಾಳಾಗಲಿದೆ. ಹೊಡೆದಾಟ, ಬಡಿದಾಟಕ್ಕೂ ಕಾರಣವಾಗುವ ಸಾಧ್ಯತೆ ಇದೆ. ರಾಜಕೀಯದಲ್ಲಿನ ಅವ್ಯವಸ್ಥೆ ಇಲ್ಲೂ ಕಾಣಬೇಕಾಗುತ್ತದೆ. ಅದಕ್ಕಾಗಿ ಶಿಕ್ಷಣ ಕಲಿಯ ಬೇಕಾದ ಮಕ್ಕಳಿಗೆ ಚುನಾವಣೆ ನಡೆಸಿ ಸಂಘಗಳನ್ನು ಮಾಡುವುದಕ್ಕೆ ನಮ್ಮ ವಿರೋಧವಿದೆ ಎಂದಿದ್ದಾರೆ.

# ಮಾದಕ ವಸ್ತು ಡಿಜಿಟಲ್ ಅಡಿಕ್ಷನ್ ವಿರುದ್ಧ ಸರ್ಕಾರದ ಕ್ರಮಕ್ಕೆ ಸ್ವಾಗತಾರ್ಹ: ಅಬ್ದುಲ್ ಖದಿರ್

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಕರ್ನಾಟಕ ಸರ್ಕಾರವು ರಾಜ್ಯ ಬಜೆಟ್‌ನಲ್ಲಿ ಮಾದಕ ವಸ್ತುಗಳ ಅಡ್ಡಿಕ್ಷನ್ ಹಾಗೂ ಡಿಜಿಟಲ್ ಅಡಿಕ್ಷನ್ ವಿರುದ್ಧ ಕೈಗೊಂಡಿರುವ ಕ್ರಮಗಳನ್ನು ಬೀದರ್ ನಾಗರಿಕ ಸನ್ಮಾರ್ಗ ಸಮಿತಿ ಹಾಗೂ ಜಿಲ್ಲೆಯ ವಿವಿಧ ನಾಗರಿಕ ಸಂಘಟನೆಗಳು ಸ್ವಾಗತಿಸಿವೆ ಎಂದು ಸಮಿತಿಯ ಅಧ್ಯಕ್ಷರಾದ ಡಾ. ಅಬ್ದುಲ್ ಖದೀರ್ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬೀದರ ಸನ್ಮಾರ್ಗ ಸಮಿತಿ ವತಿಯಿಂದ ಶನಿವಾರ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾದಕ ವಸ್ತುಗಳ ಬಳಕೆ ಮತ್ತು ಡಿಜಿಟಲ್ ಅಡಿಕ್ಷನ್ ಇಂದಿನ ಸಮಾಜದಲ್ಲಿ ಗಂಭೀರ ಸಾಮಾಜಿಕ ಹಾಗೂ ಸಾರ್ವಜನಿಕ ಆರೋಗ್ಯದ ಸಮಸ್ಯೆಗಳಾಗಿ ರೂಪುಗೊಂಡಿವೆ ಎಂದು ಹೇಳಿದರು.

ಯುವಕರು, ವಿದ್ಯಾರ್ಥಿಗಳು ಮತ್ತು ಕುಟುಂಬಗಳನ್ನು ವ್ಯಾಪಕವಾಗಿ ಪರಿಣಾಮಗೊಳಿಸುತ್ತಿರುವ ಈ ಸಮಸ್ಯೆಗಳನ್ನು ಸರ್ಕಾರ ಗುರುತಿಸಿ ಕ್ರಮ ಕೈಗೊಂಡಿರುವುದು ಸಮಯೋಚಿತ ಮತ್ತು ಶ್ಲಾಘನೀಯ ಹೆಜ್ಜೆಯಾಗಿದೆ ಎಂದು ಅಭಿಪ್ರಾಯಪಟ್ಟರು.

ಯುವಜನತೆಯಲ್ಲಿ ಮಾದಕ ವಸ್ತುಗಳ ಬಳಕೆ ಹೆಚ್ಚುತ್ತಿರುವುದು ಆತಂಕಕಾರಿ ವಿಷಯವಾಗಿದೆ. ವಿಶೇಷವಾಗಿ ಕೃತಕ (ಸಿಂಥೆಟಿಕ್) ಮಾದಕ ವಸ್ತುಗಳು ನಗರಗಳು, ಪಟ್ಟಣಗಳು ಮತ್ತು ಗ್ರಾಮೀಣ ಪ್ರದೇಶಗಳಲ್ಲಿಯೂ ಸುಲಭವಾಗಿ ಲಭ್ಯವಾಗುತ್ತಿರುವುದು ಪೋಷಕರು ಹಾಗೂ ಶಿಕ್ಷಣ ತಜ್ಞರಲ್ಲಿ ಚಿಂತೆ ಹೆಚ್ಚಿಸಿದೆ ಎಂದು ಹೇಳಿದರು. ಇದರ ಜೊತೆಗೆ ಮೊಬೈಲ್ ಫೋನ್, ಸಾಮಾಜಿಕ ಜಾಲತಾಣಗಳು ಮತ್ತು ಆನ್‌ಲೈನ್ ಗೇಮಿಂಗ್‌ಗಳ ಅತಿಯಾದ ಬಳಕೆಯಿಂದ ಉಂಟಾಗುವ ಡಿಜಿಟಲ್ ಅಡಿಕ್ಷನ್ ಮಕ್ಕಳ ಮತ್ತು ಕಿಶೋರರ ನಡುವೆ ವೇಗವಾಗಿ ಹೆಚ್ಚುತ್ತಿರುವ ಸಮಸ್ಯೆಯಾಗಿದೆ ಎಂದು ಅವರು ಹೇಳಿದರು. ದೀರ್ಘಕಾಲ ಪರದೆ ಬಳಕೆಯಿಂದ ಗಮನದ ಕೊರತೆ, ಆತಂಕ, ನಿದ್ರಾಹೀನತೆ, ಕಣ್ಣು ನೋವು, ತಲೆನೋವು ಹಾಗೂ ಸಾಮಾಜಿಕ ದೂರವಾಗುವಿಕೆ ಮುಂತಾದ ಆರೋಗ್ಯ ಸಮಸ್ಯೆಗಳು ಹೆಚ್ಚುತ್ತಿವೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ ಎಂದು ತಿಳಿಸಿದರು.

ಸಂಘಟನೆಗಳು ಸರ್ಕಾರವನ್ನು ಶಾಲೆಗಳು, ಕಾಲೇಜುಗಳು ಹಾಗೂ ಶಿಕ್ಷಣ ಸಂಸ್ಥೆಗಳ ಸುತ್ತಮುತ್ತ ನಡೆಯುವ ಮಾದಕ ವಸ್ತುಗಳ ಮಾರಾಟ ಮತ್ತು ಸಂಬಂಧಿತ ಅಕ್ರಮ ಚಟುವಟಿಕೆಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿವೆ. ವಿದ್ಯಾರ್ಥಿಗಳನ್ನು ರಕ್ಷಿಸಲು ಕಠಿಣ ಕಾನೂನು ಕ್ರಮಗಳು ಹಾಗೂ ವ್ಯಾಪಕ ಜಾಗೃತಿ ಕಾರ್ಯಕ್ರಮಗಳನ್ನು ಜಾರಿಗೊಳಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು. ಅಲ್ಲದೇ ಸರ್ಕಾರಕ್ಕೆ ಈ ಕುರಿತು ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಸಮಿತಿಯ ಕಾರ್ಯದರ್ಶಿ ಅಶೋಕ ವಡಗಾವೆ ಮಾತನಾಡಿ ಯುವಜನತೆಯನ್ನು ಮಾದಕ ವಸ್ತುಗಳ ದುರುಪಯೋಗದಿಂದ ಮತ್ತು ಅತಿಯಾದ ಡಿಜಿಟಲ್ ಬಳಕೆಯಿಂದ ರಕ್ಷಿಸುವುದು ಕರ್ನಾಟಕದ ಭವಿಷ್ಯವನ್ನು ಸುರಕ್ಷಿತಗೊಳಿಸಲು ಅತ್ಯಂತ ಮುಖ್ಯವಾಗಿದೆ. ಈ ಸಂಬಂಧ ಶಾಲಾ ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳು, ಶಿಕ್ಷಣ ಕಾರ್ಯಕ್ರಮಗಳು ಹಾಗೂ ಸಮುದಾಯ ಮಟ್ಟದ ಚಟುವಟಿಕೆಗಳಲ್ಲಿ ಸರ್ಕಾರದೊಂದಿಗೆ ಸಹಕರಿಸಲು ತಮ್ಮ ಸಂಘಟನೆಗಳು ಸಿದ್ಧವಾಗಿವೆ ಎಂದು ತಿಳಿಸಿದರು. ಸಮಿತಿಯ ಉಪಾಧ್ಯಕ್ಷ ಡಾ. ರಾಜಶೇಖರ ಸೇಡಂಕರ್ ಮಾತನಾಡಿ, ವ್ಯಸನಮುಕ್ತ, ಭಿಕ್ಷಾಟನೆ ಮುಕ್ತ ಮತ್ತು ಸರಳ ವಿವಾಹ ಪ್ರೋತ್ಸಾಹಿಸುವ ಜಿಲ್ಲೆಯನ್ನಾಗಿ ಮಾಡುವುದು ನಮ್ಮ ಸಮಿತಿಯ ಗುರಿಯಾಗಿದೆ ಎಂದರು.

ಸಮಿತಿಯ ಪ್ರಮುಖರಾದ ಬಸವರಾಜ ಮಾಳಗೆ, ಸುರೇಶ ಚನಶೆಟ್ಟಿ, ಶಂಭುಲಿಂಗ ವಾಲದೊಡ್ಡಿ ಸೇರಿದಂತೆ ಇತರರು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

# ಇಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ ಅವರ ಬೀದರ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ ಬೀದರ

ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಮರ್ಚ.8 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.

ಅವರು ಮಾರ್ಚ.8 ರಂದು ಬೆಳಿಗ್ಗೆ 6.20ಕ್ಕೆ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಹೊರಟು ಬೆಳಿಗ್ಗೆ 7.35ಕ್ಕೆ ಬೀದರ ವಿಮಾನ ನಿಲ್ದಾಣಕ್ಕೆ ಆಗಮಿಸಲಿದ್ದಾರೆ. ಬೆಳಿಗ್ಗೆ 9.30ಕ್ಕೆ ಕಮಲನಗರ ತಾಲ್ಲೂಕಿನ ಡಿಗ್ಗಿಯಲ್ಲಿ ಸಿಧ್ಧಾಂತ ಎನರ್ಜಿ ಸ್ಟೆಷನ್ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಬೆಳಿಗ್ಗೆ 10.45ಕ್ಕೆ ಬೀದರ ಜಿಲ್ಲಾ ನೆಹರು ಕ್ರೀಡಾಂಗಣದಲ್ಲಿ ಆಯೋಜಿಸಿರುವ ಜಿಲ್ಲಾ ಮಟ್ಟದ ಮಹಿಳಾ ಕ್ರೀಡಾಕೂಟ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಬೆಳಿಗ್ಗೆ 11ಕ್ಕೆ ಬೀದರ ಡಾ.ಚೆನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಆಯೋಜಿಸಿರುವ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 12ಕ್ಕೆ ಬೀದರನ ಚಿಂತಾಮಣಿ ಪೆಟ್ರೋಲ್ ಪಂಪ್ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 1ಕ್ಕೆ ಬೀದರ ರಸ್ತೆ ಮೂಲಕ ಕಲಬುರಗಿ ಪ್ರಯಾಣಿಸಿ ಅಲ್ಲಿಯ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಂಜೆ 6ಕ್ಕೆ ಕಲಬುರಗಿ ರಸ್ತೆ ಮೂಲಕ ಬೀದರ ಹೋರಟು ಸಂಜೆ 7.55ಕ್ಕೆ ಬೀದರನ ಕೋಳಾರ (ಕೆ) ಗ್ರಾಮದಲ್ಲಿ ಆಯೋಜಿಸಿರುವ ರಾಮಸ್ವಾಮಿ ಹೆರಿಯರ್ ಪ್ರೌಢ ಶಾಲೆಯ 35ನೇ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ರಾತ್ರಿ 9ಕ್ಕೆ ಕೋಳಾರ (ಕೆ) ರಸ್ತೆ ಮೂಲಕ ಭಾಲ್ಕಿಗೆ ಪ್ರಯಾಣಿಸಿ ಅಲ್ಲಿಯೇ ವಾಸ್ತವ್ಯ ಮಾಡಲಿದ್ದಾರೆಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರತ್ಯೇಕ ಎಸ್ಟಿ ಆಯೋಗ ರಚನೆಗೆ ಸ್ವಾಗತ – ಸುನೀಲ ಭಾವಿಕಟ್ಟಿ



ಮಲ್ಲಮ್ಮ ನುಡಿ ವಾರ್ತೆ ಬೀದರ್

ಪರಿಶಿಷ್ಟ ಪಂಗಡ (ಎಸ್ಟಿ) ಸಮುದಾಯದವರು ಸಲ್ಲಿಸುವ ದೂರುಗಳು ಹಾಗೂ ವಿವಿಧ ಸಮಸ್ಯೆಗಳಿಗೆ ಸಕಾಲದಲ್ಲಿ ಸ್ಪಂದನೆ ಸಿಗುತ್ತಿಲ್ಲ ಎಂಬ ಬೇಸರದ ಧ್ವನಿ ಹಲವು ವರ್ಷಗಳಿಂದ ಕೇಳಿಬರುತ್ತಿತ್ತು. ಈ ಹಿನ್ನೆಲೆಯಲ್ಲಿ ಸಮುದಾಯದ ಹಕ್ಕುಗಳನ್ನು ಸಮರ್ಪಕವಾಗಿ ರಕ್ಷಿಸಲು ರಾಜ್ಯ ಸರ್ಕಾರವು ಬಜೆಟ್‌ನಲ್ಲಿ ಪ್ರತ್ಯೇಕ ಪರಿಶಿಷ್ಟ ಪಂಗಡ (ಎಸ್ಟಿ) ಆಯೋಗವನ್ನು ಸ್ಥಾಪಿಸುವುದಾಗಿ ಘೋಷಿಸಿರುವುದು ಅತ್ಯಂತ ಸ್ವಾಗತಾರ್ಹ ಕ್ರಮವಾಗಿದೆ ಎಂದು ಟೋಕ್ರೆ ಕೋಳಿ ಸಮಾಜದ ಯುವ ಮುಖಂಡ ಸುನೀಲ ಭಾವಿಕಟ್ಟಿ ತಿಳಿಸಿದ್ದಾರೆ.

ಇದೇ ವೇಳೆ ಪರಿಶಿಷ್ಟ ಪಂಗಡಗಳ ಇಲಾಖೆ ಹಾಗೂ ನಿರ್ದೇಶನಾಲಯದಡಿ ಬರುವ ನಿಗಮ ಮತ್ತು ಇತರೆ ಕಚೇರಿಗಳ ಕಾರ್ಯನಿರ್ವಹಣೆಗೆ ಅನುಕೂಲವಾಗುವಂತೆ ಬೆಂಗಳೂರಿನ ಸುಮನಹಳ್ಳಿಯಲ್ಲಿ 'ಶ್ರೀ ಮಹರ್ಷಿ ವಾಲ್ಮೀಕಿ ಆಡಳಿತ ಸೌಧ' ನಿರ್ಮಿಸಲು ಸರ್ಕಾರ ಮುಂದಾಗಿರುವುದು ಸಮುದಾಯದ ಆಡಳಿತಾತ್ಮಕ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವತ್ತ ಪ್ರಮುಖ ಹೆಜ್ಜೆಯಾಗಿದೆ. ಇದರ ನಿರ್ಮಾಣಕ್ಕಾಗಿ ಸರ್ಕಾರವು 50 ಕೋಟಿ ರೂ. ವೆಚ್ಚ ಮಾಡಲು ಉದ್ದೇಶಿಸಿರುವುದಾಗಿ ಅವರು ತಿಳಿಸಿದ್ದಾರೆ.

ಅರಣ್ಯದಂಚಿನಲ್ಲಿ ವಾಸಿಸುತ್ತಿರುವ ಇರುಳ, ಸೋಲಿಗ, ಜೇನುಕುರುಬ, ಕಾಡುಕುರುಬ, ಕುಡಿಯ, ಸಿದ್ದಿ ಸೇರಿದಂತೆ ಇತರೆ ಸೂಕ್ಷ್ಮ ಅತಿ ಸೂಕ್ಷ್ಮ ಪರಿಶಿಷ್ಟ ಪಂಗಡಗಳ (ಪಿವಿಟಿಜಿ) ಸಮಗ್ರ ಅಭಿವೃದ್ಧಿಗಾಗಿ ಕರ್ನಾಟಕ ಆದಿವಾಸಿ ಅಭಿವೃದ್ಧಿ ನಿಗಮ ಸ್ಥಾಪಿಸಲು ಸರ್ಕಾರ ಉದ್ದೇಶಿಸಿರುವುದೂ ಸಹ ಶ್ಲಾಘನೀಯ ಕ್ರಮವಾಗಿದೆ ಎಂದು ಹೇಳಿದರು.ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ಆಶ್ರಮ ಶಾಲೆಗಳಲ್ಲಿ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳ ಆರೈಕೆಗೆ 119 ಮಹಿಳಾ ಕೇರ್‌ಟೇಕರ್ ಹುದ್ದೆಗಳನ್ನು ಸೃಜಿಸಿ ಅದಕ್ಕಾಗಿ 3 ಕೋಟಿ ರೂ. ಮೀಸಲಿಡಲಾಗಿದೆ. ಇದರಿಂದ ವಿದ್ಯಾರ್ಥಿಗಳ ಕಲ್ಯಾಣ ಮತ್ತು ಸುರಕ್ಷತೆ ಹೆಚ್ಚುವ ನಿರೀಕ್ಷೆಯಿದೆ ಎಂದು ಅವರು ಹೇಳಿದರು.ಇದರ ಜೊತೆಗೆ ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಕರಿಗೆ ಸ್ವಯಂ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ನಿಗಮಗಳ ಉದ್ಯಮಶೀಲತಾ ಅಭಿವೃದ್ಧಿ ಯೋಜನೆಯಡಿ ಫಾಸ್ಟ್ ಫುಡ್ ಟ್ರಕ್ ಟ್ರೈಲರ್ / ಮೊಬೈಲ್ ಕಿಚನ್ ಫುಡ್ ಕಿಯೋಸ್ಕ್ ಸ್ಥಾಪಿಸಲು 4 ಲಕ್ಷ ರೂ. ಸಹಾಯಧನ ಘೋಷಿಸಿರುವುದು ಯುವಕರಿಗೆ ಆರ್ಥಿಕವಾಗಿ ನೆರವಾಗಲಿದೆ ಎಂದು ಅವರು ಅಭಿಪ್ರಾಯಪಟ್ಟರು. ಒಟ್ಟಿನಲ್ಲಿ ಸರ್ಕಾರ ಬಜೆಟ್‌ನಲ್ಲಿ ಪರಿಶಿಷ್ಟ ಪಂಗಡ ಸಮುದಾಯದ ಶಿಕ್ಷಣ, ಉದ್ಯೋಗ ಮತ್ತು ಸಾಮಾಜಿಕ ಅಭಿವೃದ್ಧಿಗೆ ಸಂಬಂಧಿಸಿದ ಹಲವು ಯೋಜನೆಗಳನ್ನು ಘೋಷಿಸಿರುವುದು ಸಮುದಾಯದ ಅಭಿವೃದ್ಧಿಗೆ ಸಹಕಾರಿಯಾಗಲಿದೆ ಎಂದು ಸುನೀಲ ಭಾವಿಕಟ್ಟಿ ಸಂತೋಷ ವ್ಯಕ್ತಪಡಿಸಿದ್ದಾರೆ.

# ಸಾರ್ವಜನಕ ಸಮಸ್ಯೆಗಳಿಗೆ ಸ್ಪಂದಿಸುವುದೇ ನಮ್ಮ ಗುರಿ: ಬಾಬು



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ದೇಶದಲ್ಲಿ 1500ಕ್ಕೂ ಹೆಚ್ಚು ಮಾನವ ಹಕ್ಕುಗಳ ಸಂಘಟನೆಗಳಿವೆ ಅದರಲ್ಲಿ ನಮ್ಮ ದಕ್ಷಿಣ ಏಷ್ಯಾ ಮಾನವ ಹಕ್ಕುಗಳ ವೇದಿಕೆ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವಂತಹ ಜನಪರ ಸಂಘಟನೆಯಾಗಿದೆಂದು ವೇದಿಕೆಯ ರಾಷ್ಟ್ರೀಯ ಅಧ್ಯಕ್ಷ ಎಸ್ ಬಾಬು ಹೇಳಿದರು.

ಅವರು ಇಂದು ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ನಮ್ಮ ಸಂಘಟನೆ ಭಾರತ ಸರ್ಕಾರದ ಗ್ರಾಹಕರ ಸಚಿವಾಲಯದಲ್ಲಿ ನೊಂದಾಯಿಸಿಕೊಂಡಿರುವ 80 ಸಾವಿರ ಸದಸ್ಯರುಳ್ಳ ಬೃಹತ್ ಸಂಘಟನೆಯಾಗಿದೆ, ಸಂಘಟನೆಯ ಮೂಲ ಉದ್ದೇಶ ಸಮಾಜದ ಬಲಹೀನ ಮತ್ತು ಅನ್ಯಾಯಕ್ಕೊಳಗಾದ ವ್ಯಕ್ತಿಗಳಿಗೆ ನ್ಯಾಯ ಕೊಡಿಸುವುದಾಗಿದೆಂದರು.

ಸದಸ್ಯರು ವೇದಿಕೆಯ ಹೆಸರನ್ನು ದುರ್ಬಳಕೆ ಮಾಡಿಕೊಂಡಲ್ಲಿ ದೂರು ನೀಡಿದಲ್ಲಿ ಅವರನ್ನು ತಕ್ಷಣ ಸಂಘಟನೆಯಿಂದ ವಜಗೊಳಿಸಲಾಗುವುದು ಎಂದರು. ಪತ್ರಿಕಾಗೋಷ್ಠಿಯಲ್ಲಿ ಅಮೀನಾ ಸುಜಾತ ಪದ್ಮಾವತಿ ಹುಲಿಗೆಮ್ಮ ನವೀನ್ ಮೊದಲಾದವರು ಇದ್ದರು.

# ಮಹಿಳಾ ಸಪ್ತಾಹ: 2 ದಿನದ ಉಪನ್ಯಾಸ




• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಮಹಿಳಾ ಸಪ್ತಾಹ 2026 ಎರಡನೇ ದಿನದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ನಗರದ ಸ್ತ್ರೀರೋಗ ತಜ್ಞರು ಆದ ಡಾ ಮೋನಿಕಾ ಇವರು ಪ್ರಜನನ ಆರೋಗ್ಯ ಮತ್ತು ಹಕ್ಕು ಎಂಬ ವಿಷಯದ ಕುರಿತು ಮಾತನಾಡಿ ಹೆಣ್ಣುಮಕ್ಕಳ ಆರೋಗ್ಯ ಜಾಗೃತಿ ಬಗ್ಗೆ ಹೇಳುತ್ತಾ ಕಿಶೋರಾವಸ್ಥೆಯಲ್ಲಿ ಆಗುವ ಹಾರ್ಮೋನ್ ಬದಲಾವಣೆಗಳು, ಮೆನು ಪಾಸ್ ಸಮಸ್ಯೆಗಳು, ಋತುಚಕ್ರ ಸಮಯದಲ್ಲಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವುದರ ಬಗ್ಗೆ ತಿಳಿಸುತ್ತಾ ಮೆನ್ಸಿಯಲ್ ಕಪ್ ಬಳಸುವ ಬಗ್ಗೆ ತಿಳಿಸಿದರು. ಸರ್ವಯ್ಕಲ್ ಕ್ಯಾನ್ಸರ್ ಬಗ್ಗೆ ತಿಳಿಸುತ್ತಾ, ಎಂ ಎಂ ಆರ್ ಹಾಗೂ ಎಚ್ ಪಿ ವಿ ಲಸಿಕೆ ಬಗ್ಗೆ ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಡಾ. ಪ್ರಜ್ಞಾ ಕೆ ವಿ ಅವರು ಮಾತನಾಡಿ ಮಹಿಳೆ ಆರೋಗ್ಯವಾಗಿದ್ದರೆ ಕುಟುಂಬ ಹಾಗೂ ದೇಶ ಆರೋಗ್ಯವಾಗಿರುತ್ತದೆ. ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿಯರು, ಬೋಧಕ ಹಾಗೂ ಬೋಧಕೇ ತರ ಸಿಬ್ಬಂದಿಯವರು ಭಾಗವಹಿಸಿದ್ದರು. ಕಾರ್ಯಕ್ರಮದ ನಂತರ ವಿದ್ಯಾರ್ಥಿನಿಯರಿಂದ ಬೆಂಕಿರಹಿತ ಅಡುಗೆ ಮಾಡುವ ಕಾರ್ಯಕ್ರಮ ನೆರವೇರಿತು.

# ಭಾರತದ ಗೆಲುವಿಗೆ ಶಾಲಾ ಮಕ್ಕಳ ಪ್ರಾರ್ಥನೆ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಮ್ಮ ಹೆಮ್ಮೆಯ ಭಾರತದ ಕ್ರಿಕೆಟ್ ತಂಡ ಮತ್ತೊಮ್ಮೆ ಟಿ 20 ವಿಶ್ವಕಪ್ ಗೆಲ್ಲಲಿ ಎಂದು ನಗರದ ವಾಸವಿ ಶಾಲೆಯ ಮಕ್ಕಳು ಪ್ರಾರ್ಥನೆ ಮಾಡಿದ್ದಾರೆ.

ಕ್ರಿಕೆಟ್ ಬ್ಯಾಟ್, ಬಾಲ್, ವಿಕೆಟ್ ಜೊತೆಗೆ ವಾಸವಿ ಮಾತೆಯ ಪೂಜೆ ಸಲ್ಲಿಸಿ, ಭಾರತದ ಭಾವುಟ ಹಿಡಿದು ಆಟಗಾರರು ಪೋಟೋ ಹಿಡಿದು ಶುಭಾಶಯ ಕೋರಿದರು. ಭಾರತೀಯ ಆಟಗಾರನ್ನು ಹುರಿದುಂಬಿಸುವ ನಿಟ್ಟಿನಲ್ಲಿ ಜಯ ಘೋಷಣೆ ಹಾಕಿದರು.

ಯುವತಿಯೊಬ್ಬಳು ಭಾರತಮಾತೆಯ ವೇಷ ತೊಟ್ಟು ಭಾರತೀಯ ಕ್ರಿಕೆಟ್ ತಂಡಕ್ಕೆ ಶುಭಾಷಯ ಹೇಳಿದ್ದು ವಿಶೇಷವಾಗಿತ್ತು. ನೂರಾರು ವಿದ್ಯಾರ್ಥಿಗಳು ಲೇಜಿಂ ನೃತ್ಯದ ಮೂಲಕ ಗಮನ ಸೆಳೆದರು.

# ನೂತನ ನ್ಯಾಯಾಧೀಶ ಸಂತೋಷ್ ಬೆಳಗೋಡು: ಲಿಟಲ್ ಹಾರ್ಟ್ಸ್ ಸ್ಕೂಲ್ ನಿಂದ ಸನ್ಮಾನ



• ಮಲ್ಲಮ್ಮ ನುಡಿ ವಾರ್ತಾ ಗಂಗಾವತಿ

ನೂತನ ಸಿವಿಲ್ ನ್ಯಾಯಾಧೀಶರಾಗಿ ಆಯ್ಕೆಯಾದ ನಮ್ಮ ಲಿಟಲ್ ಹಾರ್ಟ್ಸ್ ಸ್ಕೂಲ್ ನ ಹಳೆಯ ವಿದ್ಯಾರ್ಥಿ ಕುಮಾರ ಸಂತೋಷ್ ಬೆಳಗೋಡು ಇವರಿಗೆ ಶಾಲೆಯ ಆಡಳಿತ ಮಂಡಳಿ, ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಅಭೂತಪೂರ್ವವಾಗಿ ಸ್ವಾಗತ ಮಾಡಿ ಅವರ ಸಾಧನೆಗೆ ಸನ್ಮಾನ ಮಾಡಿದರು

ಶಾಲೆಯ ಕಾರ್ಯದರ್ಶಿ ಶ್ರೀ ಜಗನ್ನಾಥ ಆಲಂಪಲ್ಲಿ ಮಾತನಾಡಿ 2003ರಲ್ಲಿ ನಮ್ಮ ಶಾಲೆ ಪ್ರಾರಂಭವಾದ ಕಿಂಡರ್ ಗಾರ್ಟ್ ನ್ ಗೆ ಸೇರಿ ಎಲ್ಲ ಶಿಕ್ಷಕಿಯರೊಂದಿಗೆ, ಸಹಪಾಠಿಗಳೊಂದಿಗೆ ಅತ್ಯುತ್ತಮವಾಗಿ ಬೆರೆಯುತ್ತಿದ್ದ ವಿದ್ಯಾರ್ಥಿಯಾಗಿದ್ದ ಸಂತೋಷ ಇವತ್ತು ಅತ್ಯಂತ ಉನ್ನತ ಸ್ಥಾನವನ್ನು ಪಡೆದಿದ್ದು ಲಿಟಲ್ ಹಾರ್ಟ್ಸ್ ನ ಹೆಮ್ಮೆ ಎಂದು ತಿಳಿಸಿದರು.

ಸನ್ಮಾನ ಸ್ವೀಕರಿಸಿದ ಸಂತೋಷ್ ಮಾತನಾಡಿ ಈ ದಿನ ತನ್ನ ಹಳೆಯ ನೆನಪುಗಳನ್ನೆಲ್ಲ ಮರುಕಳಿಸಿ ಶಾಲೆಯಲ್ಲಿ ಹಾಕಿದ ಭದ್ರ ಬುನಾದಿ ನನ್ನ ಈ ಸಾಧನೆಗೆ ಪೂರಕ ಎಂದು ತಿಳಿಸಿದರು. ಶಾಲೆಯಲ್ಲಿ ತನ್ನನ್ನು ಪ್ರೋತ್ಸಾಹಿಸಿ ಎಲ್ಲಾ ಚಟುವಟಿಕೆಗಳಲ್ಲಿ ಭಾಗವಹಿಸುವಂತೆ ಮಾಡಿದ ಶಾಲೆಯ ಎಲ್ಲಾ ಶಿಕ್ಷಕ ಶಿಕ್ಷಕಿಯರಿಗೆ ನಾನು ಚಿರಋಣಿ ಎಂದು ತಿಳಿಸಿದರು.

ಶಾಲೆಯ ಮುಖ್ಯೋಪಾಧ್ಯಾಯಿನಿ ಶ್ರೀಮತಿ ಪ್ರಿಯಾ ಕುಮಾರಿ ಮಾತನಾಡಿ ಸಂತೋಷಬೆಳಗೋಡ ಸಾಧನೆಯನ್ನು ಎಲ್ಲಾ ಮಕ್ಕಳು ಅನುಕರಿಸಿ ತಾವುಗಳೂ ಸಹ ಈ ರೀತಿಯ ಸಾಧನೆಯನ್ನು ಮಾಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಎಲ್ಲ ವಿದ್ಯಾರ್ಥಿಗಳು, ಶಿಕ್ಷಕ, ಶಿಕ್ಷಕಿಯರು ಹಾಗೂ ಆಯಾಗಳು ಉಪಸ್ಥಿತರಿದ್ದರು.

# ಯುಪಿಎಸ್‌ಸಿ ಪರೀಕ್ಷೆಯಲ್ಲಿ ಇಬ್ಬರು ಅಭ್ಯರ್ಥಿಗಳು ಪಾಸ್



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಈ ವರ್ಷ ನಡೆದ ಯುಪಿಎಸ್ ಸಿ ಪರೀಕ್ಷೆಯಲ್ಲಿ ನಗರದ ಇಬ್ಬರು ಅಭ್ಯರ್ಥಿಗಳು ಉತ್ತೀರ್ಣರಾಗಿದ್ದಾರೆ.ಒಬ್ಬರು ಇಲ್ಲಿನ ಹನುಮಾನ್ ನಗರದ ಬನ್ನಿಗಿಡದ ಬಳಿಯ ಕಾರ್ಪೆಂಟರ್ ಸಿ. ಶ್ರೀನಿವಾಸ್ ಮತ್ತು ಗೃಹಿಣಿ ಸಿ.ಅರುಣಾ ಅವರ ಪುತ್ರ ಸಿ.ಯಶವಂತಕುಮಾರ್ ಈ ಪರೀಕ್ಷೆಯಲ್ಲಿ ಮೂರನೇ ಪ್ರಯತ್ನಕ್ಕೆ 409 ನೇ ರ್ಯಾಂಕ್ ಪಡೆದಿದ್ದಾರೆ.ಈ ಯುವಕ ಎಸ್ ಎಸ್ ಎಲ್ ಸಿಯನ್ನು ನಗರದ ಬಿಪಿಎಸ್ ಸಿ ಶಾಲೆಯಲ್ಲಿ ಓದಿ ನಂತರ ಬಳ್ಳಾರಿ ಮೆಡಿಕಲ್ ಕಾಲೇಜಿನಲ್ಲಿ ಎಂ.ಬಿ.ಬಿಎಸ್ ನ್ನು 2020 ರಲ್ಲಿ ಮುಗಿಸಿ ನಂತರ ಯುಪಿಎಸ್ ಸಿ ಪರೀಕ್ಷೆಯ ಅಭ್ಯಾಸದಲ್ಲಿ ತೊಡಗಿಕೊಂಡಿದ್ದರು. ಮೂರನೇ ಬಾರಿಗೆ 409 ನೇ ರ್ಯಾಂಕ್ ಪಡೆದಿದ್ದು ಐಪಿಎಸ್ ಹುದ್ದೆ ಪಡೆಯುವುದು ಬಹುತೇಖ ಖಚಿತ.ಮತ್ತೊಬ್ಬ ಯುವಕ ಅನಿವೃದ್ದ ಕಟ್ಟಿಮನಿ ಅವರು 786 ರ್ಯಾಂಕ್ ಪಡೆದಿದ್ದಾರೆ. ಈ ಯುವಕ ಈಗಾಗಲೇ ಐಎಫ್ ಎಸ್ (ಫಾರೆಸ್ಟ್) ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಈಗಾಗಲೇ ಡೆಹರ ಡೂನ್ ನಲ್ಲಿ ತರಬೇತಿ ಪಡೆ–ಯುತ್ತಿದ್ದಾರೆ.ಜೊತೆಗೆ ಯುಪಿಎಸ್ ಸಿ ಪರೀಕ್ಷೆ ಬರೆದು 786 ರ್ಯಾಂಕ್ ಪಡೆದಿದ್ದಾರೆ. ಇವರ ತಂದೆ ಪುರುಷೋತ್ತಮ ಅವರು ಬಳ್ಳಾರಿ ಜೆಸ್ಕಾಂ ಕಚೇರಿಯಲ್ಲಿ ಇಂಜಿನೀಯರ್ ಆಗಿದ್ದಾರೆ, ತಾಯಿ ನಾಗಮಣಿ ಅವರು ನಿವೃತ್ತ ಬ್ಯಾಂಕ್ ಉದ್ಯೋಗಿ ಆಗಿದ್ದಾರೆ. ಈ ಯುವಕ ಎಸ್ ಎಸ್ ಎಲ್ ಸಿ ವರೆಗೆ ನಗರದ ಕೇಂದ್ರೀಯ ವಿದ್ಯಾಲಯದಲ್ಲಿ ಪಿಯುಸಿಯನ್ನು ಬೆಂಗಳೂರು ನಾರಾಯಣದಲ್ಲಿ, ಪದವಿಯನ್ನು ಐಐಟಿ ಚೆನ್ನೈ ನಲ್ಲಿ ಅಭ್ಯಾಸ ಮಾಡಿದ್ದನು. ಈತನೂ ಐಪಿಎಸ್ ಹುದ್ದೆ ಪಡೆಯುವ ಸಾಧ್ಯತೆ ಇದೆ.

# ಶಾಲಾಭಿವೃದ್ಧಿ ಮೇಲುಸ್ತುವಾರಿ ಸಮನ್ವಯ ವೇದಿಕೆ ಪದಾಧಿಕಾರಿಗಳ ಆಯ್ಕೆ



ಯಲಬುರ್ಗಾ : ಕರ್ನಾಟಕ ರಾಜ್ಯ ಶಾಲಾಭಿವೃದ್ಧಿ ಮೇಲುಸ್ತುವಾರಿ ಸಮಿತಿಯ ಸಮನ್ವಯ ವೇದಿಕೆ ಅಧ್ಯಕ್ಷರಾಗಿ ಕರಮುಡಿಯ ಗೌಡಪ್ಪ ಬಲಕುಂದಿ, ಉಪಾಧ್ಯಕ್ಷ ಭೀಮಣ್ಣ ಕೊಳಜಿ, ಸಹಕಾರ್ಯದರ್ಶಿ ದೊಡ್ಡಬಸಪ್ಪ ಹೂಗಾರ, ಶಂಕರ ಮೂಲಿ ಸೇರಿದಂತೆ ಇತರರನ್ನು ಸದಸ್ಯರನ್ನಾಗಿ ಆಯ್ಕೆ ಮಾಡಲಾಗಿತು. ಈ ವೇಳೆ ಜಿಲ್ಲಾ ಅಧ್ಯಕ್ಷ ದೇವರಾಜ ಕಿನ್ನಾಳ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಶ್ರೀಮತಿ ಕವಿತಾ ಕಾಸಲ್ ,

ಕೊಪ್ಪಳ ತಾಲೂಕಾ ಅಧ್ಯಕ್ಷರಾದ ಸಂಜಯ ದಾಸರ ಹಾಗು ಸದಸ್ಯರ ಸಮ್ಮುಖದಲ್ಲಿ ಅಧಿಕೃತವಾಗಿ ಆಯ್ಕೆ ಮಾಡಲಾಗಿತು. ಆಯ್ಕೆಗೆ ಶ್ರಮಿಸಿದ ಕರಮುಡಿ ಶಾಲೆಯ ಎಸ್ ಡಿ ಎಂ ಸಿ ನಿಕಟ ಪೂರ್ವ ಸದಸ್ಯರು, ಹಾಲಿ ಅಧ್ಯಕ್ಷ ಉಪಾಧ್ಯಕ್ಷರು ಸದಸ್ಯರಿಗೆ, ಗ್ರಾಮದ ಎಲ್ಲಾ ಗುರು ಹಿರಿಯರಿಗೆ ಯುವಕ ಮಿತ್ರರಿಗೆ ವಂದನೆ ಸಲ್ಲಿಸಿದರು.

# ಸಿಎಂ ನಿರ್ಧಾರಕ್ಕೆ ನಮ್ಮ ಕರ್ನಾಟಕ ಸೇನೆ ಸ್ವಾಗತ



• ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ

16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣ (ಮೊಬೈಲ್) ಬಳಕೆಯನ್ನು ನಿಷೇಧಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಘೋಷಣೆಯನ್ನು 'ನಮ್ಮ ಕರ್ನಾಟಕ ಸೇನೆ' ಕೆಂಭಾವಿ ಹೋಬಳಿ ಘಟಕದ ಅಧ್ಯಕ್ಷರಾದ ಶ್ರೀ ಶರಣು ಎಸ್. ದೇವರಮನಿ ಸ್ವಾಗತಿಸಿದ್ದಾರೆ. ಮಕ್ಕಳು ಮೊಬೈಲ್ ಹಾಗೂ ಸೋಶಿಯಲ್ ಮೀಡಿಯಾಗಳಲ್ಲಿ ಕಾಲಹರಣ ಮಾಡಿ ಭವಿಷ್ಯ ಹಾಳುಮಾಡಿಕೊಳ್ಳುತ್ತಿರುವುದನ್ನು ತಡೆಯಲು ರಾಜ್ಯ ಸರ್ಕಾರ ಐತಿಹಾಸಿಕ ನಿರ್ಧಾರ ಕೈಗೊಂಡಿದೆ. ರೈತರು,

ಕಾರ್ಮಿಕರು ಸೇರಿದಂತೆ ಸಕಲ ವರ್ಗದ ಮಕ್ಕಳ ಹಿತದೃಷ್ಟಿಯಿಂದ ಈ ಕ್ರಮ ಶ್ಲಾಘನೀಯ," ಎಂದು ಅವರು ಹರ್ಷ ವ್ಯಕ್ತಪಡಿಸಿದ್ದಾರೆ.

# ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಯ 33/11 ಕೆವಿ ಕಲ್ಮಲಾ ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಮಾರ್ಚ್ 09ರ ಬೆಳಿಗ್ಗೆ 10ಗಂಟೆಗೆ ಯಿಂದ ಸಂಜೆ 5ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಲದ ರಾಮಯ್ಯರಿಂದ ನಿರಾಶದಾಯಕ ಬಜೆಟ್: ಕೋನನಗೌಡ್ರ


• ಮಲ್ಲಮ್ಮನುಡಿ ವಾರ್ತೆ ಕುಕನೂರ



ಈ ಬಾರಿಯ ಬಜೆಟ್ ಮಂಡನೆ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಕುಕನೂರು ಹಾಗೂ ಯಲಬುರ್ಗಾ ತಾಲೂಕಿನ ನೀರಾವರಿ ಕನಸನ್ನು ಮಾಡಿದ್ದು ಈ ಬಜೆಟ್ ನಿರಾಶದಾಯಕವಾಗಿದೆ ಎಂದು ಜಾತ್ಯಾತೀತ ಜನತಾದಳದ ಪ್ರಮುಖ ಮಲ್ಲನಗೌಡ ಕೋನನಗೌಡ್ರು ಹೇಳಿದರು

ಪಟ್ಟಣದಲ್ಲಿ ವರದಿಗಾರರೊಂದಿಗೆ ಮಾತನಾಡುತ್ತಾ ಕ್ಷೇತ್ರದ ರೈತರಿಗೆ ನೀರಾವರಿಯ ಕನಸು ನುಚ್ಚುನೂರು ಮಾಡಿದ ಬಜೆಟ್. ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಯರೇ ಭಾಗದ ರೈತರಿಗೆ ಜಿಂಕೆ ಹಾವಳಿಯಿಂದ ಮುಕ್ತಿ ನೀಡಲು ಜಿಂಕೆವನ ಸ್ಥಾಪನೆ ಹಾಗೂ ಜಿಂಕೆ ಹಾವಳಿಯಿಂದ ಬಾದಿತ ಪ್ರದೇಶದ ರೈತರಿಗೆ ಸೂಕ್ತ ಪರಿಹಾರ ನೀಡುವಲ್ಲಿ ಸಂಪೂರ್ಣ ವಿಫಲದ ಬಜೆಟ್ ಇದಾಗಿದ್ದು, ಯುವಕರಿಗೆ ಉದ್ಯೋಗ ನೀಡುವ ಯೋಜನೆಗಳನ್ನು ತರುವ ಮನಸ್ಸು ಕ್ಷೇತ್ರದ ಶಾಸಕರಿಗಿಲ್ಲ. ಕೆರೆ ತುಂಬಿಸುವ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ಹಾಗೂ ಬೇವೂರು ಗ್ರಾಮಕ್ಕೆ ವಸತಿ ಸಹಿತ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮಂಜೂರು ಮಾಡಿದ್ದು ಬಿಟ್ಟರೆ ಅಂತಹ ಹೇಳಿಕೊಳ್ಳುವ ಯೋಜನೆಗಳನ್ನು ಬಜೆಟ್ನಲ್ಲಿ ಸೇರಿಸುವಲ್ಲಿ ಶಾಸಕರು ಸಂಪೂರ್ಣ ವಿಫಲರಾಗಿದ್ದಾರೆ ಎಂದು ತಿಳಿಸಿದರು.

# ಕಲಿತ ವಿದ್ಯೆ ಬಾಳಿಗೆ ಬೆಳಕಾಗಬೇಕು: ಬೂದಿಹಾಳ



• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಶಿಕ್ಷಣ ಪ್ರತಿಯೊಬ್ಬ ವ್ಯಕ್ತಿಯ ಜೀವನಕ್ಕೆ ಅಗತ್ಯವಾಗಿದ್ದು, ವಿದ್ಯಾರ್ಥಿಗಳು ಶ್ರಮವಹಿಸಿ ಓದಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಹಳ್ಳೂರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎಂ.ಎಸ್.ಬೂದಿಹಾಳ ಹೇಳಿದರು.

ತಾಲೂಕಿನ ಬೆನಕಟ್ಟಿಯ ಹೇಮರಡ್ಡಿ ಮಲ್ಲಮಾಂಬೆ ಪ್ರೌಢಶಾಲೆಯಲ್ಲಿ ಶುಕ್ರವಾರ

ಜರುಗಿದ ಪ್ರತಿಭಾ ಪುರಸ್ಕಾರ ಹಾಗೂ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭದ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಕಲಿತ ವಿದ್ಯೆ ಬಾಳು ಬೆಳಗುವಂತಿರಬೇಕು ಎಂದರು.

ಇನ್ನೋರ್ವ ಮುಖ್ಯ ಅತಿಥಿ ನಿವೃತ್ತ ಶಿಕ್ಷಕ ಶಂಕರಗೌಡ ಎಚ್. ಯಡಹಳ್ಳಿ ಮಾತನಾಡಿ, ಮಕ್ಕಳು ಶಿಕ್ಷಣದ ಜೊತೆ ಸಂಸ್ಕಾರದ ಗುಣಗಳು ಹಾಗೂ ಕೌಶಲ್ಯಗಳನ್ನು ಕಲಿತುಕೊಳ್ಳಬೇಕು. ಒಳ್ಳೆಯ ಶಿಕ್ಷಣ ಪಡೆದು ಕಲಿತ ಶಾಲೆ, ಹೆತ್ತವರು ಹಾಗೂ ಕಲಿಸಿದ ಗುರುಗಳಿಗೆ ಕೀರ್ತಿ ತರಬೇಕು ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ತಾಲ್ಲೂಕು ಘಟಕದ ಅಧ್ಯಕ್ಷ ಪಾಂಡುರಂಗ ಸನ್ನಪ್ಪನವರ ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದೊಂದಿಗೆ ಹೃದಯವೈಶಾಲ್ಯತೆ, ಮಾನವೀಯ ಗುಣಗಳನ್ನು ರೂಢಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಶಿಕ್ಷಕ ಕೆ.ಪಿ.ಅರಿಷಿಣಗೋಡಿ, ವಿದ್ಯಾರ್ಥಿ ಜೀನವದಲ್ಲಿ ಶಿಸ್ತು ಮತ್ತು ಸಮಯ ಪಾಲನೆಗೆ ಮಹತ್ವ ನೀಡಬೇಕು ಎಂದರು. ಮುಖ್ಯಗುರು ಎಚ್.ಬಿ.ಗೋಣಿ ಮಾತನಾಡಿದರು.

ರಂಗಣ್ಣ ಕಟಗೇರಿ, ಟಿ.ಎಚ್.ಸನ್ನಪ್ಪನವರ, ಸಿ.ಎನ್.ಬಾಳಕ್ಕನವರ, ಸಂಸ್ಥೆಯ ಕಾರ್ಯದರ್ಶಿ ಹನಮಂತ ಮಾದರ, ಜಿ.ಜಿ.ಚಿತ್ತರಗಿ, ನೀಲಪ್ಪ ಬಾಳಕ್ಕನವರ ವೇದಿಕೆಯಲ್ಲಿದ್ದರು.

ಕಾರ್ಯಕ್ರಮದಲ್ಲಿ ಕಳೆದ ಸಾಲಿನಲ್ಲಿ ಹೆಚ್ಚು ಅಂಕ ಗಳಿಸಿದ ಮತ್ತು ವಿವಿಧ ಚಟುವಟಿಕೆಗಳಲ್ಲಿ ಸಾಧನೆ ತೋರಿದ ವಿದ್ಯಾರ್ಥಿಗಳಿಗೆ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ವಿತರಿಸಲಾಯಿತು.

ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಮುಖ್ಯೋಪಾಧ್ಯಾಯ ಎಂ.ಎ.ಮುನವಳ್ಳಿ ಸ್ವಾಗತಿಸಿದರು. ವಂದನಾ ಪಾಟೀಲ ನಿರೂಪಿಸಿದರು. ಕೆ.ಎಚ್.ನಿಂಬಲಗುಂದಿ ವಂದಿಸಿದರು. ನಂತರ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

# ಸಲಹೆಗಾರರ ನೇಮಕಕ್ಕೆ ಅರ್ಜಿ ಆಹ್ವಾನ

ರಾಯಚೂರು: ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಭೂ ಸ್ವಾಧೀನ ಪ್ರಕರಣಗಳಿಗೆ ಸಂಬಂಧಿಸಿದ ವ್ಯಾಜ್ಯಗಳಲ್ಲಿ ಜಿಲ್ಲಾಧಿಕಾರಿಗಳಿಗೆ ಕಾನೂನಿನ ಸಲಹೆ ನೀಡಲು ಕಾನೂನು ಸಲಹೆಗಾರರನ್ನು ನೇಮಿಸಲು ಅರ್ಜಿ ಆಹ್ವಾನಿಸಲಾಗಿದೆ. ಸರ್ಕಾರದ ಆದೇಶಗಳನ್ವಯ ಈ ಹಿಂದೆ ನೇಮಿಸಲಾದ ಕಾನೂನು ಸಲಹೆಗಾರರು ಹುದ್ದೆಗೆ ರಾಜೀನಾಮೆಯನ್ನು ನೀಡಿರುವುದರಿಂದ ಈ ಕಾರ್ಯಾಲಯದಿಂದ ಅಧಿಸೂಚನೆ ಹೊರಡಿಸಿ ಶ್ರೀ ಮಲ್ಲಿಕಾರ್ಜುನಗೌಡ, ನಿವೃತ್ತ ಜಿಲ್ಲಾ ಸಿವಿಲ್ ಮತ್ತು ಸತ್ರ ನ್ಯಾಯಾಧೀಶರು ಇವರನ್ನು ನೇಮಿಸಿ ಆದೇಶಿಸಲಾಗಿತ್ತು, ಆದರೆ ಸದರಿಯವರು ಕರ್ತವ್ಯಕ್ಕೆ ಹಾಜರಾಗಿರುವುದಿಲ್ಲ. ಕಾರಣ ಈ ಕಾರ್ಯಾಲಯದ ಕಾನೂನು ಸಲಹೆಗಾರರ ಹುದ್ದೆಯು ಖಾಲಿ ಇರುತ್ತದೆ.

ಜಿಲ್ಲಾಧಿಕಾರಿಗಳ ಕಚೇರಿಗಳಲ್ಲಿ ಕಂದಾಯ ಇಲಾಖೆಗೆ ಸಂಬಂಧಿಸಿದ ಭೂಕಂದಾಯ/ಭೂಮಂಜೂರಾತಿ ನಿಯಮ/ ಭೂಸುಧಾರಣಾ/ ಭೂಸ್ವಾಧೀನ ಕಾಯ್ದೆ/ ನಿಯಮ ಇನ್ನಿತರ ಕಾಯ್ದೆ/ ನಿಯಮಗಳಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ಹಾಗೂ ಯಾವುದೇ ನ್ಯಾಯಾಲಯ ವ್ಯಾಜ್ಯಗಳ ಬಗ್ಗೆ ಕಾನೂನು ಸಲಹೆ ನೀಡಲು ಸೃಜಿಸಲಾಗಿರುವ ಕಾನೂನು ಸಲಹೆಗಾರರ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ನ್ಯಾಯಾಧೀಶರು/ ನಿವೃತ್ತ ಕಂದಾಯ ಇಲಾಖೆಯ ಅಧಿಕಾರಿ (ನಿವೃತ್ತ ವಿಶೇಷ ಜಿಲ್ಲಾಧಿಕಾರಿ) ಗಳಿಗೆ ಕರ್ತವ್ಯಗಳು, ಜವಾಬ್ದಾರಿಗಳನ್ನು ಮತ್ತು ಮೇಲಾಧಿಕಾರಿಗಳ ಸೂಚನೆಗಳು ಕಡ್ಡಾಯವಾಗಿ

ಪಾಲಿಸುವ ಷರತ್ತಿಗೊಳಪಟ್ಟು ಕಾನೂನು ಸಲಹೆಗಾರರಿಗೆ ಒಂದು ನಿರ್ದಿಷ್ಟ ಏಕರೂಪದ ಸಂಚಿತ ವೇತನವನ್ನು ನಿಗಧಿಪಡಿಸಿ ಅಂತಹ ವೇತನದ ಮೇರೆಗೆ ಕಾನೂನು ಸಲಹೆಗಾರರಾಗಿ ಕಾರ್ಯನಿರ್ವಹಿಸಲು ಅಸಕ್ತಿಯುಳ್ಳ ನಿವೃತ್ತ ಸರ್ಕಾರಿ/ನ್ಯಾಯಾಂಗ ಇಲಾಖೆಯ ಅಧಿಕಾರಿಗಳನ್ನು ನಿವೃತ್ತ ನ್ಯಾಯಾಧೀಶರು/ನಿವೃತ್ತ ಕಂದಾಯ ಇಲಾಖೆಯ ಅಧಿಕಾರಿ (ನಿವೃತ್ತ ವಿಶೇಷ ಜಿಲ್ಲಾಧಿಕಾರಿ) ಇವರಿಗೆ 70,000 ರೂ. ಹಾಗೂ ನಿವೃತ್ತ ಕಂದಾಯ ಇಲಾಖೆ ನೌಕರರು (ನಿವೃತ್ತ ತಹಶೀಲ್ದಾರ್ /ಉಪ ತಹಶೀಲ್ದಾರ್) ಇವರಿಗೆ 40,000 ರೂ. ಸಂಚಿತ ವೇತನವನ್ನು ಹಾಗೂ ನಿಗದಿಪಡಿಸಿ ಹೊರ ಗುತ್ತಿಗೆ ಆಧಾರದ ಮೇಲೆ ಈ ಕೆಳಕಂಡ ಷರತ್ತುಗಳನ್ವಯ ನೇಮಿಸಿಕೊಳ್ಳಲು ಉದ್ದೇಶಿಸಲಾಗಿದೆ.

ಅರ್ಹ ಮತ್ತು ಇಚ್ಛೆಯುಳ್ಳ ನಿವೃತ್ತ ಜಿಲ್ಲಾ ನ್ಯಾಯಧೀಶರು ಅಥವಾ ನಿವೃತ್ತ ಹಿರಿಯ ಸಿವಿಲ್ ನ್ಯಾಯಾಧೀಶರು, ನಿವೃತ್ತ ಕಂದಾಯ ಇಲಾಖೆಯ ಅಧಿಕಾರಿ (ನಿವೃತ್ತ ವಿಶೇಷ ಜಿಲ್ಲಾಧಿಕಾರಿ) ನಿವೃತ್ತ ಕಂದಾಯ ಇಲಾಖೆ (ನಿವೃತ್ತ ತಹಶೀಲ್ದಾರ್ /ಉಪ ತಹಶೀಲ್ದಾರ್) ರಿಂದ ಅರ್ಜಿಯನ್ನು ಈ ಅಧಿಸೂಚನೆ ಮೂಲಕ ಆಹ್ವಾನಿಸಲಾಗಿದೆ.

ಈ ನೇಮಕಾತಿಯು ನೇಮಕಾತಿ ಆದೇಶದ ದಿನಾಂಕದಿಂದ ಒಂದು ವರ್ಷದ ಅವಧಿಯವರೆಗೆ ಊರ್ಜಿತವಾಗಿರುತ್ತದೆ. ಇಚ್ಛೆಯುಳ್ಳ ನಿವೃತ್ತ ಜಿಲ್ಲಾ ನ್ಯಾಯಧೀಶರು ಅಥವಾ ನಿವೃತ್ತ ಹಿರಿಯ ಸಿವಿಲ್ ನ್ಯಾಯಾಧೀಶರು, ನಿವೃತ್ತ ಕಂದಾಯ ಇಲಾಖೆಯ ಅಧಿಕಾರಿ (ನಿವೃತ್ತ ವಿಶೇಷ ಜಿಲ್ಲಾಧಿಕಾರಿ) ನಿವೃತ್ತ ಕಂದಾಯ ಇಲಾಖೆ (ನಿವೃತ್ತ ತಹಶೀಲ್ದಾರ್ /ಉಪ ತಹಶೀಲ್ದಾರ್) ಅರ್ಜಿಯನ್ನು ಮಾರ್ಚ್ 20ರೊಳಗಾಗಿ ಕಚೇರಿಯ ಸಮಯದೊಳಗಾಗಿ ರಾಯಚೂರು ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸಬಹುದಾಗಿದೆ. ಅವಧಿ ಮೀರಿದ ಅರ್ಜಿಗಳನ್ನು ಪುರಸ್ಕರಿಸಲಾಗವುದಿಲ್ಲವೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಮ್ಮದ ಗವಾನ ಕುರಿತು ವಿಶೇಷ ಉಪನ್ಯಾಸ




• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಸ್ಥಳೀಯ ಕೆಬಿಎನನಲ್ಲಿ ಕನ್ನಡ ಮತ್ತು ಇತಿಹಾಸ ವಿಭಾಗಗಳು ಜಂಟಿಯಾಗಿ ಮಹಮ್ಮದ ಗವಾನರ ಸಂಸ್ಕೃತಿಕ ಮತ್ತು ಸಾಹಿತ್ಯಕ ಕೊಡುಗೆಗಳನ್ನು ಕುರಿತು ಗುರುವಾರ ವಿಶೇಷ ಉಪನ್ಯಾಸವನ್ನು ಏರ್ಪಡಿಸಲಾಗಿತ್ತು.

ಈ ಉಪನ್ಯಾಸದಲ್ಲಿ ಮುಖ್ಯ ಭಾಷಣಕಾರರಾಗಿ ಕರ್ನಾಟಕದ ಕೇಂದ್ರೀಯ ವಿಶ್ವ ವಿದ್ಯಾಲಯದ ಸಹಾಯಕ ಕುಲಸಚಿವ ರಾಜ ಅಜೀಮ ಪಾಷಾ ಇವರು ಮಾತನಾಡುತ್ತ ಕೆಬಿಎನನ ಆಡಳಿತ ಮುಹಮದ ಗವಾನನ ಆಡಳಿತಕ್ಕೆ ಒಂದು ಉದಾಹರಣೆ ಎಂದರು.

ಮುಹಮ್ಮದ ಗವಾನ ಸತ್ಯ, ನ್ಯಾಯ, ಪ್ರಾಮಾಣಿಕತೆಗೆ ಇನ್ನೊಂದು ಹೆಸರು. ಅವರು ಮನುಷ್ಯತ್ವಕ್ಕೆ ಒಂದು ಸಾಕ್ಷಿ. ಅವರದು ಅಗಾಧ ಪಾಂಡಿತ್ಯ. ಮುಹಮ್ಮದ ಗವಾನ ಸ್ಥಳೀಯರಿಂದ ಅಪಾಯ ವೂರುವುದನ್ನು ಕಂಡು ಸಾಮ್ರಾಜ್ಯವನ್ನು ಸೆಂಟರಲೈಸ ಮಾಡಿದರು.

ಉಸ್ಮಾನ್ ಅಲಿ ಅವರ ಮರಣದ ನಂತರ ಅವರ ಮರಣದ ಸತ್ಯವನ್ನು ಬಹಿರಂಗಗೊಳಿಸಿದರು. ಇದು ಅವರ ಸಮಾಧಿ ಮೇಲೆ ಉಲ್ಲೇಖ ಮಾಡಲಾಗಿದೆ. ಬೀದರ ಗೆ ಹೋದಾಗ ಅವರ ಸಮಾಧಿ ನೋಡಿ ಬನ್ನಿ. ಮಹಮ್ಮದ ಗವಾನರ ಜೀವನ ಚರಿತ್ರೆಯ ಬಗ್ಗೆ ಎಲ್ಲರಿಗೂ ಗೊತ್ತು ಇರಬೇಕು. ಇಂತಹ ಉಪನ್ಯಾಸಗಳು ನಡೆಯುತ್ತಿರಬೇಕು, ಇಂದಿನ ವಿದ್ಯಾರ್ಥಿಗಳು ಅವರ ಜೀವನದಿಂದ ಸ್ಫೂರ್ತಿ ಪಡೆಯ್ಬೇಕು. ಗವಾನರ ಬಗ್ಗೆ ಓದಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು

ಇನ್ನೋರ್ವ ಅತಿಥಿ ಬೋಡೆ ರಿಯಾಜ ಅಹ್ಮದ ಇವರು ಮಾತನಾಡುತ್ತ ನನ್ನ ಸಾಹಿತ್ಯ ಜೀವನದ ಅಧ್ಯಯನದ ಆರಂಭವಾಗಿದ್ದು ಖಾಜಾ ಬಂದಾ ನವಾಜರ ಅಧ್ಯಯನದಿಂದ. ಆದ್ದರಿಂದ ಕೆಬಿಎನ ವಿವಿ ಬರಲು ನನಗೆ ತುಂಬಾ ಸಂತೋಷ. ಅವರು ಬಹುಮಾನಿ ಸಾಮ್ರಾಜ್ಯದ ಆರಂಭದ ಬಗ್ಗೆ ಸವಿಸ್ತಾರವಾಗಿ ಹೇಳಿದರು. ಹೇಗೆ ಬಹ್ಮನಿ ಸಾಮ್ರಾಜ್ಯದ ಕ್ಯಾಪಿಟಲ್ ಗುಲ್ಬರ್ಗಾ ಮಾಡಲಾಯಿತು. ಮಹಮುದ ಗವಾನ ಬಡವರಿಗೆ ದುಡ್ಡು ಹಂಚುತ್ತಿದ್ದರು. ಅವರು ಪಾರ್ಸಿಯಲ್ಲಿ 2 ಪುಸ್ತಕಗಳನ್ನು ಬರೆದಿದ್ದಾರೆ. ಕೃಷಿಯಲ್ಲೂ ಕೂಡ ಅನೇಕ ಹೊಸ ಪ್ರಯೋಗಗಗಳನ್ನು ಮಾಡಿದ್ದಾರೆ. ಮಾಹುಮ್ಮದ ಗವಾನರ ಸಂಸ್ಕೃತಿಕ, ಸಾಹಿತ್ತಿಕ ಅನೇಕ ಮಹತ್ವ ಕೊಡುಗೆಗಳಿವೆ ಎಂದು ಹೇಳಿದರು. ಡಾ ನಿಶಾತ್ ಆರಿಫ್ ಹುಸೇನಿ ಅಧ್ಯಕ್ಷೀಯ ಸಮಾರೋಪದಲ್ಲಿ ಮಹಮ್ಮದ ಗವಾನ ಹೇಗೆ ಮೋಸದಿಂದ ಅವರನ್ನು ಕೊಲ್ಲಲಾಯಿತು ಎಂಬುದರ ಬಗ್ಗೆ ಹೇಳಿದರು. ನಿಸ್ವಾರ್ಥತೆ ಎಲ್ಲ ಸೂಫಿ ಸಂತರ ಪರಮ ಆದ್ಯತೆ. ಅವರು ಪರೋಪಕಾರವೆ ಧರ್ಮ ಎಂದು ಜೀವನ ಮಾಡಿದ್ದಾರೆ ಅನಂತವರಲ್ಲಿ ಖಾಜಾ ಬಂದಾಬಾವಾಜರ ಒಬ್ಬರು ಎಂದು ಬಂದಾನವಜರನ್ನು ನೆನೆದರು.

ಅಮರಾ ಬೇಗಮ ಕಿರಾತ ಪ್ರಸ್ತುತ ಪಡಿಸಿದರು. ನೌಷೀನ ಸಾನಿಯಾ ಸ್ವಾಗತಿಸಿದರೆ ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ ಸಂಗನಗೌಡ ಹಿರೇಗೌಡರ ಪ್ರಾಸ್ತಾವಿಕವಾಗಿ ಮಾತನಾಡಿದರು.

ರಿಜ್ವಾನ್ ಮತ್ತು ಜೈದ ಅತಿಥಿಗಳನ್ನು ಪರಿಚಯಿಸಿದರು. ಶಾಫಿಯಾ ಸಮರೀನ ನಿರೂಪಿಸಿದರು. ಆಯೇಷಾ ಅಂಜುಮ ವಂದಿಸಿದರು.

ಈ ಸಂದರ್ಭದಲ್ಲಿ ಕೆಬಿಎನ ವಿವಿಯ ಕಲಾ, ಮಾನವೀಕತೆ, ಭಾಷಾ ಮತ್ತು ಸಮಾಜ ವಿಜ್ಞಾನ ನಿಕಾಯದ ಎಲ್ಲ ಶಿಕ್ಷಕವರ್ಗ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಸೋಲು ಗೆಲುವು ಸಮಾನವಾಗಿ ಸ್ವೀಕರಿಸಿ: ಪೂಜ್ಯ ಗುರುಬಸವ ಪಟ್ಟದ್ದೇವರು



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ವಿಶ್ವಗುರು ಬಸವಣ್ಣನವರ ಜಯಂತಿ ಉತ್ಸವ ಹಾಗೂ ವಚನ ಜಾತ್ರೆ-2026 ಮತ್ತು ಡಾ.ಚನ್ನಬಸವ ಪಟ್ಟದ್ದೇವರ 27ನೆಯ ಸ್ಮರಣೋತ್ಸವ ಮತ್ತು ನಾಡೋಜ ಪೂಜ್ಯ ಶ್ರೀ ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ನಿಮಿತ್ಯ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ (ರಿ) ಅಡಿಯಲ್ಲಿ ನಡೆದ ವಿವಿಧ ಅಂತಿಮ ಸ್ಪರ್ಧೆಗಳ ಉದ್ಘಾಟನಾ ಸಮಾರಂಭದ ದಿವ್ಯಸಾನಿಧ್ಯವಹಿಸಿ, ವಿದ್ಯಾರ್ಥಿಗಳು, ಸೋಲು-ಗೆಲುವನ್ನು ಲೆಕ್ಕಿಸದೆ ಸ್ಪರ್ಧೆಗಳಲ್ಲಿ ತೊಡಗುವುದರ ಮೂಲಕ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು. ಮಕ್ಕಳಲ್ಲಿ ಅಘಾದವಾದ ಪ್ರತಿಭೆ ಅಡಗಿದೆ. ಆ ಪ್ರತಿಭೆಯನ್ನು ಪ್ರದರ್ಶಿಸಿಲು ಸೂಕ್ತ ವೇದಿಕೆಯ ಅಗತ್ಯವಿದೆ. ಡಾ.ಬಸವಲಿಂಗ ಪಟ್ಟದ್ದೇವರು ಅಮೃತ ಮಹೋತ್ಸವ ನಿಮಿತ್ಯ ವಿವಿಧ ಸ್ಪರ್ಧೆಗಳು ಏರ್ಪಡಿಸುವುದರ ಮೂಲಕ ವಿದ್ಯಾರ್ಥಿಗಳಿಗೆ ಒಂದು ಒಳ್ಳೆಯ ಅವಕಾಶ ಕಲ್ಪಿಸಿಕೊಡಲಾಗಿದೆ. ಪೂಜ್ಯರ ಶೈಕ್ಷಣಿಕ, ಸಾಮಾಜಿಕ, ಧಾರ್ಮಿಕ ಮಾನವೀಯ ಕಾರ್ಯಗಳು ಇಂದಿನ ಯುವಪೀಳಿಗೆ ತಿಳಿದುಕೊಳ್ಳುವುದರ ಮೂಲಕ ದೇಶದ ಸತ್‌ಪ್ರಜೆಗಳಾಗಿ ರೂಪಗೊಳ್ಳಬೇಕು.

ವಿದ್ಯಾರ್ಥಿಗಳು ಪಠ್ಯ ವಿಷಯಗಳ ಜೊತೆಗೆ ವಚನ ಸಾಹಿತ್ಯವನ್ನು ಅಧ್ಯಯನ ಮಾಡುವುದರ ಮೂಲಕ ಸಂಸ್ಕಾರಯುತ ಗುಣಗಳನ್ನು ಮೈಗೂಡಿಸಿಕೊಳ್ಳಬೇಕು. ಪರಮಪೂಜ್ಯರ ಜೀವನ ಸಂದೇಶವನ್ನು ತಮ್ಮ ಬದುಕಿನಲ್ಲಿ ಆದರ್ಶವಾಗಿಟ್ಟುಕೊಳ್ಳಬೇಕು ಎಂದು ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು ನುಡಿದರು. ಪೂಜ್ಯಶ್ರೀ ಪ್ರಭುಲಿಂಗ ಸ್ವಾಮಿಗಳು ಪೂಜ್ಯಶ್ರೀ ಶಿವಬಸವ ಸ್ವಾಮಿಗಳು ಸಮ್ಮುಖ ವಹಿಸಿದ್ದರು. ಕಾರ್ಯಕ್ರಮದ ಉದ್ಘಾಟನೆ ರಾಜಕುಮಾರ ಹೆಬ್ಬಾಳೆ ಅವರಿಂದ ನಡೆಯಿತು. ಶರಣ ಎಂ.ಬಂಡೆಪ್ಪ ಶರಣರು ಅಧ್ಯಕ್ಷತೆ ವಹಿಸಿದರು. ಮುಖ್ಯ ಅತಿಥಿಗಳಾಗಿ, ಶಂಭುಲಿಂಗ ಕಾಮಣ್ಣ, ಮಲ್ಲಮ್ಮ ಆರ್.ಪಾಟೀಲ, ಶುಭಾಂಗಿ ಚನ್ನಬಸವಣ್ಣ ಬಳತೆ, ಚಂದ್ರಕಾಂತ ಹೈಬತಪುರೆ, ವಿಲಾಸ ಬಕ್ಕಾ ಶಂಕರ ಪಾಟೀಲ ಡಾ.ಸಜ್ಜಲ ಬಳತೆ, ಶರಣೆ ಮಲ್ಲಮ್ಮ ನಾಗನಕೇರೆ, ಸುವರ್ಣಾ ಬಲ್ಲೂರೆ, ರುದ್ರಾಣಿ ವಿಲಾಸ ಬಕ್ಕಾ, ಸಂಗ್ರಾಮಪ್ಪ ಇಂಗಳೆ, ಗುಂಡಪ್ಪ ಸಂಗಮಕರ ಆಗಮಿಸಿದರು. ಬಸವಗುರುಪೂಜೆ ಶಿಖರೇಶ್ವರ ಶೆಟಕಾರ ಅವರು ಮಾಡಿದರು. ಪ್ರಾಸ್ತಾವಿಕವಾಗಿ ಬಸವರಾಜ ಪ್ರಭಾ ಮಾತನಾಡಿದರು. ಲಕ್ಷ್ಮಣ ಮೇತ್ರೆ ನಿರೂಪಿಸಿದರು. ವಚನ ಗಾಯನ ರಾಜು ಜುಬರೆ ಅವರಿಂದ ನಡೆಯಿತು.

# ದಾಖಲೆ ನಿರ್ಮಿಸಿಕೊಂಡಿದ್ದೆ ಸಾಧನೆ : ವೈದ್ಯ ಕ್ಯಾವಟರ್ ವ್ಯಂಗ್ಯ

ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, 17 ನೇ ಬಾರಿ ಬಜೆಟ್ ಮಂಡಿಸುವ ಮೂಲಕ ಹೊಸ ದಾಖಲೆ ಮಾಡಿಕೊಂಡಿದ್ದೆ ಸಾಧನೆ ವಿನಹ, ಜನ ಕಲ್ಯಾಣದಂತ ಯೋಜನೆಗಳನ್ನು ಸರಿಯಾಗಿ ಘೋಷಿಸಿಲ್ಲ ಎಂದು ಕೊಪ್ಪಳ ಲೋಕಸಭಾ ಕ್ಷೇತ್ರದ ನಿಕಟಪೂರ್ವ ಬಿಜೆಪಿ ಅಭ್ಯರ್ಥಿ ಬಸವರಾಜ ಕ್ಯಾವಟರ್ ಆರೋಪಿಸಿದ್ದಾರೆ.

ಈ ಬಾರಿಯ ಬಜೆಟ್ ಮಂಡನೆ ಕುರಿತು ಶುಕ್ರವಾರ ಪ್ರಕಟಣೆ ಬಿಡುಗಡೆ ಮಾಡಿರುವ ಅವರು, ಹಿರಿಯರಾದ ಸಿದ್ದರಾಮಯ್ಯನವರು ರಾಜ್ಯದ ಜನರಿಗೆ ಉತ್ತಮ ಕೊಡುಗೆ ನೀಡುತ್ತಾರೆ ಎಂಬ ನಿರೀಕ್ಷೆಗಳಿದ್ದವು. ಆದರೆ, ಇಂತಹ ಹಲವು ನಿರೀಕ್ಷೆಗಳು ಆಯವ್ಯದಲ್ಲಿ ಈಡೇರಿಲ್ಲ.

ಬದಲಾಗಿ ಜನಸಾಮಾನ್ಯರ ಮೇಲೆ ಸಾಲದ ಹೊರೆಯ ಪ್ರಮಾಣ ಹೆಚ್ಚಿಸಿದ್ದೆ ಸಿದ್ದರಾಮಯ್ಯನವರ ಬಜೆಟ್ ಸಾಧನಯಾಗಿದೆ.

ಅದರಲ್ಲಿಯೂ ಕೊಪ್ಪಳ ಜಿಲ್ಲೆಗೆ ಹೇಳಿಕೊಳ್ಳುವಂತ ಯೋಜನೆ ಘೋಷಿಸದಿರುವುದು ದುರಂತದ ಸಂಗತಿಯಾಗಿದೆ.

ಸಿಎಂ ಆರ್ಥಿಕ ಸಲಹೆಗಾರ, ಜಿಲ್ಲಾ ಉಸ್ತುವಾರಿ ಸಚಿವ, ಕೊಪ್ಪಳ ಶಾಸಕರು ಸಿಎಂ ಅವರಿಗೆ ಅತ್ಯಾಪ್ತರಾಗಿದ್ದರೂ ಜಿಲ್ಲೆಯನ್ನು ಕಡೆಗಣಿಸಿರುವುದು ದುರಂತದ ಸಂಗತಿಯಾಗಿದೆ. ಅಲ್ಲದೆ, ಈ ವರ್ಷದ ಬಜೆಟ್ ನಲ್ಲಿ ಕ್ಯಾನ್ಸರ್ ಆಸ್ಪತ್ರೆ ಘೋಷಿಸಿದ್ದು, ಶ್ಲಾಘನೀಯವಾದರೂ ಅನುಷ್ಠಾನ ತ್ವರಿತವಾಗಬೇಕು.

ಏಕೆಂದರೇ ಕಳೆದ ಸಾಲಿನಲ್ಲಿ ಘೋಷಿಸಿದ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆ ಇಂದಿಗೂ ಆರಂಭವೇ ಆಗಿಲ್ಲ. ಎರಡು ವರ್ಷದ ಹಿಂದೆ ಘೋಷಿಸಿದ ಜಾನಪದ ಲೋಕ ನಿರ್ಮಾಣ ಕಾರ್ಯ ಆರಂಭವಾಗಿಲ್ಲ. ಹೀಗಾಗಿ ಕೇವಲ ಬಜೆಟ್ ನಲ್ಲಿ ಯೋಜನೆ ಘೋಷಿಸಿ, ಕೈ ಬಿಡದೇ ಅವುಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡಬೇಕು. ಅಂದಾಗ ಬಜೆಟ್ ನಲ್ಲಿ ಯೋಜನೆ ಘೋಷಿಸಿದ್ದಕ್ಕೂ ಸಾರ್ಥಕತೆ ಬರಲಿದೆ. ಅದನ್ನು ಬಿಟ್ಟು ಜನರನ್ನು ಯಮಾರಿಸುವ ತಂತ್ರದ ಭಾಗವಾಗಿ ಯೋಜನೆ ಘೋಷಿಸಿ, ನಂತರ ಅವುಗಳಿಗೆ ಕಾಯಕಲ್ಪ ಕೊಡದೇ ಮರೆಯುವ ಸರಕಾರದ ನಿರ್ಧಾರ ಈ ರಾಜ್ಯದ ಜನರಿಗೆ ಮಾಡುವ ಮಹಾದೊಡ್ಡ ಮೋಸವಾಗಿದೆ ಎಂದು ಕ್ಯಾವಟರ್ ಅವರು ಆರೋಪಿಸಿದ್ದಾರೆ.

# ಕುಂಬಾರ ನಿಗಮ ಸ್ಥಾಪನೆಗೆ ಹರ್ಷ : ಬಾಬುರಾವ ಕುಂಬಾರ

• ಮಲ್ಲಮ್ಮ ನುಡಿ ವಾರ್ತೆ ಬೀದರ



ಪ್ರಸ್ತುತ ಕರ್ನಾಟಕ ರಾಜ್ಯ ಬಜೆಟ್‌ನಲ್ಲಿ ಕುಂಬಾರ ಸಮುದಾಯದ ಆರ್ಥಿಕ ಹಾಗೂ ಸಾಮಾಜಿಕ ಅಭಿವೃದ್ಧಿಗಾಗಿ ಕುಂಬಾರ ನಿಗಮ ಸ್ಥಾಪನೆ ಮಾಡುವ ಮಹತ್ವದ ನಿರ್ಧಾರವನ್ನು ಸರ್ಕಾರ ಘೋಷಿಸಿರುವುದನ್ನು ಕುಂಬಾರ ಸಮುದಾಯ ಸ್ವಾಗತಿಸಿದೆ.

ಈ ನಿರ್ಧಾರದಿಂದ ಕುಂಬಾರ ಸಮುದಾಯದ ಪರಂಪರೆ, ಕರಕುಶಲ ಕೈಗಾರಿಕೆಗಳಿಗೆ ಉತ್ತೇಜನ ದೊರೆಯಲಿದ್ದು, ಉದ್ಯೋಗಾವಕಾಶಗಳು ಹೆಚ್ಚಾಗಿ ಸಮುದಾಯದ ಆರ್ಥಿಕ ಸ್ಥಿತಿ ಬಲವಾಗಲಿದೆ ಈ ನಿರ್ಧಾರವು ಕುಂಬಾರ ಸಮುದಾಯದ ಅಭಿವೃದ್ಧಿಗೆ ಹೊಸ ದಿಕ್ಕು ನೀಡಲಿದೆ, ಎಂದು ಕುಂಬಾರ ಕರಕುಶಲ ಕೈಗಾರಿಕಾ ಸಹಕಾರ ಸಂಘದ ಅಧ್ಯಕ್ಷರಾದ ಬಾಬುರಾವ ಕುಂಬಾರ ಅವರು ತಿಳಿಸಿದ್ದಾರೆ.

ಈ ಯೋಜನೆಯನ್ನು ಬಜೆಟ್‌ನಲ್ಲಿ ಘೋಷಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಹಾಗೂ ಹಜ್ ಮತ್ತು ಪೌರಾಡಳಿತ ಸಚಿವ ರಹೀಂ ಖಾನ್, ಅವರಿಗೆ ಸಮುದಾಯದ ಪರವಾಗಿ ಕೃತಜ್ಞತೆ ಸಲ್ಲಿಸಿದ್ದಾರೆ.

# ಒಳ ಮೀಸಲಾತಿ ಜಾರಿಗಾಗಿ ಒತ್ತಾಯ



• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ಒಳ ಮೀಸಲಾತಿಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು ಎಂದು ಒತ್ತಾಯಿಸಿ ಮಾದಿಗ ಸಂಘಟನೆಗಳಿಂದ ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ ಮುಖ್ಯ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಸಮುದಾಯದ ಮುಖಂಡ ಶಿವಪ್ಪ ಸದಬ ಮಾತನಾಡಿ, ಹಲವಾರು ರಾಜ್ಯಗಳಲ್ಲಿ ಪರಿಶಿಷ್ಟ ಜಾತಿ ಹಾಗೂ ಪಂಗಡದ ಸಮುದಾಯಗಳಿಗೆ ಜನಸಂಖ್ಯೆಗೆ ಅನುಗುಣವಾಗಿ ಸಂವಿಧಾನಬದ್ಧವಾಗಿ ಮಿಸಲಾತಿ ಪ್ರಮಾಣ ಹೆಚ್ಚಿಸಿ ಅನುಷ್ಠಾನ ಗೊಳಿಸಲಾಗುತ್ತಿದೆ. ಆದರೆ, ಕರ್ನಾಟಕದಲ್ಲಿ ಮಾತ್ರ ದಶಕಗಳಿಂದ ಜನಸಂಖ್ಯೆಗೆ ಅನುಗುಣವಾಗಿ ನ್ಯಾಯದ ಪಾಲು ನೀಡದೆ ಕಾಂಗ್ರೆಸ್ ಸರಕಾರ ಮೋಸ ಮಾಡಲಾಗಿದೆ. ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಕುರಿತು ಸುಪ್ರೀಂ ಕೋರ್ಟ್ ನೀಡಿರುವ ನಿರ್ದೇಶನಗಳ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಕಾಯ್ದೆ ರೂಪಿಸಿ ರಾಜ್ಯಪಾಲರಿಂದ ಅಂಕಿತ ಪಡೆದಿದೆ. ಮಾದಿಗ ಸಮುದಾಯದ 35 ವರ್ಷಗಳ ಹೋರಾಟಕ್ಕೆ ದೊರೆತ ಐತಿಹಾಸಿಕ ನ್ಯಾಯವಾಗಿದೆ' ಆದರೆ ರಾಜ್ಯ ಸರ್ಕಾರ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ (56432) ಉದ್ಯೋಗವನ್ನು ಭರ್ತಿ ಮಾಡಿಕೊಳ್ಳಲು ನಿರ್ಧರಿಸಿದೆ. ನೇಮಕಾತಿಯಲ್ಲಿ ಒಳ ಮೀಸಲಾತಿ ಅನ್ವಯ ಆಗುವಂತೆ ರೋಸ್ಟರ್ ಪ್ರಕಾರ ಉದ್ಯೋಗ ಹಂಚಿಕೆಯಾದಲ್ಲಿ ಮಾತ್ರ ಮಾದಿಗ ಸಮಾಜಕ್ಕೆ ನ್ಯಾಯ ಸಿಕ್ಕಂತಾಗುತ್ತದೆ ಇಲ್ಲದಿದ್ದಲ್ಲಿ ಮಾದಿಗ ಸಮುದಾಯ ಸಂಕಷ್ಟಕ್ಕೆ ಸಿಲುಕುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಸವರಾಜ ಹಗರಟಗಿ ಮಾತನಾಡಿ, ಒಳ ಮೀಸಲಾತಿ ಜಾರಿಯಾಗಿ ಪ್ರಸ್ತುತ ಸರಕಾರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವಲ್ಲಿ ಒಳ ಮೀಸಲಾತಿ ಅನ್ವಯಯಾಗುವಂತೆ ಹುದ್ದೆಗಳು ಭರ್ತಿ ಮಾಡಿಕೊಳ್ಳಬೇಕು. ಒಂದು ವೇಳೆ ಸರಕಾರ ಇದನ್ನು ನಿರ್ಲಕ್ಷಿಸಿದರೆ ಮಾದಿಗ ತಾಳ್ಮೆಯ ಕಟ್ಟೆ ಹೊಡಿದು ಹೋಗಿದೆ. ಇನ್ನೂ ರಾಜ್ಯದಲ್ಲಿ ಉಗ್ರ ಹೋರಾಟ ಮಾಡಬೇಕಾಗುತ್ತದೆ. ಅದಕ್ಕಾಗಿ ಸರಕಾರ ತಕ್ಷಣ ಸಚಿವ ಸಂಪುಟದ ವಿಶೇಷ ಸಭೆ ಕರೆದು ಒಳಮಿಸಲಾತಿ ಬೇಡುತ್ತಿರುವ ಮಾದಿಗ ಸಂಬಂಧಿ ಜಾತಿಗಳಿಗೆ ಸುಪ್ರೀಂ ಕೋರ್ಟ್ ತೀರ್ಪಿನ ಆಧಾರದ ಮೇಲೆ ನ್ಯಾಯಮೂರ್ತಿ ಸದಾಶಿವ ಆಯೋಗದ ವರದಿಯ ಅಥವಾ ನ್ಯಾಯಮೂರ್ತಿ ನಾಗಮೋಹನ ದಾಸ್ ಆಯೋಗದ ಶಿಫಾರಸಿನ ಅನ್ವಯ ಮೀಸಲಾತಿ ಒದಗಿಸಬೇಕು' ಎಂದು ಆಗ್ರಹಿಸಿದರು.

ನಾಗರಾಜ ದೊಡ್ಡಮನಿ ಕೊಡೇಕಲ್ಲ ಮಾತನಾಡಿ, ಪರಿಶಿಷ್ಟ ಜಾತಿಗೆ ಮೀಸಲಾಗಿರುವ ಎಲ್ಲ ಕ್ಷೇತ್ರಗಳಲ್ಲಿ ಒಳ ಮೀಸಲಾತಿ ಅನುಷ್ಠಾನಗೊಳಿಸಬೇಕು. ಶಿಕ್ಷಣ ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿಯ ಮಕ್ಕಳಿಗೆ ವರ್ಗೀಕರಣದ ಅನುಪಾತದಲ್ಲಿ ಒಳ ಮೀಸಲಾತಿ ಸೌಲಭ್ಯ ನೀಡಬೇಕು. ಸಂವಿಧಾನದ ಅನುಚ್ಛೇದ 16(4) ರಂತೆ ಉದ್ಯೋಗ ಮೀಸಲಾತಿ ಎಂದರೆ ನೇರ ನೇಮಕಾತಿ, ಬಡ್ತಿ, ನೇಮಕಾತಿ ಮತ್ತು ಮುಂಬಡ್ತಿ, ಬ್ಯಾಲಾಗ್ ನೇಮಕಾತಿಗಳನ್ನು ಒಳಗೊಂಡಿದೆ. ಆದ್ದರಿಂದ ಎಲ್ಲ ಬಗೆಯ ನೇಮಕಾತಿಗಳನ್ನು ಆದಷ್ಟು ಬೇಗ ಮಾಡಬೇಕು. ದಲಿತರ ಹಕ್ಕೊತ್ತಾಯಕ್ಕೆ ಸರ್ಕಾರ ತಕ್ಷಣ ಸ್ಪಂದಿಸದಿದ್ದಲ್ಲಿ, ಮಾದಿಗ ಸಮುದಾಯವು ಸಾಮಾಜಿಕ ನ್ಯಾಯಕ್ಕಾಗಿ ರಾಜ್ಯದಾದ್ಯಂತ ಉಗ್ರ ಸದವರೂಪದ ಪ್ರತಿಭಟನೆ ನಡೆಸಲಿದೆ' ಎಂದು ಎಚ್ಚರಿಸಿದರು.

# ಕವಿಗಳು ನಾಟಕರಂಗ ಸಾಹಿತ್ಯದಲ್ಲಿ ಶ್ರೀಮಂತರು ವೃತ್ತಿ ರಂಗದಲ್ಲಿ ಬಡವರು: ದಾನಕ್ಕೈ



• ಮಲ್ಲಮ್ಮ ನುಡಿ ವಾರ್ತೆ ಯಲಬುರ್ಗಾ

ಕವಿ, ಸಾಹಿತಿಗಳು, ನಾಟಕ ಕಂಪನಿಗಳ ವಿವಿಧ ಕಲಾವಿದರು ತಮ್ಮ ಕಲಾವಿದರ ಕ್ಷೇತ್ರದಲ್ಲಿ ಶ್ರೀಮಂತರಾಗಿದ್ದಾರೆ ಆದರೆ ವೃತ್ತಿ ಜೀವನದಲ್ಲಿ ಬಡವರಾಗಿದ್ದಾರೆ ಎಂದು ಸೂಳೆಭಾವಿ ಪಿ.ಬಿ.ಧುತ್ತರಗಿ ಟ್ರಸ್ಟ್ ಅಧ್ಯಕ್ಷ ಎಸ್.ಕೆ.ಕೊನಸಾಗರ ಅವರು ಅಧ್ಯಕ್ಷತೆ ವಹಿಸಿ ಅವರು ಯಲಬುರ್ಗಾದ ಸ್ನಾತಕೋತ್ತರ ಕೇಂದ್ರದಲ್ಲಿ ಕವಿ ಧುತ್ತರಗಿ ಅವರ ತಾಯಿಯ ಕರುಳು ನಾಟಕ, ವಿದ್ಯಾರ್ಥಿಗಳಿಂದ ಓದು ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು. ಪಿ.ಭಿ.ಧುತ್ತರಗಿ ಅವರ ಸಮಗ್ರ ಜೀವನ ಚರಿತ್ರೆ ಬಗ್ಗೆ , ಕೊಪ್ಪಳ ವಿಶ್ವವಿದ್ಯಾಲಯದ ಪ್ರಭಾರಿ ಎಸ್.ಎ ಡಾನಿ ಅವರು ಮಾತನಾಡಿ , ಈ ಕವಿ 31 ಸಾಮಾಜಿಕ,9 ಐತಿಹಾಸಿಕ,5 ಪೌರಾಣಿಕ, 7 ಭಕ್ತಿ ಪ್ರಧಾನ ನಾಟಕಗಳನ್ನು ರಚಿಸಿ ರಂಗ ಭೂಮಿಗೆ ಹೊಸ ಮೇರಗು ತಂದಿದ್ದಾರೆ ಎಂದರು. ಹಂಪಿ ಕನ್ನಡ ವಿಶ್ವ ವಿದ್ಯಾಲಯದ ಪ್ರಾಧ್ಯಾಪಕ ಪ್ರೋ.ವೆಂಕಟಗೀರಿ ದಳವಾಯಿ ಉಪನ್ಯಾಸ ನೀಡಿದರು.

ಸ್ನಾತಕೋತರ ಕೇಂದ್ರದ ಆಡಳಿತಾಧಿಕಾರಿ ಕೆ.ಎಚ್.ಛತ್ರದ, ಪಿ.ಬಿ.ಡಿ ಸಂಚಾಲಕ ಸಿದ್ದಪ್ಪ ಮಾದರ ಮಾತನಾಡಿದರು. ಸದಸ್ಯರಾದ ಸಿದ್ದಲಿಂಗಪ್ಪ ಬೀಳಗಿ, ಸುನಂದಾ ಕಂದಗಲ್ಲ, ಪಿ.ಜಿ.ಸೇಂಟರ ಸಿಬ್ಬಂದಿಗಳಾದ ಡಾ.ರವೀಂದ್ರ ಬೇಟಗೇರಿ, ಪ್ರಹ್ಲಾದ.ಡಿ.ಎಂ, ಡಾ.ನಾಗಪ್ಪ ಹೂವಿನಭಾವಿ, ಡಾ.ತಿಮ್ಮಾರಡ್ಡಿ.ಟಿ, ಡಾ.ಕಾಳಮ್ಮ ಸೇರಿದಂತೆ ಇತರರು ಉಪಸ್ಥಿತರಿದ್ದರು. ಶರಣಪ್ಪ.ಡಿ.ಗೌಡ್ರ ನಿರೂಪಿಸಿದರು. ಶೃತಿ ಹಾಗು ರೇಖಾ ಬೇವಿನಹಳ್ಳಿ ವಂದಿಸಿದರು.14 ವಿದ್ಯಾರ್ಥಿಗಳಿಂದ ಓದು ಉಪನ್ಯಾಸ ಜರುಗಿತು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

# ಕರುನಾಡಿನಲ್ಲಿ ನೆಮ್ಮದಿಯ ಗ್ಯಾರಂಟಿ

## ಉತ್ತಮ ಕಲಿಕೆ ಉಜ್ವಲ ಭವಿಷ್ಯ





- 1ನೇ ತರಗತಿಯಿಂದಲೇ ಮಕ್ಕಳಿಗೆ **ಕಂಪ್ಯೂಟರ್ ಶಿಕ್ಷಣ**
- ಬಿಸಿಯೂಟ, ಹಾಲು, ರಾಗಿ ಮಾಲ್ಟ್ ಜೊತೆಗೆ ವಾರದ 6 ದಿನವೂ **ಮಕ್ಕಳಿಗೆ ಮೊಟ್ಟೆ** ವಿತರಣೆ
- ವಿದ್ಯಾರ್ಥಿಗಳ ಫಲಿತಾಂಶ ಹೆಚ್ಚಿಸಲು ಶಿಕ್ಷಣ ಕೋಪೈಲಟ್ ಆ್ಯಪ್ ರಚನೆ
- **4,056** ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ, ಯುಕೆಜಿ ಆರಂಭ
- ಮುಂದಿನ ವರ್ಷದಿಂದ ಎಲ್ಲ ಶಾಲೆಗಳಲ್ಲಿ ಮೌಲ್ಯ ಶಿಕ್ಷಣ ಜಾರಿ
- ಕಾರ್ಮಿಕರ ಮಕ್ಕಳಿಗೆ **ಉಚಿತ ಊಟ ಮತ್ತು ವಸತಿ** ಶಾಲೆ ಆರಂಭ
- ವಿದ್ಯಾಸಿರಿ ಯೋಜನೆಯ ಮೊತ್ತ **₹. 2,000** ಕ್ಕೆ ಹೆಚ್ಚಳ
- ಸರ್ಕಾರಿ ಶಾಲೆಗಳಲ್ಲಿ ಸ್ಪೋಕನ್ ಇಂಗ್ಲಿಷ್ ತರಗತಿಗಳ ಪರಿಚಯ
- ಪ್ರತಿಯೊಬ್ಬ ವಿದ್ಯಾರ್ಥಿಯು ಶಾಲೆಗೆ ಬರುವುದನ್ನು ಖಾತರಿಪಡಿಸಲು **ಇ - ಹಾಜರಾತಿ ಜಾರಿ**
- ಸರ್ಕಾರಿ ಶಾಲೆಗಳ ಅಭಿವೃದ್ಧಿಗಾಗಿ ನಮ್ಮ ಶಾಲೆ **ನಮ್ಮ ಜವಾಬ್ದಾರಿ** ಯೋಜನೆ
- 2025 - 26ನೇ ಸಾಲಿನಲ್ಲಿ **900 ಸರ್ಕಾರಿ ಶಾಲೆ**ಗಳನ್ನು ಕೆಪಿಎಸ್ ಶಾಲೆಗಳಾಗಿ ಉನ್ನತೀಕರಿಸಲು ಕ್ರಮ

## ಕರ್ನಾಟಕ ನವ ನಿರ್ಮಾಣಕ್ಕೆ ಗ್ಯಾರಂಟಿ ಸರ್ಕಾರ...

**ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿ ಮಾಡುತ್ತಾ ನುಡಿದಂತೆ ನಡೆದು ಜನರ ವಿಶ್ವಾಸ ಗಳಿಸಿದ್ದೇವೆ.**

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ

ಗಡಿ ಭಾಗದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು